ಸಂಪುಟ: 04 ಸಂಚಿಕೆ: 182 ಪುಟಗಳು: 08 ಶನಿವಾರ 14 ಸೆಪ್ಟೆಂಬರ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು

ಬದುಕುವ ಆಸೆ ಇದ್ದರೆ ನಿನ್ನ ಶತ್ರುಗಳ ಕಣ್ಣೆದುರಲ್ಲೆ ಬದುಕು. ಅವರು ನಿನ್ನೆದುರಲ್ಲಿ ಸುಳಿದಾಗಲೆಲ್ಲ ನಿನ್ನಲ್ಲಿ ಬದುಕುವ ಛಲ ಎಚ್ಚೆತ್ತುಕೊಳ್ಳುತ್ತದೆ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ನಾವೂ ಪೆಟ್ರೋಲ್ ಬಾಂಬ್, ತಲ್ವಾರ್ ಹಿಡಿಯಬೇಕಾಗುತ್ತದೆ

• ಉದಯವಾಹಿನಿ, ಮಂಡ್ಯ

ಮಂಡ್ಯದ ನಾಗಮಂಗಲದಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ಗಲಭೆ ಪ್ರಕರಣ ಕ್ಷಣಕ್ಕೊಂದು ತಿರುವು ಪಡೆದುಕೊಳ್ಳುತ್ತಿದ್ದು, ಇದೀಗ ಈ ವಿಚಾರ ರಾಜಕೀಯ ತಿರುವು ಪಡೆದುಕೊಂಡಿದೆ. ನಾಗಮಂಗದಲ್ಲಿ ಗಣೇಶ ವಿಸರ್ಜನೆ ವೇಳೆ ಕಿಡಿಗೇಡಿಗಳು ಬೈಕ್ ಶೋ ರೂಂ ಗಾಜುಗಳನ್ನು ಒಡೆಯುವುದಲ್ಲಿ, ಅಲ್ಲಿದೆ ಬೈಕ್‌ಗಳನ್ನು ಸುಟ್ಟುಹಾಕಿದ್ದಾರೆ.

ಇನ್ನೂ ಈ ಸಂಬಂಧ ಪೊಲೀಸರು ಇಲ್ಲಿಯ ವರೆಗೂ 50ಕ್ಕೂ ಹೆಚ್ಚು ಮಂದಿಯನ್ನು ಬಂಧಿಸಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಅಲ್ಲದೆ ಇದು ಇದೀಗ ರಾಜಕೀಯ ತಿರುವು ಪಡೆದುಕೊಂಡಿದೆ. ಮುಸ್ಲಿಮರ ಬಳಿ ಇರುವ ಪೆಟ್ರೋಲ್ ಬಾಂಬ್, ತಲ್ವಾರ್ ಕಿತ್ತು ಕೊಳ್ಳಬೇಕು. ಇಲ್ಲದಿದ್ರೆ, ಇನ್ಮುಂದೆ ನಡೆಯುವ ಗಣೇಶ ಮೆರವಣಿಗೆ ಸಂದರ್ಭದಲ್ಲಿ ಪೆಟ್ರೋಲ್ ಬಾಂಬ್, ತಲ್ವಾರ್ ಹಿಡಿಯಬೇಕಾಗುತ್ತದೆ. ಎಂದು ಆಕ್ರೋಶ ಹೊರಹಾಕಿದ್ದಾರೆ.

ರಾಜ್ಯ ಗೃಹ ಇಲಾಖೆಯು ಎಸ್ ಡಿಪಿಐ ಕಪಿಮುಷ್ಠಿಯಲ್ಲಿ ಸಿಲುಕಿದೆ

• ಉದಯವಾಹಿನಿ, ಬೆಳಗಾವಿ

ನಾಗಮಂಗಲ, ಶಿವಮೊಗ್ಗ ಸೇರಿದಂತೆ ರಾಜ್ಯದಲ್ಲಿ ನಡೆದಿರುವ ಘಟನೆಗಳನ್ನು ನೋಡಿದರೆ ಗೃಹ ಇಲಾಖೆ ಎಸ್ ಡಿಪಿಐ ಕಪಿ ಮುಷ್ಠಿಯಲ್ಲಿ ಸಿಲುಕಿರುವ ಅನುಮಾನ ಮೂಡಿದೆ ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ, ಶಾಸಕ ವಿ.ಸುನೀಲ್ ಕುಮಾರ್ ಗಂಭೀರ ಆರೋಪ ಮಾಡಿದ್ದಾರೆ. ಕರ್ನಾಟಕವನ್ನು ಇನ್ನೊಂದು ತಾಲಿಬಾನ್ ಅಥವಾ ಬಾಂಗ್ಲಾ ಆಗಲು ಬಿಡಬೇಡಿ. ನಾಗಮಂಗಲ ಘಟನೆಯ ನಂತರ ರಾಜ್ಯದಲ್ಲಿ ಆತಂಕದ ಸ್ಥಿತಿ ನಿರ್ಮಾಣವಾಗಿದೆ. ಹಿಂದೂ ಸಮಾಜದ ಚಟುವಟಿಕೆಗಳನ್ನು ನಡೆಸಲು ಸಾಧ್ಯವಾಗದ ಸನ್ನಿವೇಶ ಕಾಣುತ್ತಿದೆ. ಇದು ಪೂರ್ವ ನಿಯೋಜಿತ ಕೃತ್ಯ. ಆದರೆ ಇದು ಸಣ್ಣ ಘಟನೆ ಎನ್ನುವ ಮೂಲಕ ಗೃಹ ಸಚಿವರು ಓಲೈಕೆ ರಾಜಕಾರಣ ಮಾಡುತ್ತಿದ್ದಾರೆ ಎಂದರು. ಇದುವರೆಗೆ ಕರ್ನಾಟಕದ ಯಾವುದೇ ಭಾಗದಲ್ಲಿ ಈದ್ ಮಿಲಾದ್ ಮೆರವಣಿಗೆ ಮೇಲೆ ಕಲ್ಲು ತೂರಾಟವಾಗಿಲ್ಲ. ಮುಂದೆಯೂ ಆಗಬಾರದು. ಆದರೆ ಸರಕಾರದ ಮೃದು ಧೋರಣೆಯ ಪರಿಣಾಮ ಮತಾಂಧರಿಗೆ ಈ ರೀತಿಯ ಧೈರ್ಯ ಬಂದಿದೆ. ನಾಗಮಂಗಲ ಘಟನೆಯಲ್ಲಿ ಹಾನಿಗೊಳಗಾದ ಅಂಗಡಿಗಳಿಗೆ ಕೂಡಲೇ ಪರಿಹಾರ ಕೊಡಬೇಕು ಎಂದು ಸುನೀಲ್ ಕುಮಾರ್ ಒತ್ತಾಯಿಸಿದರು.

ಸಿಜೆಐ ಮನೆಗೆ ಪ್ರಧಾನಿ ಹೋಗ ಬಾರದೆಂಬ ನಿಯಮ ಇದೆಯೇ?

• ಉದಯವಾಹಿನಿ, ಹುಬ್ಬಳ್ಳಿ

ಧಾರ್ಮಿಕ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಪ್ರಧಾನಿಯವರು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಅವರ ನಿವಾಸಕ್ಕೆ ಹೋಗಿದ್ದಾರೆ. ಮುಖ್ಯ ನ್ಯಾಯಮೂರ್ತಿ ಅವರ ನಿವಾಸಕ್ಕೆ ಹೋಗಬಾರದು ಎಂಬ ನಿಯಮ ಏನಾದರು ಇದೆಯೇ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಪ್ರಶ್ನೆಸಿದರು. ಯುಪಿಎ ಸರ್ಕಾರದ ಅವಧಿಯಲ್ಲಿ ಸಿಜೆಐ ಇಫ್ತಿಯಾರ್ ಕೂಟದಲ್ಲಿ ಪಾಲ್ಗೊಂಡರೆ ನಡೆಯುತ್ತದೆ, ಗಣೇಶ ಪೂಜೆಗೆ ಮುಖ್ಯ ನ್ಯಾಯಮೂರ್ತಿಗಳ ನಿವಾಸಕ್ಕೆ ಪ್ರಧಾನಿಗಳು ಹೋಗಬಾರದು ಎಂದರೆ ಹೇಗೆ. ಕಾಂಗ್ರೇಸ್ ಮತಬ್ಯಾಂಕ್‌ಗೆ ಅನು ಕೂಲವಿರುವುದಿದ್ದರೆ ಸುಮ್ಮನಿರುತ್ತದೆ. ಪ್ರಧಾನಿ ಗಣೇಶ ಪೂಜೆ ಹೋದರೆ ಟೀಕೆ ಮಾಡಲಾಗುತ್ತದೆ ಎಂದರು. ಕಾಂಗ್ರೇಸ್ ನಲ್ಲಿ ಕುಟುಂಬ ರಾಜಕಾರಣವೇ ಇರುವುದು. ಮಲ್ಲಿಕಾರ್ಜುನ ಖರ್ಗೆ ನಾಮಕವಾಸ್ತೆ ಅಧ್ಯಕ್ಷ ಮಾತ್ರ. ರಾಹುಲ್ ಗಾಂಧಿ ಪ್ರಧಾನಿ ಆಗುವುದಿಲ್ಲ ಖರ್ಗೆ ಪ್ರಧಾನಿ ಆಗುತ್ತಾರೆ ಎಂದು ಹೇಳಲಿ ನೋಡೋಣ ಎಂದು ಸವಾಲು ಹಾಕಿದರು.

ಭಾರತ ವಿರೋಧಿಗಳಿಗೆ ಶೇಕ್ ಹ್ಯಾಂಡ್ ಮಾಡೋದೇ ರಾಹುಲ್ ಗಾಂಧಿ ಕೆಲಸ

• ಉದಯವಾಹಿನಿ, ಬೆಂಗಳೂರು

ನಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿಯವರು ಅಮೆರಿಕದಲ್ಲಿ ಭಾರತದ ವಿರುದ್ಧ ಮಾತನಾಡಿದ್ದು, ಇದನ್ನು ದೇಶ ಗಂಭೀರವಾಗಿ ಪರಿಗಣಿಸುತ್ತಿದೆ. ರಾಹುಲ್ ಗಾಂಧಿಯವರ ಮಾತುಗಳು ಸುಳ್ಳಿನಿಂದ ಕೂಡಿರುವುದಷ್ಟೇ ಅಲ್ಲದೆ, ಭಾರತವನ್ನು ವಿರೋಧಿಸುವ ಶಕ್ತಿಗಳಿಗೆ ಹೊಸ ಜೀವ ನೀಡಿ ಹೊಸ ಶಕ್ತಿ ಕೊಟ್ಟಂತೆ ಕಾಣಿಸುತ್ತಿದೆ ಎಂದು ಬಿಜೆಪಿ ಯುವ ಮೋರ್ಚಾ ರಾಷ್ಟ್ರೀಯ ಅಧ್ಯಕ್ಷ ಮತ್ತು ಸಂಸದ ತೇಜಸ್ವಿಸೂರ್ಯ ಅವರು ಆಕ್ಷೇಪಿಸಿದರು. ವಿದೇಶದಲ್ಲಿ ರಾಹುಲ್ ಗಾಂಧಿಯವರನ್ನು ಭೇಟಿ ಮಾಡಿದ ವ್ಯಕ್ತಿಗಳ ಹಿನ್ನೆಲೆಯನ್ನು ಗಮನಿಸಿದರೆ, ಯಾರು ಭಾರತದ ವಿರೋಧಿಗಳಿದ್ದಾರೋ ಅವರ ಜೊತೆ ರಾಹುಲ್ ಗಾಂಧಿಯವರು ಸ್ನೇಹಿತರಾಗಿರುವುದು ಸ್ಪಷ್ಟ ಗೊಳ್ಳುತ್ತದೆ ಎಂದು ತಿಳಿಸಿದರು.

ನಾಗಮಂಗಲ ಕೈ ಸಂಚು

ಗಣೇಶ ಮೆರವಣಿಗೆ ವೇಳೆ ಪಟ್ಟಣದಲ್ಲಿ ನಡೆದ ಗಲಭೆ ಪೂರ್ವಯೋಜಿತ ಕೃತ್ಯ, ವ್ಯವಸ್ಥಿತ ಪಿತೂರಿ. ಅಷ್ಟೇ ಅಲ್ಲ ಇದು ಕಾಂಗ್ರೇಸ್ ಪ್ರಾಯೋಜಿತ ಗಲಭೆ ಎಂದು ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್. ಡಿ.ಕುಮಾರಸ್ವಾಮಿ ನೇರ ಆರೋಪ ಮಾಡಿದ್ದಾರೆ. ನಾಗಮಂಗಲದ ಗಲಭೆ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದ ಅವರು ದುಷ್ಕರ್ಮಿಗಳ ದಾಳಿಗೆ ತುತ್ತಾದ ಅಂಗಡಿ, ಮಳಿಗೆಗಳನ್ನು ವೀಕ್ಷಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಆತ ತ್ರಿಕಾಲಜ್ಞಾನಿಯೇ?

ದೂರು ನೀಡಿರುವ ಅಧಿಕಾರಿ ರವಿಗೆ ರಾತ್ರಿ 1.30ರಲ್ಲಿ ಎಫ್‌ಐಆರ್‌ನಲ್ಲಿ ಉಲ್ಲೇಖವಾಗಿರುವ ವ್ಯಕ್ತಿಗಳ ಹೆಸರುಗಳು ಹೇಗೆ ಗೊತ್ತು? ಪೆಟ್ಟು ತಿಂದು ಚಿಕಿತ್ಸೆ ಪಡೆಯುತ್ತಿದ್ದ ಅವರಿಗೆ ಅಷ್ಟು ಜನರ ಹೆಸರುಗಳು ನೆನಪಾಗಿದ್ದು ಹೇಗೆ? ಆತನಿಗೆ ಎಷ್ಟು ನೆನಪಿನ ಶಕ್ತಿ ಇದೆ! ಆತನೇನು ತ್ರಿಕಾಲಜ್ಞಾನಿಯೇ? ಎಂದು ಕೇಂದ್ರ ಸಚಿವರು ಅಚ್ಚರಿ ವ್ಯಕ್ತಪಡಿಸಿದರು. ಪ್ರತಿಯೊಂದರಲಿಯೂ ಕಾಂಗ್ರೇಸ್ ರಾಜಕೀಯ ಮಾಡುತ್ತಿದೆ. ಇಲ್ಲಿ ಅಮಾಯಕ ಜನರ ಬದುಕು ಬೀದಿಗೆ ಬಂದಿದೆ. ಗಲಭೆಯಲ್ಲಿ ಪೊಲೀಸರನ್ನು ಕೊಲೆ ಮಾಡಲು ಬಂದಿದ್ದಾರೆ ಎಂದು ಎಫ್‌ಐಆರ್‌ನಲ್ಲಿ ಬರೆದಿದ್ದಾರೆ. ಪೊಲೀಸರಿಗೆ ಭದ್ರತೆ ನೀಡದ ದರಿದ್ರ ಸರ್ಕಾರ ರಾಜ್ಯದಲ್ಲಿದೆ. ಆಗಿರುವ ಲೋಪ ಒಪ್ಪಿಕೊಳ್ಳುವುದು ಬಿಟ್ಟು ಸಮುದಾಯಗಳ ನಡುವೆ ಕಂದಕ ತೊಡುವುದು ಸರಿಯಲ್ಲ ಎಂದು ಅವರು ಕಿಡಿಕಾರಿದರು.

ಅಧಿಕಾರಿ ಅಮಾನತು ಕಣ್ಣೊರೆಸುವ ತಂತ್ರ

ನಾನು ನಾಗಮಂಗಲಕ್ಕೆ ಬರುತ್ತೇನೆ ಎಂದು ಗುರುವಾರವೇ ಹೇಳಿದ್ದೆ. ಅಂದು ಸಂಜೆ ಬಿಜೆಪಿ ನಾಯಕರು ಸ್ಥಳಕ್ಕೆ ಬಂದಿದ್ದರು. ಅದಕ್ಕಾಗಿಯೇ ಇನ್ಸ್ಪೆಕ್ಟರ್ ಅಶೋಕ್ ರನ್ನು ಸಸ್ಪೆಂಡ್ ಮಾಡಿದ್ದಾರೆ. ಇದು ಕಣ್ಣೊರೆಸುವ ತಂತ್ರ ಎಂದರು. ಮಸೀದಿ ಬಳಿ 10 ನಿಮಿಷ ಡಾನ್ಸ್ ಮಾಡಲು ಬಿಟ್ಟವರು ಯಾರು? ಆಗ ಪೊಲೀಸರು ಏನು ಮಾಡುತಿದ್ದರು? ಹೆಚ್ಚುವರಿ ಪೊಲೀಸರು ಇದ್ದರೆ ಪರಿಸ್ಥಿತಿ ನಿಯಂತ್ರಣ ಮಾಡಬಹುದಿತ್ತು. ಮೆರವಣಿಗೆ ವೇಳೆ ಇನಸ್ಪೆಕ್ಟರ್, ಡಿವೈಎಸ್ಪಿ ಯಾರೂ ಇರಲಿಲ್ಲ. ಆದರೆ ಎಫ್‌ಐಆರ್‌ನಲ್ಲಿ ಅವರು ಇದ್ದರು ಎಂದು ಬರೆಯಲಾಗಿದೆ. ಇದು ಯಾವ ಜಾದು? ಎಂದು ಪ್ರಶ್ನಿಸಿದರು.

• ಉದಯವಾಹಿನಿ, ನಾಗಮಂಗಲ

ವ್ಯವಸ್ಥಿತವಾಗಿ ಗಲಭೆಗಳನ್ನು ಸೃಷ್ಟಿ ಮಾಡುವುದು ಕಾಂಗ್ರೇಸ್ಗೆ ಕರತಲಾಮಲಕ. ಹಿಂದಿನಿಂದಲೂ ಅದನ್ನು ಮಾಡಿಕೊಂಡು ಬಂದಿದೆ. 1990ರಲ್ಲಿ ಅಂದಿನ ಮುಖ್ಯಮಂತ್ರಿ ವೀರೇಂದ್ರ ಪಾಟೀಲ್ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ರಾಮನಗರ, ಚನ್ನಪಟ್ಟಣದಲ್ಲಿ ಕೋಮುಗಲಭೆ ಸೃಷ್ಟಿಸಿ ಬೆಂಕಿ ಹಾಕಲಾಗಿತ್ತು. ಅವಳಿ ಪಟ್ಟಣಗಳು ಹೊತ್ತಿ ಉರಿದವು. ಅದೇ ಮಾದರಿಯಲ್ಲಿ ನಾಗಮಂಗಲದಲ್ಲಿ ಗಲಭೆ ಎಬ್ಬಿಸಲಾಗಿದೆ ಎಂದು ಆರೋಪಿಸಿದರು.

ಡಿಜಿ ಹಳ್ಳಿ ಪೊಲೀಸ್ ಠಾಣೆಗೆ ಬೆಂಕಿ ಇಟ್ಟು ಸುಟ್ಟು ಹಾಕಲಾಯಿತು. ಅದಕ್ಕೂ ಕಾಂಗ್ರೇಸ್ ನಾಯಕರೇ ಕಾರಣ. ಆ ಪ್ರಕರಣದಲ್ಲಿ ಜೈಲಿಗೆ ಹೋದವರು ಏನಾಗಿದ್ದಾರೋ ಗೊತ್ತಿಲ್ಲ. ನಾಗಮಂಗಲದಲ್ಲಿ ಈಗ ಯಾವ ದುರುದ್ದೇಶ ಇಟ್ಟುಕೊಂಡು ಗಲಭೆ ಸೃಷ್ಟಿಸಿದ್ದಾರೋ ಗೊತ್ತಿಲ್ಲ ಎಂದರು.

ನಾಗಮಂಗಲದಲ್ಲಿಯೂ ಕಾಂಗ್ರೇಸ್ ಚಿತಾವಣೆಯ ಬಗ್ಗೆ ಅನುಮಾನ ಇದೆ. ಈಗ ಚನ್ನಪಟ್ಟಣದಲ್ಲಿ ಉಪ ಚುನಾವಣೆ ಬರುತ್ತಿದೆ. ಬೇರೆ ಬೇರೆ ಘಟನೆಗಳು ಕೂಡ ನಡೆಯುತ್ತಿವೆ. ಹೀಗಾಗಿ ಒಂದು ಸಮುದಾಯದ ಓಲೈಕೆ ಮಾಡಲು ಈ ಸಂಚು ರೂಪಿಸಿರಬಹುದು. ಇಡೀ ಘಟನೆಯನ್ನು ನೋಡಿದರೆ ನಾಗಮಂಗಲದ ಕೃತ್ಯದ ಹಿಂದೆ ಕಾಂಗ್ರೇಸ್ ಇದೆ ಎಂದು ಶಂಕೆ ವ್ಯಕ್ತಪಡಿಸಿದರು.

ಈ ಘಟನೆಗೆ ರಾಜ್ಯ ಕಾಂಗ್ರೇಸ್ ಸರ ಕಾರದ ಆಡಳಿತ ವೈಫಲ್ಯ ಹಾಗೂ ಸ್ಥಳೀಯ ಪೊಲೀಸರ ಕರ್ತವ್ಯ ಲೋಪವೂ ಕಾರಣ ಎಂದ ಅವರು, ನಿಜವಾದ ದುಷ್ಕರ್ಮಿಗಳನ್ನು ಬಂಧಿಸಿ ಅವರಿಗೆ ಶಿಕ್ಷೆಯಾಗಲು ಪೊಲೀಸರು ಕೆಲಸ ಮಾಡಬೇಕು ಎಂದರು.

ಗಲಭೆಯ ಎಫ್‌ಐಆರ್ ಪ್ರತಿಯನ್ನು ಹಿಡಿದು ಮಾತನಾಡಿದ ಎಚ್ಡಿಕೆ, ಆರೋಪ ಪಟ್ಟಿ ಸಂಪೂರ್ಣ ಲೋಪದಿಂದ ಕೂಡಿದೆ. ಪೊಲೀಸರ ವರ್ತನೆ ಸಂಶಯಾಸ್ಪದವಾಗಿದೆ ಎಂದು ಹೇಳಿದರು. ಕೇವಲ 100-150 ಜನ ಇದ್ದ ಮೆರವಣಿಗೆಗೆ ಸ್ಥಳೀಯ ಪೊಲೀಸರಿಗೆ ಭದ್ರತೆ ಒದಗಿಸಲು ಸಾಧ್ಯವಾಗಿಲ್ಲ. ಸ್ಥಳದಲ್ಲಿ ಗಲಾಟೆ ಆರಂಭವಾಗುವುದಕ್ಕೆ ಕೇವಲ ಹತ್ತು ನಿಮಿಷಗಳ ಮೊದಲು ಮೀಸಲು ಪೊಲೀಸ್ ಪಡೆಯನ್ನು ಬೇರೆಡೆಗೆ ಕಳಿಸಲಾಗಿದೆ. ಅಲ್ಲದೆ ಸ್ಥಳೀಯ ಪೊಲೀಸ್ ಇನ್ಸ್ಪೆಕ್ಟರ್ ಹಾಗೂ ಡಿವೈಎಸ್ಪಿ ಸ್ಥಳದಲ್ಲೇ ಇರಲಿಲ್ಲ ಎಂದು ಸ್ಥಳೀಯರೇ ಹೇಳಿದ್ದಾರೆ. ಹಾಗಾದರೆ ಈ ಇಬ್ಬರು ಅಧಿಕಾರಿಗಳು ಎಲಿದ್ದರು? ಮೀಸಲು ಪಡೆಯನ್ನು ಬೇರೆಡೆಗೆ ಕಳಿಸಿದ್ದು ಯಾಕೆ? ಎಂದು ಪ್ರಶ್ನಿಸಿದರು.

ಹತ್ತೇ ನಿಮಿಷದಲ್ಲಿ ಕಲ್ಲು, ಪೆಟ್ರೋಲ್ ಬಾಂಬ್ಗಳು ಎಲ್ಲಿಂದ ಬಂದವು? ಎಂದು ಅನುಮಾನ ವ್ಯಕ್ತಪಡಿಸಿ, ಮೆರವಣಿಗೆ ಹೊರಟಿದ್ದವರ ಮೇಲೆ ಕಲ್ಲು, ಚಪ್ಪಲಿ, ಪೆಟ್ರೋಲ್ ಬಾಂಬ್ ಗಳನ್ನು ಎಸೆಯಲಾಗಿದೆ. ಕೇವಲ ಹತ್ತು ನಿಮಿಷದಲ್ಲಿ ಅಷ್ಟು ಪ್ರಮಾಣದ ಕಲ್ಲು, ಚಪ್ಪಲಿ, ಕಬ್ಬಿಣದ ಪೈಪ್ ಗಳು, ಪೆಟ್ರೋಲ್ ಬಾಂಬ್ ಗಳು ಎಲ್ಲಿಂದ ಬಂದವು? ಹತ್ತೇ ನಿಮಿಷದಲ್ಲಿ ಇವನ್ನೆಲ್ಲಾ ಸಂಗ್ರಹ ಮಾಡಿಕೊಳ್ಳಲು ಸಾಧ್ಯವೇ? ಇಡೀ ಗಲಭೆಯ ರೀತಿಯನ್ನು ನೋಡಿದರೆ ಹಿಂದೆ ದೊಡ್ಡ ಪಿತೂರಿ ಅಡಗಿರುವಂತೆ ತೋರುತ್ತದೆ ಎಂದರು.

ಇಷ್ಟೊಂದು ದೊಡ್ಡ ಗಲಭೆ ಆಗಿದೆ. ಯೋಜಿತವಾಗಿ ಅಂಗಡಿ ಗಳಿಗೆ ಬೆಂಕಿ ಹಚ್ಚಲಾಗಿದೆ. ಆದರೂ ಇವರೂ ಸಣ್ಣ, ಆಕಸ್ಮಿಕ ಘಟನೆ ಎನ್ನುತ್ತಾರೆ, ಇವರನ್ನು ಗೃಹ ಸಚಿವರು ಎಂದು ಕರೆಯಬೇಕೆ? ಎಂದು ಆಕ್ರೋಶ ವ್ಯಕ್ತಪಡಿಸಿದರು. ಕಾಂಗ್ರೇಸ್ ನಾಯಕರು ತಮ್ಮ ನಡವಳಿಕೆಯನ್ನು ಸರಿ ಮಾಡಿಕೊಳ್ಳಬೇಕು. ಹಳೆ ಮೈಸೂರು ಭಾಗದಲ್ಲಿ ಎರಡೂ ಸಮುದಾಯದ ಜನರು ಸೌಹಾರ್ದತೆಯಿಂದ ಜೀವನ ಮಾಡುತ್ತಿದ್ದಾರೆ. ರಾಜ ಕೀಯಕ್ಕಾಗಿ ಜನರ ಬದುಕು ಛಿದ್ರ ಮಾಡಬೇಡಿ. ಇದು ಸಣ್ಣ ವಿಷಯ. ಇದಕ್ಕೆ ಮಹತ್ವ ಕೊಡುವುದು ಬೇಡ ಎನ್ನುತ್ತಾರೆ ಗೃಹ ಸಚಿವರು. ಈ ರೀತಿ ಹೇಳಿಕೆ ಮೂಲಕ ಜನರಿಗೆ ಯಾವ ಸಂದೇಶ ಕೊಡುತ್ತಾರೆ ಅವರು? ಮೆರವಣಿಗೆಗೆ ಅನುಮತಿ ಕೊಟ್ಟಿರುವುದೇ ನೀವು. ಮೆರವಣಿಗೆಗೆ ಭದ್ರತೆ ಕೊಡಬೇಕಾದ ಹೊಣೆಯೂ ನಿಮದೇ. ಘಟನೆ ಸ್ಥಳದಲ್ಲಿ ಆಗ ಎಷ್ಟು ಜನ ಪೊಲೀಸರನ್ನು ನಿಯೋಜನೆ ಮಾಡಿದ್ದಿರಿ? ನಿಮ ಇನಸ್ಪೆಕ್ಟರ್ ಎಲ್ಲಿ ಇದ್ದರು. ಘಟನೆಗೂ ಮುನ್ನ ಇಲ್ಲಿದ್ದ ಮೀಸಲುಪಡೆ ವಾಹನವನ್ನು ವಾಪಸ್ ಕರೆಸಿಕೊಂಡಿದ್ದಾರೆ. ಘಟನೆ ನಡೆದ ಒಂದು ಗಂಟೆಗೆ ವಿಷಯ ಮಾಧ್ಯಮದವರಿಗೆ ಗೊತ್ತಾಗುತ್ತದೆ. ಪೊಲೀಸರಿಗೆ ಯಾಕೆ ಗೊತ್ತಾಗಿಲ್ಲ? ಈ ಬಗ್ಗೆ ಉನ್ನತ ಮಟ್ಟದ ತನಿಖೆಯಾಗಬೇಕು ಎಂದು ಒತ್ತಾಯಿಸಿದರು.

ಸರಕಾರ ಸರಿಯಾಗಿ ಅಂದಾಜು ಮಾಡಿ ಕನಿಷ್ಠ ಶೇ.70ರಿಂದ 80ರಷ್ಟು ಪರಿಹಾರ ಕೊಡಬೇಕು. ನಾನು ಕೊಡುವುದು ಆರಂಭದಲ್ಲಿ ಅವರ ಜೀವನೋಪಾಯಕ್ಕೆ ಮಾತ್ರ. ಅನೇಕ ವ್ಯಾಪಾರಿಗಳು ಇಡೀ ಅಸ್ತಿಯನ್ನೇ ಕಳೆದುಕೊಂಡಿದ್ದಾರೆ. ಅವರಿಗೆ ನನ್ನ ಕೈಲಾದ ಮಟ್ಟಿಗೆ ಸಹಾಯ ಮಾಡಿದ್ದೇನೆ. ಎರಡೂ ಸಮುದಾಯಗಳ ಜನರಿಗೂ ನೆರವಾಗಿದ್ದೇನೆ ಎಂದು ಅವರು ಹೇಳಿದರು. ಮಾಜಿ ಶಾಸಕರಾದ ಸುರೇಶ್ ಗೌಡ, ರವೀಂದ್ರ ಶ್ರೀಕಂಠಯ್ಯ, ಡಾ.ಕೆ. ಅನ್ನದಾನಿ, ಮಂಡ್ಯ ಜಿಲ್ಲಾ ಜೆಡಿಎಸ್ ಅಧ್ಯಕ್ಷ ರಮೇಶ್ ಸೇರಿ ಅನೇಕ ಮುಖಂಡರು ಜತೆಯಲ್ಲಿ ಇದ್ದರು.

ಇದಕ್ಕೂ ಮುನ್ನ ದುಷ್ಕರ್ಮಿಗಳ ದಾಳಿಗೆ ತುತ್ತಾದ ಅಂಗಡಿ, ಮಳಿಗೆಗಳನ್ನು ವೀಕ್ಷಿಸಿ ಆಸ್ತಿ ಕಳೆದುಕೊಂಡ ವ್ಯಾಪಾರಿಗಳಿಗೆ ವೈಯಕ್ತಿಕವಾಗಿ ಆರ್ಥಿಕ ನೆರವು ನೀಡಿದರು.

ಆಯುಷ್ಯ ವೃದ್ಧಿಸುವ ವಾಗ್ದಾನ

1. ಪಾಪ.. ಕುಮಾರಸ್ವಾಮಿ ಅವರು ಮಾತನಾಡೋದೆ ಹಾಗೆ.! ಅವರು ಎಲ್ಲಿ ಹೋದರೂ, ಬೆಂಕಿ ಹಚ್ಚೋದೆ ಕೆಲಸ
2. ಎಚ್‌ಡಿಕೆ ಯಾವತ್ತೂ ಅಭಿವೃದ್ಧಿ ವಿಚಾರದಲ್ಲಿ ಮತ ಕೇಳಿಲ್ಲ.
3. ಎಚ್‌ಡಿಕೆ ಹೇಳಿಕೆಯು ಅವರ ಮನಸ್ಥಿತಿಯನ್ನು ತೋರಿಸುತ್ತದೆ.

ಹತ್ತು ಲಕ್ಷಕ್ಕೂ ಹೆಚ್ಚು ಮೊತ್ತದ ಪರಿಹಾರ

ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಗಲಭೆಯಲ್ಲಿ ಆಸ್ತಿಪಾಸ್ತಿ, ಜೀವನೋಪಾಯ ಕಳೆದುಕೊಂಡ ಅನೇಕರಿಗೆ ವೈಯಕ್ತಿಕವಾಗಿ ಆರ್ಥಿಕ ನೆರವು ನೀಡಿದರು. ಸುಮಾರು ಹತ್ತು ಲಕ್ಷಕ್ಕೂ ಹೆಚ್ಚು ಮೊತ್ತದ ಹಣವನ್ನು ಅವರು ಪರಿಹಾರವಾಗಿ ನೀಡಿದರು.

ಎಚ್‌ಡಿ ಕುಮಾರ ಸ್ವಾಮಿಗೆ ಬೆಂಕಿ ಹಚ್ಚೋದೆ ಕೆಲಸ

ಗಲಭೆ ಬಗ್ಗೆ ಅವರೇ ತನಿಖೆ ಮಾಡಲಿ: ಎಚ್ ಸಿ ಬಾಲಕೃಷ್ಣ ಕಿಡಿ

ನೀರು ಬಿಡದಿದ್ದರೆ ನಾನೇ ಅಣೆಕಟ್ಟೆಯ ಗೇಟ್‌ಗಳನ್ನು ಎತ್ತುತ್ತೇನೆ

• ಉದಯವಾಹಿನಿ, ನಾಗಮಂಗಲ



ಮಳವಳ್ಳಿ, ನಾಗಮಂಗಲ ಸೇರಿ ವಿವಿಧ ಭಾಗಗಳ ಕೆರೆ ತುಂಬಿಸದಿದ್ದರೆ, ಕೊನೆಯ ಭಾಗದ ಪ್ರದೇಶಗಳ ನಾಲೆಗೆ ನೀರು ಹರಿಸದಿದ್ದರೆ ನಾನೇ ಬಂದು ಕೃಷ್ಣರಾಜ ಸಾಗರ ಸಾಗರದ ಗೇಟ್ ಗಳನ್ನು ಎತ್ತಿ ನೀರು ಬಿಡಬೇಕಾಗುತ್ತದೆ ಎಂದು ನೀರಾವರಿ ಇಲಾಖೆ ಅಧಿಕಾರಿಗಳಿಗೆ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಎಚ್ಚರಿಕೆ ನೀಡಿದರು. ಗಲಭೆಪೀಡಿತ ನಾಗಮಂಗಲಕ್ಕೆ ಭೇಟಿ ನೀಡಿದ ವೇಳೆ ಮಾಧ್ಯಮಗಳ ಜತೆ ಕೇಂದ್ರ ಸಚಿವರು ಮಾತನಾಡಿದರು.

ಮಳವಳ್ಳಿ ಭಾಗಕ್ಕೆ ಇದುವರೆಗೂ ನೀರು ಕೊಟ್ಟಿಲ್ಲ. ಕುಮಾರಸ್ವಾಮಿಗೆ ವೋಟು ಹಾಕಿದ್ದೀರಿ, ನೀರು ಬೇಕಾದರೆ ಕುಮಾರಸ್ವಾಮಿಯನ್ನೇ ಹೋಗಿ ಕೇಳಿ ಎಂದು ಒಬ್ಬ ಶಾಸ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ತನುಧರ್ಮವನ್ನು ಮೂಢಜನವೈದೆ ತನ್ನದೆಂದು

ನಿಜಗುಣರ ಪರಮಾನುಭವ ಬೋಧೆಯ ಮಾತು. ತೋರುವ ಶರೀರವೇ ತಾನೆನ್ನುವುದು ತಪ್ಪು. ನೀರಿನಿಂದುಂಟಾದ ಗುಳ್ಳೆ ನೀರೇ ಹೊರತು ಗುಳ್ಳೆಯಲ್ಲ. ತೋರಿದ ಕಾಲದಲ್ಲಿ ಮಾತ್ರ ಗುಳ್ಳೆ ಎನಿಸಬಹುದಾದರೂ ಆಗಲೂ ಅದು ನೀರಿಗೆ ಭಿನ್ನವಲ್ಲ. ಅದರಂತೆ ತೋರುವ ದೇಹ ಚೈತನ್ಯಕ್ಕೆ ಹೊರತಾದುದಲ್ಲವಾದ್ದರಿಂದ ತಾನು ಚೈತನ್ಯವೇ ಹೊರತು ದೇಹವಲ್ಲ. ತಾನು ದೇಹವಲ್ಲವೆಂದ ಬಳಿಕ ಹುಟ್ಟುವ ಸಾಯುವ ಮುಂತಾದ ದೇಹದ ಧರ್ಮ ಸ್ವಭಾವಗಳು ತನ್ನವು ಹೇಗಾದಾವು ತಾನಲ್ಲದ ಕೀಟಾದಿಗಳ ಧರ್ಮ ತನ್ನವಾಗದಂತೆ ತಾನಲ್ಲದ ದೇಹದ ಧರ್ಮಗಳೂ ತನ್ನವಲ್ಲ. ಆದಾಗ್ಯೂ ದೇಹ ಧರ್ಮಗಳು ತನ್ನವೆಂದು ಜನ ತಿಳಿಯುವರು. ಇದಕ್ಕೆ ಕಾರಣ ತನ್ನ ನಿಜ ಸ್ವರೂಪದ ಅರಿವಿಲ್ಲದಿರುವುದು. ಇಂಥವರನ್ನು ಮೂಢರು ಎನ್ನಲಾಗಿದೆ. ವ್ಯಾವಹಾರಿಕ ಪ್ರಪಂಚದಲ್ಲಿ ದೇಹ ತಾನು ತನ್ನದೆಂಬುದನ್ನು ಅಲ್ಲಗಳೆಯಲಾಗದಿದ್ದರೂ ಶಾಶ್ವತ ಸತ್ಯದ ದೃಷ್ಟಿಯಿಂದ ದೇಹ ತಾನಲ್ಲ ತನ್ನದಲ್ಲ. ಈ ಹಿನ್ನೆಲೆಯಲ್ಲಿ ದೇಹ ಧರ್ಮ ತನಗಿಲ್ಲ. ಈ ತತ್ತ್ವ ಅರಿತವನು ಸಾವಿಗೆ ಎಂದೂ ಹೆದರಲಾರ. ಏಕೆಂದರೆ ಹುಟ್ಟುವುದು ಸಾಯುವುದು ದೇಹದ ಧರ್ಮ. ತಾನು ಸತ್ ಚಿತ್ ನಿತ್ಯ ಆನಂದ ಪರಿಪೂರ್ಣ ಚೈತನ್ಯ ಸ್ವರೂಪನಾದ್ದರಿಂದ ತಾನು ಹುಟ್ಟುಸಾಯುವವನಲ್ಲ. ಅಥವಾ ಪ್ರತಿದಿನದ ನಿದ್ರೆ ಒಂದು ಸಾವು. ಎಚ್ಚರ ಒಂದು ಹುಟ್ಟು. ನಿತ್ಯ ಹುಟ್ಟಿ ಸಾಯುವವನಿಗೆ ಸಾವಿನ ಭಯವೆಲ್ಲಿ ಸಾವು ಅಪಶಕುನ ಎಂಬಿತ್ಯಾದಿ ಅನ್ನುವವರು, ಸಾವಿಗೆ ಹೆದರುವವರು ತಿಳಿಗೇಡಿಗಳು.

ಸಿವಿಲ್ ಸೇವೆಗಳ ಗ್ರೂಪ್- ಬಿ, ಸಿ ಹುದ್ದೆಗಳ ನೇಮಕಾತಿಯಲ್ಲಿ ವಯೋಮಿತಿ ಸಡಿಲಿಕೆ

• ಉದಯವಾಹಿನಿ ಬೆಂಗಳೂರು

ರಾಜ್ಯ ಸರ್ಕಾರದಿಂದ ಉದ್ಯೋಗ ಆಕಾಂಕ್ಷಿಗಳಿಗೆ ಭರ್ಜರಿ ಸಿಹಿಸುದ್ದಿ ನೀಡಲಾಗಿದೆ. ರಾಜ್ಯ ಸಿವಿಲ್ ಸೇವೆಗಳಿಗೆ ಸಂಬಂಧಿಸಿದಂತ ಗ್ರೂಪ್-ಬಿ ಹಾಗೂ ಸಿ ವೃಂದದ ನೇಮಕಾತಿಯ ವೇಳೆಯಲ್ಲಿ ಅಭ್ಯರ್ಥಿಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ 3 ವರ್ಷ ವಯೋಮಿತಿಯನ್ನು ಸಡಿಲಿಸಿ ಆದೇಶಿಸಿದೆ.ರಾಜ್ಯ ಸರ್ಕಾರದಿಂದ ಈ ಬಗ್ಗೆ ಆದೇಶ ಹೊರಡಿಸಿದ್ದು, ಕೋವಿಡ್-19 ಸಮಯದಲ್ಲಿ ನೇಮಕಾತಿಗಳು ಸರಿಯಾಗಿ ನಡೆದಿರಲಿಲ್ಲ. ಹಲವು ನೇಮಕಾತಿಗಳನ್ನು ಮುಂದೂಡುತ್ತಾ ಬರಲಾಗಿತ್ತು. ಹೀಗಾಗಿ ಅನೇಕ ಉದ್ಯೋಗ ಆಕಾಂಕ್ಷಿಗಳು ವಯೋಮಿತಿಯನ್ನು ಮೀರುವಂತೆ ಆಗಿತ್ತು. ಅವರೆಲ್ಲರೂ ವಯೋಮಿತಿ ಸಡಿಲಿಕೆಗೆ ಸರ್ಕಾರಕ್ಕೆ ಮನವಿ ಮಾಡಿದ್ದರು. ಈ ಮನವಿಯ ಹಿನ್ನಲೆಯಲ್ಲಿ 3 ವರ್ಷ ಎಲ್ಲಾ ವರ್ಗದ ಅಭ್ಯರ್ಥಿಗಳಿಗೆ ವಯೋಮಿತಿ ಸಡಿಲಿಕೆ ಮಾಡಿರುವುದಾಗಿ ತಿಳಿಸಿದೆ.

ಗೃಹಸಚಿವ ಪರಮೇಶ್ವರ್ ಹೇಳಿಕೆ ಸಾರ್ವಜನಿಕರಿಂದ ಭಾರೀ ಟೀಕೆ

• ಉದಯವಾಹಿನಿ ಬೆಂಗಳೂರು

ನಾಗಮಂಗಲದಲ್ಲಿ ನಡೆದ ಕೋಮುಗಲಭೆ ಒಂದು ಆಕಸ್ಮಿಕ ಘಟನೆ ಎಂದಿರುವ ಗೃಹಸಚಿವ ಜಿ ಪರಮೇಶ್ವರ್ ಈಗ ಸೋಷಿಯಲ್ ಮೀಡಿಯಾದಲ್ಲಿ ಟ್ರೋಲ್ ಆಗುತ್ತಿದ್ದಾರೆ. ನಾಗಮಂಗಲದಲ್ಲಿ ಅಂಗಡಿ ಮುಂಗಟ್ಟುಗಳು ಹತ್ತಿ ಉರಿದರೂ ಗೃಹಸಚಿವರು ಘಟನೆಯನ್ನು ಒಂದು ಆಕಸ್ಮಿಕ ಎಂದಿರುವುದು ಸಾರ್ವಜನಿಕರಿಂದ ಮತ್ತು ವಿಪಕ್ಷಗಳಿಂದ ಭಾರೀ ಟೀಕೆಗೊಳಗಾಗಿದೆ. ಇದೊಂದು ಆಕಸ್ಮಿಕ ಘಟನೆಯಾ ನೀವೆಂಥಾ ಗೃಹಸಚಿವರು ಎಂದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.ಇತ್ತ ವಿಪಕ್ಷ ನಾಯಕ ಆರ್ ಅಶೋಕ್ ಕೂಡಾ ನಾಗಮಂಗಲದಲ್ಲಿ ಇಷ್ಟೊಂದು ದೊಡ್ಡ ಗಲಾಟೆಯಾಗಿರುವಾಗ, ಒಂದು ಕೋಮಿನವರು ತಲ್ವಾರ್ ಹಿಡಿದು, ಪೆಟ್ರೋಲ್ ಬಾಂಬ್ ಸುರಿದರೂ ಅದನ್ನು ಆಕಸ್ಮಿಕ ಘಟನೆ ಎಂದು ಹೇಗೆ ಹೇಳುತ್ತೀರಿ ಎಂದು ಪ್ರಶ್ನೆ ಮಾಡಿದ್ದಾರೆ. ಇದರ ನಡುವೆ ಸೋಷಿಯಲ್ ಮೀಡಿಯಾದಲ್ಲಿ ಪರಮೇಶ್ವರ್ ಮತ್ತು ಹಿಂದಿನ ಬಿಜೆಪಿ ಸರ್ಕಾರದಲ್ಲಿ ಗೃಹಸಚಿವರಾಗಿದ್ದ ಅರಗ ಜ್ಞಾನೇಂದ್ರ ಅವರನ್ನು ಟ್ರೋಲ್ ಮಾಡಲಾಗುತ್ತಿದೆ. ಈ ಹಿಂದೆ ಅರಗ ಜ್ಞಾನೇಂದ್ರ ಗೃಹಸಚಿವರಾಗಿದ್ದಾಗ ಯಾವುದೇ ಕಾನೂನು ಸುವ್ಯವಸ್ಥೆಗೆ ಭಂಗ ತರುವ ಯಾವುದೇ ಘಟನೆಗಳಾಗಿದ್ದರೂ ಕಠಿಣ ಕ್ರಮ ಕೈಗೊಳ್ಳುವುದಾಗಿ ಹೇಳಿಕೆ ನೀಡುತ್ತಿದ್ದರು.

ಗಣೇಶ ಹಬ್ಬ ಮಾತ್ರವಲ್ಲ ಈದ್ ಮಿಲಾದ್‌ಗೂ ಡಿಜೆಗೆ ನಿಷೇಧ

• ಉದಯವಾಹಿನಿ ಬೆಂಗಳೂರು

ಮೊನ್ನೆಯಷ್ಟೇ ಗಣೇಶ ಹಬ್ಬಕ್ಕೆ ಡಿಜೆ, ಪಟಾಕಿಗೆ ನಿಷೇಧ ಹೇರಿ ವಿವಾದಕ್ಕೊಳಗಾಗಿದ್ದ ರಾಜ್ಯ ಸರ್ಕಾರ ಈಗ ಮುಸಲ್ಮಾನರ ಈದ್ ಮಿಲಾದ್ ಹಬ್ಬಕ್ಕೂ ಕೆಲವು ಷರತ್ತು ವಿಧಿಸಿದೆ. ಗಣೇಶ ಹಬ್ಬದಂತೇ ಈದ್ ಮಿಲಾದ್ ಮೆರವಣಿಗೆಯಲ್ಲೂ ಡಿಜೆ ಸೌಂಡ್ ಹಾಕುವಂತಿಲ್ಲ ಎಂದು ಷರತ್ತು ವಿಧಿಸಲಾಗಿದೆ. ಈದ್ ಮಿಲಾದ್ ಮೆರವಣಿಗೆ ವೇಳೆ ಗಲಾಟೆಗಳು ನಡೆಯುವ ಸಾಧ್ಯತೆ ಹಿನ್ನಲೆಯಲ್ಲಿ ಹರಿತವಾದ ಆಯುಧಗಳನ್ನು ಕೊಂಡೊಯ್ಯುವಂತಿಲ್ಲ ಎಂದು ಆದೇಶ ಹೊರಡಿಸಿದೆ. ಗಣೇಶ ಹಬ್ಬ ಆಚರಣೆಗೆ ಹಲವು ಷರತ್ತು ವಿಧಿಸಿದ್ದು ಹಿಂದೂಗಳ ಕೆಂಗಣ್ಣಿಗೆ ಗುರಿಯಾಗಿತ್ತು. ಮುಂದೆ ಈದ್ ಮಿಲಾದ್ ಗೂ ಇದೇ ರೀತಿ ಷರತ್ತು ಹಾಕುತ್ತೀರಾ ಎಂದು ರಾಜ್ಯ ಬಿಜೆಪಿ ಆಕ್ರೋಶ ಹೊರಹಾಕಿತ್ತು. ಇದೀಗ ಈದ್ ಮಿಲಾದ್ ಗೂ ಕೆಲವೊಂದು ನಿಯಮಗಳನ್ನು ರಾಜ್ಯ ಸರ್ಕಾರ ಹೊರಡಿಸಿದೆ. ರಾತ್ರಿ ಅವಧಿ ಮೀರಿ ಸೌಂಡ್ ಮಾಡುವಂತಿಲ್ಲ, ಡಿಜೆ ಸೌಂಡ್ ಹಾಕಿ ಅಕ್ಕಪಕ್ಕದವರಿಗೆ ತೊಂದರೆ ಮಾಡುವಂತಿಲ್ಲ ಇತ್ಯಾದಿ ಷರತ್ತು ವಿಧಿಸಿದೆ. ಆದರೆ ಇದು ಎಷ್ಟರಮಟ್ಟಿಗೆ ಪಾಲನೆಯಾಗುತ್ತದೆ ನೋಡಬೇಕಿದೆ. ಯಾಕೆಂದರೆ ಗಣೇಶ ಹಬ್ಬಕ್ಕೂ ಡಿಜೆ ಹಾಕುವಂತಿಲ್ಲ ಎಂದರೂ ಯಥಾವತ್ತಾಗಿ ಡಿಜೆ ಹಾಕಿ ಹಬ್ಬ ಮಾಡಲಾಗಿತ್ತು. ಆದರೆ ಇತ್ತೀಚೆಗೆ ಗಣೇಶ ಮೆರವಣಿಗೆ ವೇಳೆ ನಾಗಮಂಗಲದಲ್ಲಿ ನಡೆದ ಕೋಮುಗಲಭೆಯ ಬಳಿಕ ಎಚ್ಚೆತ್ತುಕೊಂಡ ಸರ್ಕಾರ ಈದ್ ಮಿಲಾದ್ ಗೂ ಕಠಿಣ ನಿಯಮ ಜಾರಿಗೆ ತರಲು ತೀರ್ಮಾನಿಸಿದೆ.

ಬೊಮ್ಮಸಂದ್ರ: ವಿವಿಧ ಕಾಮಗಾರಿಗೆ ಶಾಸಕ ಬಿ.ಶಿವಣ್ಣ ಚಾಲನೆ

• ಉದಯವಾಹಿನಿ ಆನೇಕಲ್

ತಾಲ್ಲೂಕಿನ ಬೊಮ್ಮಸಂದ್ರ ಪುರಸಭೆ ವ್ಯಾಪ್ತಿಯಲ್ಲಿ 4ನೇ ವಾರ್ಡ್‌ನಲ್ಲಿ ಹೈ ಮಾಸ್ಕ್ ದೀಪ, ಕೊಳವೆ ಬಾವಿ, ಯೋಗ ಮಂದಿರ ಮತ್ತು ರಸ್ತೆ ಅಭಿವೃದ್ಧಿ ಕಾಮಗಾರಿ ಯನ್ನು ಶಾಸಕ ಬಿ.ಶಿವಣ್ಣ ಉದ್ಘಾಟಿಸಿದರು. ಬಳಿಕ ಮಾತನಾಡಿ, ಬೊಮ್ಮಸಂದ್ರ ಪುರಸಭೆಯು ಕೈಗಾರಿಕ ಪ್ರದೇಶವಾಗಿದೆ. ಸಾವಿರಾರು ಕಾರ್ಮಿಕರು ಈ ಪ್ರದೇಶದಲ್ಲಿ ವಾಸಿಸುತ್ತಿದ್ದಾರೆ. ಸಾರ್ವಜನಿಕರಿಗೆ ಅನುಕೂಲವಾಗುವಂತೆ ಅಗತ್ಯ ಸೌಲಭ್ಯ ಕಲ್ಪಿಸಲು ಅಗತ್ಯ ಕ್ರಮ ವಹಿಸಲಾಗುವುದು. ನೀರಿನ ಸಮಸ್ಯೆ ಪರಿಹರಿಸಲು ಬೊಮ್ಮಸಂದ್ರ ಪುರಸಭೆ ವ್ಯಾಪ್ತಿಯಲ್ಲಿ ಮೂರು ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ. ಸಾರ್ವಜನಿಕರು ಸಂಜೆಯ ವೇಳೆಯಲ್ಲಿ ಸುಲಭ ಸಂಚಾರಕ್ಕೆ ಅನುವಾಗುವಂತೆ ಹೈಮಾಸ್ಕ್ ದೀಪವನ್ನು ಉದ್ಘಾಟಿಸಲಾಗಿದೆ ಎಂದರು. ಯೋಗ, ಧ್ಯಾನದಿಂದ ಮನಸ್ಸಿಗೆ ನೆಮ್ಮದಿ ದೊರೆಯುತ್ತದೆ. ಆರೋಗ್ಯದ ಸಮಸ್ಯೆಗಳನ್ನು ಪರಿಹರಿಸಲು ಯೋಗ ಕೇಂದ್ರ ಅವಶ್ಯಕವಾಗಿದೆ. ಸಾರ್ವಜನಿಕರಿಗೆ ಅನುಕೂಲವಾಗುವಂತೆ ಯೋಗ ಮಂದಿರವನ್ನು ಸ್ಥಾಪಿಸಲಾಗಿದ್ದು ಬೊಮ್ಮಸಂದ್ರ ಪುರಸಭೆ ವ್ಯಾಪ್ತಿಯ ಜನತೆ ಯೋಗ ಮಂದಿರವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ನಾಗಮಂಗಲ ಗಲಭೆ ಆಕಸ್ಮಿಕ ಹೇಳಿಕೆ: ಜನಾಕ್ರೋಶ

■ ಪೊಲೀಸ್ ಇನ್ಸ್‌ಪೆಕ್ಟರ್ ಅಶೋಕ್ ಕುಮಾರ್‌ನನ್ನು ಅಮಾನತು ■ ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ

• ಉದಯವಾಹಿನಿ ಬೆಂಗಳೂರು

ನಾಗಮಂಗಲ ಗಲಭೆಯನ್ನು ಗೃಹ ಸಚಿವರು ಗಂಭೀರವಾಗಿ ಪರಿಗಣಿಸಿಲ್ಲ. ಪೊಲೀಸ್ ಇಲಾಖೆಯು ಇದನ್ನು ಗಂಭೀರವಾಗಿ ತೆಗೆದುಕೊಂಡಿಲ್ಲ ಎನ್ನುವ ಆರೋಪಗಳ ನಡುವೆ ಗೃಹ ಸಚಿವ ಜಿ. ಪರಮೇಶ್ವರ್ ಅವರು ಈ ಬಗ್ಗೆ ಮಾತನಾಡಿದ್ದಾರೆ. ನನಗೆ ವಿರೋಧ ಪಕ್ಷಗಳ ಸರ್ಟಿಫಿಕೇಟ್ ಬೇಕಾಗಿಲ್ಲ. ಇದನ್ನು ನಾವು ಗಂಭೀರವಾಗಿ ಪರಿಗಣಿಸಿದ್ದೇವೆ. ಯಾವುದೇ ಸಮುದಾಯವನ್ನು ತುಷ್ಟೀಕರಣ ಮಾಡುವ ಅವಶ್ಯಕತೆ ನನಗೆ ಇಲ್ಲ ಎಂದು ಹೇಳಿದ್ದಾರೆ. ಅಲ್ಲದೇ ಘಟನೆಗೆ ಸಂಬಂಧಿಸಿದಂತೆ ಪೊಲೀಸ್ ಇನ್ಸ್ಪೆಕ್ಟರ್ ಅವರನ್ನು ಸಹ ಅಮಾನತು ಮಾಡಲಾಗಿದೆ.

ನಾಗಮಂಗಲ ಗಲಾಟೆಗೆ :ಆರೋಪ

ನಾಗಮಂಗಲ ಗಲಾಟೆಗೆ ಸಂಬಂಧಿಸಿದಂತೆ ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದ ಆರೋಪದ ಮೇಲೆ ಪೊಲೀಸ್ ಇನ್ಸ್ಪೆಕ್ಟರ್ ಅಶೋಕ್ ಕುಮಾರ್‌ನನ್ನು ಅಮಾನತುಗೊಳಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದ್ದಾರೆ. ಗಲಭೆಯ ಬೆನ್ನಲ್ಲೇ ಜಿ ಪರಮೇಶ್ವರ್ ಅವರು ನೀಡಿದ್ದ ಹೇಳಿಕೆ ಭಾರೀ ವಿವಾದಕ್ಕೆ ಕಾರಣವಾಗಿತ್ತು. ಗೃಹ ಸಚಿವರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿಲ್ಲ ಎನ್ನುವ ದೂರುಗಳು ಕೇಳಿ ಬಂದಿದ್ದವು. ಇದಕ್ಕೆ ಪರಮೇಶ್ವರ್ ಅವರು ನೀಡಿದ ಹೇಳಿಕೆಯೂ ಸಹ ಪ್ರಮುಖ ಕಾರಣವಾಗಿತ್ತು. ಗಲಭೆಯ ಬೆನ್ನಲ್ಲೇ ಮಾತನಾಡಿದ್ದ ಜಿ. ಪರಮೇಶ್ವರ ಅವರು, ಇದು ಆಕಸ್ಮಿಕ ಘಟನೆ, ಕೋಮುಗಲಭೆಯಲ್ಲ, ಗಲಭೆಯಷ್ಟೇ ಎಂಬರ್ಥದಲ್ಲಿ ಮಾತನಾಡಿದ್ದರು. ಇದು ಭಾರೀ ಜನಾಕ್ರೋಶಕ್ಕೆ ಕಾರಣವಾಗಿತ್ತು. ಇದೀಗ ಈ ವಿಷಯಗಳ ಬಗ್ಗೆ ಜಿ ಪರಮೇಶ್ವರ್ ಅವರು ಮಾತನಾಡಿದ್ದಾರೆ. ನಾಗಮಂಗಲ ಗಲಭೆಯ ಬಗ್ಗೆ ಮಾತನಾಡಿರುವ ಜಿ. ಪರಮೇಶ್ವರ್ ಅವರು, ಯಾವ ಸರ್ಕಾರವೂ ಹೋಗಿ ಗಲಾಟೆ ಮಾಡಿ ಅಂತ ಹೇಳುತ್ತಾರೆಯೇ ಈ ರೀತಿ ಆಗಬಾರದಾಗಿತ್ತು ಅಂತ ಹೇಳುವುದೇ ತಪ್ಪಾ ಎಂದು ಕೇಳಿದ್ದಾರೆ. ಇವರಿಗೆ ಕನ್ನಡ ಭಾಷೆ ಅರ್ಥವಾಗುವುದಿಲ್ಲವೇ ನಾವು ಹಳ್ಳಿಯಿಂದ ಬಂದವರು, ಹಳ್ಳಿ ಭಾಷೆಯಲ್ಲಿ ಹೇಳುತ್ತೇವೆ. ಟೆಕ್ಸ್‌ಬುಕ್ ಭಾಷೆ ಬಳಸುತ್ತೇವೆಯೇ ಒಂದು ಮಾತನ್ನು ಸ್ಪಷ್ಟವಾಗಿ ಹೇಳಲಿಚ್ಛಿಸುತ್ತೇನೆ. ರಾಜ್ಯದಲ್ಲಿ ಯಾರು ಕೂಡ ಕಾನೂನನ್ನು ಕೈಗೆತ್ತಿ ಕೊಳ್ಳಲು ಬಿಡುವುದಿಲ್ಲ ಎಂದು ಹೇಳಿದರು.

ಯಾರೇ ಆಗಿರಲಿ. ಗಣೇಶ ಹಬ್ಬ ಸೇರಿದಂತೆ ಇನ್ನಿತರ ಹಬ್ಬಗಳಲ್ಲಿ ಅನವಶ್ಯಕವಾಗಿ ಗೊಂದಲಗಳನ್ನು ಸೃಷ್ಟಿಸಿ, ಗಲಾಟೆ ಮಾಡಿದರೆ ಸುಮ್ಮನೆ ಬಿಡುವುದಿಲ್ಲ. ಕಾನೂನು ಚೌಕಟ್ಟಿನಲ್ಲಿ ಏನೆಲ್ಲ ಕ್ರಮ ತೆಗೆದುಕೊಳ್ಳಬೇಕೋ, ಕಟ್ಟುನಿಟ್ಟಾಗಿ ಮುಲಾಜಿಲ್ಲದೇ ಜರುಗಿಸುತ್ತೇವೆ.

ಯಾವುದೇ ಸಮುದಾಯವನ್ನು ತುಷ್ಟೀಕರಣ ಮಾಡುವ ಅಗತ್ಯತೆ ನಮಗೆ ಇಲ್ಲ. ಹೇಳಿಕೆಗಳನ್ನು ತಿರುಚಿ, ತಮಗೆ ಬೇಕಾದಂತೆ ವ್ಯಾಖ್ಯಾನ ಮಾಡಿಕೊಂಡರೆ ನಾವೇನು ಮಾಡಲಾಗುವುದಿಲ್ಲ ಎಂದು ಪರಮೇಶ್ವರ ಅವರು ಆಕ್ರೋಶ ವ್ಯಕ್ತಪಡಿಸಿದರು. ನಾನು ಗೃಹ ಸಚಿವನಾಗಿ ಜವಾಬ್ದಾರಿಯಿಂದ ಕೆಲಸ ಮಾಡುತ್ತಿದ್ದೇನೆ. ಬಿಜೆಪಿಯವರಿಂದ ಸರ್ಟಿಫಿಕೇಟ್ ಬೇಕಿಲ್ಲ. ನನಗು ಜವಾಬ್ದಾರಿ ಇದೆ. ಜವಾಬ್ದಾರಿ ಇಲ್ಲದೆ, ಆ ಸ್ಥಾನದಲ್ಲಿ ಕುಳಿತಿಲ್ಲ. ಕೆಲಸ ಮಾಡುತ್ತಿದ್ದೇವೆ.



> ಯಾವುದೇ ಘಟನೆಗಳಾದರೆ ನಿಮ್ಮನ್ನೆ ಹೊಣೆ ಮಾಡುವುದಾಗಿ ಪೊಲೀಸ್ ಅಧಿಕಾರಿಗಳಿಗೆ ಮೊದಲೇ ಎಚ್ಚರಿಸಿದ್ದೇವೆ. ಡಿವೈಎಸ್‌ಪಿ ಮೇಲೂ ತನಿಖೆ ನಡೆಯುತ್ತಿದೆ. ಘಟನೆಗೆ ಕಾರಣಗಳೇನು ಎಂಬುದರ ಕುರಿತು ವರದಿ ನೀಡುವಂತೆ ಸೂಚಿಸಿದ್ದೇನೆ. ವರದಿ ಬಂದ ನಂತರ ಮುಂದಿನ ಕ್ರಮ ಜರುಗಿಸಲಾಗುವುದು. ಯಾವುದೇ ಅಹಿತರ ಘಟನೆ ನಡೆಯದಂತೆ, ಮುನ್ನೆಚ್ಚರಿಕೆ ವಹಿಸುವಂತೆ ಹಿರಿಯ ಅಧಿಕಾರಿಗಳಿಗೆ ಸೂಚಿಸಿರುತ್ತೇವೆ. ಅದರ ಆಧಾರದ ಮೇಲೆ ಡಿಜಿ ರವರು ವೀಡಿಯೋ ಕಾನ್ಫರೆನ್ಸ್ ಮೂಲಕ ಸಂಬಂಧಪಟ್ಟ ಎಲ್ಲಾ ಎಸ್‌ಪಿ, ಅಧಿಕಾರಿಗಳಿಗೆ ತಿಳಿಸಿರುತ್ತಾರೆ.

ನಾಗಮಂಗಲ ಘಟನೆಯನ್ನು ಸಮರ್ಥನೆ ಮಾಡುತ್ತಿದ್ದೇವೆಯೇ ಯಾರು ಕಾರಣ ಆಗಿದ್ದಾರೆ, ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುತ್ತೇವೆ ಈಗಾಗಲೇ 52 ಜನರನ್ನು ಸುಮ್ಮನೆ ಬಂಧಿಸಲಾಗಿದೆಯೇ ಎಂದು ಪ್ರಶ್ನಿಸಿದರು. ಬಿಜೆಪಿಯವರು ಹೇಳಿಕೆಗಳನ್ನು ಟ್ವಿಸ್ಟ್ ಮಾಡಿ ವ್ಯಾಖ್ಯಾನ ಮಾಡಿಕೊಳ್ಳಲಿ.

ಪರಮೇಶ್ವರ ಹೀಗೆ ಹೇಳಿದರು, ಸಣ್ಣದೆಂದರು, ದೊಡ್ಡದು ಎಂದರು ಹೇಳಿಕೊಳ್ಳಲಿ. ನನಗು ಅವರಂತೆ ಮಾತನಾಡುವುದಕ್ಕೆ ಬರುತ್ತದೆ. ನಾನು ನಿನ್ನೆಯೇ ಈ ವಿಚಾರದಲ್ಲಿ ರಾಜಕೀಯ ಮಾಡಬೇಡಿ ಎಂದು ವಿಪಕ್ಷದವರಿಗೆ ಮನವಿ ಮಾಡಿದ್ದೇನೆ. ಆದರೂ ರಾಜಕೀಯ ಮಾಡುತ್ತೇವೆ ಅನ್ನುವುದಾದರೆ ಮಾಡಲಿ. ನಾವು ನಿಭಾಯಿಸುತ್ತೇವೆ ಎಂದು ಹೇಳಿದರು. ಸಾರ್ವಜನಿಕರೊಂದಿಗೆ ಕಾನೂನು ಸುವ್ಯವಸ್ಥೆ ಎಡಿಜಿಪಿ, ಎಸ್‌ಪಿ ಎಲ್ಲರು ಸಹ ಸಭೆಗಳನ್ನು ನಡೆಸಿರುತ್ತಾರೆ. ಮುಂಜಾಗ್ರತಾ ಕ್ರಮವಾಗಿ ಸ್ಥಳದಲ್ಲಿ ಕೆಎಸ್‌ಆರ್‌ಪಿ ವಾಹನ ಇಟ್ಟುಕೊಂಡು ಸಜ್ಜಾಗಿದ್ದರು ಎಂದು ಉತ್ತರಿಸಿದರು. ಇನ್ನು ಈ ರೀತಿಯ ಘಟನೆಗಳಾದ ಸಂದರ್ಭದಲ್ಲಿ ಪರಿಹಾರ ಕೊಡಲು ಕೆಲವು ನಿಯಮಗಳಿವೆ. ಘಟನೆಯ ತನಿಖಾ ವರದಿ ಬಂದ ನಂತರ ಪರಿಶೀಲನೆ ಮಾಡುತ್ತೇವೆ ಎಂದು ಹೇಳಿದರು.

> ಗೃಹ ಸಚಿವ ಜಿ. ಪರಮೇಶ್ವರ್ ಅವರು, ಮಂಡ್ಯದ ನಾಗಮಂಗಲ ಗಲಭೆ ಪ್ರಕರಣವು ಉದ್ದೇಶಪೂರ್ವಕ ಅಲ್ಲ, ಆಕಸ್ಮಿಕ ಘಟನೆ ಎಂದು ಹೇಳಿದ್ದರು. ಇದಕ್ಕೆ ಭಾರೀ ಆಕ್ರೋಶ ಕಾರಣವಾಗಿತ್ತು. ಇದೀಗ ಎಚ್ಚೆತ್ತುಕೊಂಡಿರುವ ಗೃಹ ಇಲಾಖೆ ಮೇಜರ್ ಸರ್ಜರಿಗೆ ಮುಂದಾಗಿದೆ. ಗಣೇಶ ಮೆರವಣಿಗೆ ಹೊರಡಬೇಕಿದ್ದ ದಾರಿಯನ್ನು ಮುಂಚಿತವಾಗಿ ನೀಡಲಾಗಿತ್ತು. ಇದನ್ನು ಇನ್‌ಸ್ಪೆಕ್ಟರ್ ಬದಲಾಯಿಸಿದ್ದರು. ಹೀಗಾಗಿ, ನಾಗಮಂಗಲ ಗಲಾಟೆಗೆ ಸಂಬಂಧಿಸಿದಂತೆ ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದ ಆರೋಪದ ಮೇಲೆ ಪೊಲೀಸ್ ಇನ್ಸ್‌ಪೆಕ್ಟರ್ ಅಶೋಕ್ ಕುಮಾರ್‌ನನ್ನು ಅಮಾನತುಗೊಳಿಸಲಾಗಿದೆ ಹೇಳಿದ್ದಾರೆ.
>
> -ಗೃಹ ಸಚಿವ ಜಿ. ಪರಮೇಶ್ವರ್

ಸರ್ಕಾರದಿಂದ ಆಡಳಿತ ಯಂತ್ರಕ್ಕೆ ಮೇಜರ್ ಸರ್ಜರಿ

• ಉದಯವಾಹಿನಿ ಬೆಂಗಳೂರು

ರಾಜ್ಯ ಸರ್ಕಾರದಿಂದ ಆಡಳಿತ ಯಂತ್ರಕ್ಕೆ ಮೇಜರ್ ಸರ್ಜಿ ಎನ್ನುವಂತೆ ಇಬ್ಬರು ಐಪಿಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶಿಸಿದೆ. ಈ ಮೂಲಕ ನಾಗಮಂಗಲ ಗಲಭೆಯ ಬೆನ್ನಲ್ಲೇ, ಗುಪ್ತಚರ ಇಲಾಖೆಯ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರನ್ನು ಎತ್ತಂಗಡಿ ಮಾಡಲಾಗಿದೆ.

ಈ ಕುರಿತಂತೆ ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದ್ದು, ಗುಪ್ತಚರ ಇಲಾಖೆಯ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಕೆ.ವಿ.ಶರತ್ ಚಂದ್ರ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದ್ದು, ಮುಂದಿನ ಆದೇಶದವರೆಗೆ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾಗಿ ನೇಮಕ ಮಾಡಲಾಗಿದೆ. ಇದಲ್ಲದೆ ಕೆ.ವಿ.ಶರತ್ ಚಂದ್ರ, ಐಪಿಎಸ್ (ಕೆಎನ್ -1997) ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸಂಚಾರ ಮತ್ತು ರಸ್ತೆ ಸುರಕ್ಷತೆಯ ಹೆಚ್ಚುವರಿ ಮಹಾನಿರ್ದೇಶಕ ಮತ್ತು

ರಾಜ್ಯಕ್ಕೆ ಬೇತಮಂಗಲ ಸಾಂತ್ವನ ಕೇಂದ್ರ ಮಾದರಿ: ನಾಗಲಕ್ಷ್ಮಿ ಚೌದರಿ

● ಕಾರ್ಯದರ್ಶಿ ಹಾಗೂ ಆಪ್ತ ಸಮಾಲೋಚಕಿಯ ಸೇವಾ ಮನೋಭಾವದ ಕಾರ್ಯಕ್ಕೆ ಮೆಚ್ಚುಗೆ

• ಉದಯವಾಹಿನಿ ಬೇತಮಂಗಲ

ಬೇತಮಂಗಲ ಮಹಿಳಾ ಸಾಂತ್ವನ ಕೇಂದ್ರದ ಕಾರ್ಯ ವೈಖರಿಯನ್ನು ಮೆಚ್ಚಿ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ಪ್ರಶಂಸೆ ವ್ಯಕ್ತಪಡಿಸಿ, ರಾಜ್ಯಕ್ಕೆ ಮಾದರಿಯಾಗುವಂತೆ ಕಾರ್ಯನಿರ್ವಹಿಸಿದ್ದೀರಿ ಎಂದು ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಬಂಗಾರಪೇಟೆಗೆ ಗುರುವಾರ ಭೇಟಿ ನೀಡಿದ್ದ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ಅವರನ್ನು ಬೇತಮಂಗಲ ಮಹಿಳಾ ಸಾಂತ್ವನ ಕೇಂದ್ರದ ಕಾರ್ಯದರ್ಶಿ ಡಾ.ಗೋಪಾಲ್ ಹಾಗೂ ಆಪ್ತ ಸಮಾಲೋಚಕಿ ಪವಿತ್ರ ಭೇಟಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಕೆಜಿಎಫ್ ತಾಲ್ಲೂಕಿಗೆ ಸೇರಿರುವ ಬೇತಮಂಗಲ ಮಹಿಳಾ ಸಾಂತ್ವನ ಕೇಂದ್ರದಲ್ಲಿ ದಾಖಲಾದ ಪ್ರಕರಣಗಳು ಹಾಗೂ ಇತ್ಯರ್ಥ ಪಡಿಸಿರುವ ಪ್ರಕರಣಗಳ ಬಗ್ಗೆ ಈಗಾಗಲೇ ಮಹಿತಿ ಪಡೆದಿರುವ ಆಯೋಗದ ಅಧ್ಯಕ್ಷರು ಬೇತಮಂಗಲ ಮಹಿಳಾ ಸಾಂತ್ವನ ಕೇಂದ್ರದ ಅಧಿಕಾರಿಗಳು ಭೇಟಿ ಯಾಗುತ್ತಿದ್ದಂತೆ ಕಾರ್ಯದರ್ಶಿ ಹಾಗೂ ಆಪ್ತ ಸಮಾಲೋಚಕಿಯ ಸೇವಾ ಮನೋಭಾವದ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ವರ್ಷಕ್ಕೆ 300 ಪ್ರಕರಣಗಳು: ಬೇತಮಂಗಲ ಮಹಿಳಾ ಸಾಂತ್ವನ ಕೇಂದ್ರದಲ್ಲಿ ಒಂದು ವರ್ಷಕ್ಕೆ ಸುಮಾರು 300ಕ್ಕೂ ಅಧಿಕ ಪ್ರಕರಣಗಳು ಮಹಿಳಾ ಸಾಂತ್ವನ ಕೇಂದ್ರದ ಮೆಟ್ಟಿಲು ಏರಳಿದ್ದು, ಇದರಲ್ಲಿ ಬಹುತೇಕ ಪ್ರಕರಣಗಳನ್ನು ಕಾರ್ಯದರ್ಶಿ ಹಾಗೂ ಆಪ್ತ ಸಮಾಲೋಚಕಿಯು ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ಪಡೆದು, ರಾಜಿ ಪಂಚಾಯಿತಿ ನಡೆಸುವ ಮೂಲಕ ಬಹುತೇಕ ಪ್ರಕರಣಗಳು ಇತ್ಯರ್ಥ ಪಡಿಸುವ ಮೂಲಕ ಆದರ್ಶ ಕೇಂದ್ರವಾಗಿದೆ. ಉಪ ನಿರ್ದೇಶಕರಾದ ನಾರಾಯಣ ಸ್ವಾಮಿ, ಜನವಾದಿ ಗೀತಾ, ಮಮತಾ ರೆಡ್ಡಿ, ಗಮನ ಶಾಂತಮ್ಮ, ಕೆಜಿಎಫ್ ಸಿಡಿಪಿಒ ರಾಜೇಶ್, ಬಂಗಾರಪೇಟೆ ಮುನಿರಾಜು, ಮಾಲೂರು ಬ್ಯಾರರೆಡ್ಡಿ, ಕೋಲಾರ ವಿನೋದ್ ಸೇರಿದಂತೆ ಮಹಿಳಾ ಸಾಂತ್ವನ ಕೇಂದ್ರದ ಸಿಬ್ಬಂದಿ ಹಾಗೂ ಸಾರ್ವಜನಿಕರು ಇದ್ದರು.

ಕೌಟುಂಬಿಕ ಜೀವನಕ್ಕೆ ನಾಂದಿ

ಕುಟುಂಬದ ದಾಂಪತ್ಯ ಜೀವನದಲ್ಲಿ ಆರ್ಥಿಕ ಸಂಕಷ್ಟ, ಕೌಟುಂಬಿಕ ಕಲಹಗಳು, ವರದಕ್ಷಿಣೆ ಕಿರುಕುಳ ಸೇರಿದಂತೆ ಇತರೆ ಹಲವು ಸಮಸ್ಯೆಗಳಿಂದ ಕುಟುಂಬದ ದಾಂಪತ್ಯ ಜೀವನದಲ್ಲಿ ಏರಿಪೆರು ಆಗಿ ದಾಂಪತ್ಯ ಜೀವನದಿಂದ ದೂರ ಉಳಿದು ಮಹಿಳಾ ಸಾಂತ್ವನ ಕೇಂದ್ರದ ಮೆಟ್ಟಿಲು ಏರುವ ದಂಪತಿಗಳನ್ನು ಕುಟುಂಬಸ್ಥರ ಹಿರಿಯರ ಸಮ್ಮುಖದಲ್ಲಿ ಕಾನೂನು ಚೌಕಟ್ಟಿನಲ್ಲಿ ರಾಜಿ ಪಂಚಾಯಿತಿ ನಡೆಸಿ, ಇತ್ಯರ್ಥ ಪಡಿಸಿರುವ ಮೂಲಕ ದಾಂಪತ್ಯ ಜೀವನ ನಡೆಸಲು ನಾಂದಿ ಹಾಡುವ ಕೇಂದ್ರವಾಗಿದೆ.

ಉದಯವಾಹಿನಿ ಚಿತ್ರ

10 ವರ್ಷಗಳಿಂದ ಉತ್ತಮ ಸಾಧನೆ

ಸುಮಾರು ವರ್ಷಗಳ ಹಿಂದೆ ಬೇತಮಂಗಲದಲ್ಲಿ ಮಹಿಳಾ ಸಾಂತ್ವನ ಕೇಂದ್ರ ಪ್ರಾರಂಭವಾಗಿದ್ದು, ಸಾವಿರಾರು ಹೆಣ್ಣು ಮಕ್ಕಳ ಜೀವನಕ್ಕೆ ದಾರಿ ದೀಪವಾಗಿದೆ, ಮಹಿಳಾ ಸಾಂತ್ವನ ಕೇಂದ್ರದ ಸಹಾಯ ಪಡೆದು ಜೀವನದಲ್ಲಿ ಸಂತಸ ಪಡೆದಿರುವ ಅನೇಕ ಮಹಿಳೆಯರು ಕೇಂದ್ರಕ್ಕೆ ಕೈಮುಗಿದು ಹೋಗಿರುವ ಉದಾಹರಣೆಗಳು ಇವೆ.

> ಬೇತಮಂಗಲ ಮಹಿಳಾ ಸಾಂತ್ವನ ಕೇಂದ್ರಕ್ಕೆ ಬರುವ ಬಹುತೇಕ ಪ್ರಕರಣಗಳು ಕೌಟುಂಬಿಕ ಕಲಹಕ್ಕೆ ಸಂಬಂಧ ಪಟ್ಟ ಪ್ರಕರಣಗಳಾಗಿದ್ದು, ಪ್ರಕರಣದ ಹಿನ್ನೆಲೆಯನ್ನು ವಿಚಾರಣೆ ನಡೆಸಿ, ಇಬ್ಬರಿಗೂ ಪ್ರತ್ಯೇಕವಾಗಿ ಕಾನೂನಿನ ಅರಿವು ಮೂಡಿಸಿ, ಕುಟುಂಬದ ನಿರ್ವಹಣೆ ಬಗ್ಗೆ ವಿವರಿಸಿ, ಇತ್ಯರ್ಥ ಪಡಿಸುವ ಮೂಲಕ ಒಂದು ಮಾಡಲಾಗಿದೆ, ಇದೆ ರೀತಿ ಎಲ್ಲಾ ಪ್ರಕರಣಗಳ ಬಗ್ಗೆಯೂ ಇತ್ಯರ್ಥ ಪಡಿಸಲಾಗುವುದು
-ಡಾ.ಎಂ.ಗೋಪಾಲ್, ಬೇತಮಂಗಲ ಮಹಿಳಾ ಸಾಂತ್ವನ ಕೇಂದ್ರದ ಕಾರ್ಯದರ್ಶಿ

ಹೆಣ್ಣು ಮಕ್ಕಳ ಜೀವನಕ್ಕೆ ದಾರಿ ದೀಪ

ಸೆ.14ರಂದು ದಿ - ಭಾರತಿ ಕೋ ಆಪರೇಟಿವ್ ಕ್ರೆಡಿಟ್ ಸೊಸೈಟಿ ಸಭೆ

• ಉದಯವಾಹಿನಿ, ರಾಮನಗರ

ದಿ-ಭಾರತಿ ಕೋ ಆಪರೇಟಿವ್ ಕ್ರೆಡಿಟ್ ಸೊಸೈಟಿಯ 2023-24ನೇ ಸಾಲಿನ ಸರ್ವಸದಸ್ಯರ ವಾರ್ಷಿಕ ಮಹಾಸಭೆ ಸೆ.14ರಂದು ನಗರದ ಶ್ರೀ ವೀರಭದ್ರ ಸ್ವಾಮಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ ಎಂದು ಅಧ್ಯಕ್ಷ ಕೆ.ಚಂದ್ರಯ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 26 ವರ್ಷಗಳ ಹಿಂದೆ ಲಕ್ಕೇಗೌಡರು ಸ್ಥಾಪಿಸಿದ ದಿ ಭಾರತಿ ಕೋ ಆಪರೇಟಿವ್ ಬ್ಯಾಂಕ್ ಗ್ರಾಹಕರಿಗೆ ಉತ್ತಮ ಸೇವೆ ನೀಡುತ್ತಿದ್ದು, ಪ್ರತಿವರ್ಷ ಲಾಭದಲ್ಲಿ ಸಾಗುತ್ತಿರುವ ಸೊಸೈಟಿ ಈ ಬಾರಿ 50,40,711 ರುಪಾಯಿ ನಿವ್ವಳ ಲಾಭದಲ್ಲಿದೆ ಎಂದರು.

ಸಂಘದಲ್ಲಿ ಒಟ್ಟು 4774 ಸದಸ್ಯರಿದ್ದು, 1 ಕೋಟಿ 19 ಲಕ್ಷ 49 ಸಾವಿರ ರು. ಷೇರು ಬಂಡವಾಳವಿದೆ. ದುಡಿಯುವ ಬಂಡವಾಳ 16.23 ಕೋಟಿ ರು. 14.50 ಕೋಟಿ ಠೇವಣಿ, 71.99 ಲಕ್ಷ ಆರ್ ಎಫ್ ಡಿ ಇದೆ. 14.81 ಕೋಟಿ ಸದಸ್ಯರಿಗೆ ಸಾಲ ವಿತರಣೆ ಮಾಡಲಾಗಿದೆ.

ಉದಯವಾಹಿನಿ ಚಿತ್ರ

ಈ ವರ್ಷ ಎಲ್ಲಾ ಷೇರುದಾರರಿಗೆ ಸಂಘದ ಲಾಭದಲ್ಲಿ ಶೇ.14 ರಷ್ಟು ವಿಲೇವಾರಿ ಮಾಡಲಾಗುತ್ತಿದೆ. ಪ್ರತಿ ವರ್ಷದಂತೆ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ.85 ಗಿಂತ ಹೆಚ್ಚು ಅಂಕ ಪಡೆದ ಸದಸ್ಯರ ಮಕ್ಕಳಿಗೆ ವಿದ್ಯಾಭ್ಯಾಸ ಪ್ರೋತ್ಸಾಹ ಧನವಾಗಿ ತಲಾ 3 ಸಾವಿರದಂತೆ 27 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, 24 ಮೃತ ಸದಸ್ಯರ ಕುಟುಂಬಕ್ಕೆ ತಲಾ 3 ಸಾವಿರದಂತೆ ಮರಣ ಪರಿಹಾರ ಧನ ಪಾವತಿಸಲಾಗುತ್ತಿದೆ ಎಂದು ಚಂದ್ರಯ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ಸಿ. ಸೋಮೇ ಗೌಡ, ನಿರ್ದೇಶಕರಾದ ದೊರೆಸ್ವಾಮಿ, ಎಚ್. ಎಸ್.ಸಿದ್ದ ರಾಜು, ಕೆ.ಪಿ.ಉಮೇಶ್, ಎ.ಬಿ. ಗಂಗಾಧರಗೌಡ, ಜಿ.ಎಲ್.ಆಂಜನೇಯ, ಎಂ. ನಾರಾಯಣ, ಎ.ಆರ್.ಚಂದ್ರ ಶೇಖರ್, ಹೆಚ್. ಕೆ.ರುಕ್ಮಿಣಿ, ಎಸ್.ಕೃಷ್ಣಪ್ಪ ಇದ್ದರು.

> ಸೊಸೈಟಿಯ ಎಲ್ಲಾ ಸದಸ್ಯರಿಗೆ ಅಂಚೆ ಮೂಲಕ ಸರ್ವ ಸದಸ್ಯರ ಆಹ್ವಾನ ಪತ್ರಿಕೆಯನ್ನು ಈಗಾಗಲೇ ಕಳುಹಿಸ ಲಾಗಿದೆ. ಆದರೆ, ಕೆಲವು ವಿಳಾಸದಲ್ಲಿಲ್ಲದೆ, ಇತರೆ ಸೊಸೈಟಿಗೆ ಆಹ್ವಾನ ಪತ್ರಿಕೆಗಳು ಹಿಂದುರಿಗಿ ಬಂದಿವೆ. ಹಾಗಾಗಿ ಆಹ್ವಾನ ಪತ್ರಿಕೆ ತಲುಪದ ಸದಸ್ಯರುಗಳು ಅನ್ಯತಾ ಭಾವಿಸದೆ ಸಭೆಗೆ ಹಾಜರಾಗುವಂತೆ ಆಡಳಿತ ಮಂಡಳಿಯವರ ಪರವಾಗಿ ಮನವಿ ಮಾಡುತ್ತೇನೆ
-ಬಿ.ಎಸ್.ಸುರೇಶ್, ಸೊಸೈಟಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ

ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ಪ್ರತಿಭಟನೆ: ಮನವಿ

ಉದಯವಾಹಿನಿ ಚಿತ್ರ

• ಉದಯವಾಹಿನಿ ಕನಕಪುರ

ಭಾರತದ ಆಂತರಿಕ ವಿಚಾರಗಳನ್ನು ವಿದೇಶಗಳಲ್ಲಿ ಮಾತನಾಡಿದ ಹಾಗೂ ದೇಶದ ಬಗ್ಗೆ ಕೀಳು ಅಭಿಪ್ರಾಯ ಬಿತ್ತುತ್ತಿರುವ ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ಪದಾಧಿಕಾರಿಗಳು ಪ್ರತಿಭಟನೆ ನಡೆಸಿದರು.ಇಲ್ಲಿನ ಚನ್ನಬಸಪ್ಪ ವೃತ್ತದಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಘೋಷಣೆಗಳನ್ನು ಕೂಗಿದ ಬಿಜೆಪಿ ಪದಾಧಿಕಾರಿಗಳು, ಕೂಡಲೇ ಅವರನ್ನು ವಿರೋಧ ಪಕ್ಷದ ನಾಯಕನ ಸ್ಥಾನ ದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಅಮೆರಿಕದಲ್ಲಿ ರಾಹುಲ್ ಗಾಂಧಿ ದೇಶದ ಬಗ್ಗೆ ಹಗುರವಾಗಿ ಮಾತನಾಡಿದ್ದಾರೆ. ಆಂತರಿಕ ವಿಚಾರಗಳ ಬಗ್ಗೆ ಬಹಿರಂಗವಾಗಿ ಹೇಳಿಕೆ ನೀಡಿರುವುದು ಖಂಡನೀಯ. ಮುಂದೆ ದೇಶದಲ್ಲಿ ದಲಿತರ ಮೀಸಲಾತಿಯನ್ನು ತೆಗೆಯುವುದಾಗಿ ಹೇಳಿಕೆ ನೀಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಭಾವನೆಗಳಿಗೆ ಅವಮಾನ ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ದೇಶದ ಏಕತೆ, ಭದ್ರತೆ ಮತ್ತು ಗೌಪ್ಯತೆ ಬಗ್ಗೆ ಅವರು ಎಚ್ಚರಿಕೆ ವಹಿಸಬೇಕಿತ್ತು. ದೇಶದ ಬಗ್ಗೆ ಬೇಜವಾಬ್ದಾರಿಯುತವಾಗಿ ಮಾತನಾಡಿದ ರಾಹುಲ್ ಗಾಂಧಿ ಅವರನ್ನು ವಿರೋಧ ಪಕ್ಷದ ನಾಯಕ ಸ್ಥಾನದಿಂದ ಮತ್ತು ವೈನಾಡು ಸಂಸದ ಸ್ಥಾನದಿಂದ ಈ ಕೂಡಲೇ ವಜಾಗೊಳಿಸಬೇಕೆಂದು ಆಗ್ರಹಿಸಿ, ಮನವಿ ಪತ್ರವನ್ನು ತಹಶೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಸಲ್ಲಿಸಿದರು. ಕನಕಪುರ ತಾಲ್ಲೂಕಿಗೆ ನೂತನ ತಹಶೀಲ್ದಾರ್ ಮಂಜುನಾಥ್ ಜಿ. ಪ್ರತಿಭಟನಾಕಾರರಿಂದ ಮನವಿ ಪತ್ರ ಸ್ವೀಕರಿಸಿದರು. ಬಿಜೆಪಿ ತಾಲ್ಲೂಕು ಅಧ್ಯಕ್ಷ ಕೆ.ಪಿ.ಕುಮಾರ್, ನಗರ ಮಂಡಲ ಅಧ್ಯಕ್ಷ ಮಂಜುನಾಥ್ ಸೇರಿದಂತೆ ಪದಾಧಿಕಾರಿಗಳು, ಮುಖಂಡರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಡ್ರೋನ್ ಬಳಸಿ ನ್ಯಾನೊ ಯೂರಿಯಾ ಸಿಂಪಡಣೆ

• ಉದಯವಾಹಿನಿ, ತಿಪಟೂರು

ತಾಲ್ಲೂಕಿನ ಕಸಬಾ ಹೋಬಳಿ ಬೆನ್ನಾಯಕನಹಳ್ಳಿ ಗ್ರಾಮದಲ್ಲಿ ರಾಗಿ ಬೆಳೆಗೆ ಕೃಷಿ ಡ್ರೋನ್ ಬಳಸಿ ನ್ಯಾನೊ ಯೂರಿಯಾ ಸಿಂಪಡಣೆ ಪ್ರಾತ್ಯಕ್ಷಿಕೆ ನಡೆಯಿತು.ಇಫ್ಕೋ ಸಂಸ್ಥೆ ಸಹಯೋಗದೊಂದಿಗೆ ಆತ್ಮ ಯೋಜನೆ ಮತ್ತು ರಾಷ್ಟ್ರೀಯ ಆಹಾರ ಮತ್ತು ಪೌಷ್ಟಿಕ ಭದ್ರತಾ ಯೋಜನೆಯಡಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಶಾಸಕ ಕೆ.ಷಡಕ್ಷರಿ ಮಾತನಾಡಿ, ಸ್ವಾತಂತ್ರ್ಯ ಬಂದಾಗ ದೇಶದ ಜನಸಂಖ್ಯೆ 34 ಕೋಟಿ ಇದ್ದು, ಆಹಾರ ಧಾನ್ಯಗಳ ಉತ್ಪಾದನೆ 51 ಮಿಲಿಯನ್ ಟನ್ ಇತ್ತು. ನಂತರದ ದಿನಗಳಲ್ಲಿ ಜನಸಂಖ್ಯೆ ಹೆಚ್ಚಾದಂತೆ ಕೃಷಿಗೆ ಅಗತ್ಯ ಭೂಮಿ ಕಡಿಮೆಯಾಗಿದೆ. ಸದ್ಯ ದೇಶದ ಜನಸಂಖ್ಯೆ 141 ಕೋಟಿ ಇದೆ. ಏರುತ್ತಿರುವ ಜನಸಂಖ್ಯೆಗೆ ಆಹಾರ ಒದಗಿಸುವ ಉದ್ದೇಶದಿಂದ ರಾಷ್ಟ್ರೀಯ ಆಹಾರ ಮತ್ತು ಪೌಷ್ಟಿಕ ಭದ್ರತಾ ಯೋಜನೆ ಜಾರಿಗೊಳಿಸಲಾಗಿದೆ. ಆಹಾರ ಬೆಳೆಗಳ ವಿಸ್ತೀರ್ಣ, ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸುವುದು ಈ ಯೋಜನೆಯ ಮುಖ್ಯ ಗುರಿ. ಯೋಜನೆಯಡಿ ತಾಲ್ಲೂಕಿನ 500 ಹೆಕ್ಟೇರ್ ಪ್ರದೇಶದಲ್ಲಿ ರಾಗಿ ಬೆಳೆ ಪ್ರಾತ್ಯಕ್ಷಿಕೆ ಕೈಗೊಳ್ಳಲಾಗಿದೆ ಎಂದರು. ಇಫ್ಕೊ ಸಂಸ್ಥೆ ಪ್ರತಿನಿಧಿ ಚಿದಂಬರಮೂರ್ತಿ ಮಾತನಾಡಿ, ಯೂರಿಯಾವನ್ನು ಮೇಲುಗೊಬ್ಬರವಾಗಿ

ಉದಯವಾಹಿನಿ ಚಿತ್ರ

ಬೆಳೆಗಳಿಗೆ ಎರಚುವುದು ಪ್ರಸ್ತುತ ಚಾಲ್ತಿಯಲ್ಲಿದ್ದು, ಯೂರಿಯಾ ಹರಳುಗಳು ಸಸ್ಯಗಳ ಬೇರುಗಳಿಗೆ ಸೂಕ್ತವಾಗಿ ದೊರೆಯುವುದಿಲ್ಲ. ತಾಪಮಾನ ಹೆಚ್ಚಾದಂತೆ ಯೂರಿಯಾದಲ್ಲಿನ ಪೋಷಕಾಂಶವು ಆವಿಯಾಗಬಹುದು. ಹೆಚ್ಚಿನ ಮಳೆಯಿಂದ ಕೊಚ್ಚಿ ಹೋಗುವ ಸಾಧ್ಯತೆ ಇರುತ್ತದೆ. ಈ ಸಮಸ್ಯೆಗಳಿಗೆ ಪರಿಹಾರವಾಗಿ ನ್ಯಾನೊ ಯೂರಿಯ ಸಿಂಪಡಣೆ ಯೋಗ್ಯ ಮಾರ್ಗವಾಗಿದೆ ಎಂದು ಹೇಳಿದರು.

ಬೆನ್ನಾಯಕನಹಳ್ಳಿ ಗ್ರಾಮದಲ್ಲಿ ರಾಗಿ ಬೆಳೆಗೆ ಕೃಷಿ ಡ್ರೋನ್ ಮೂಲಕ ಯುರಿಯೂ ಸಿಂಪಡಣೆಗೆ ಚಾಲನೆ ನೀಡಿದ ಶಾಸಕ ಕೆ.ಷಡಕ್ಷರಿ ಸಹಾಯಕ ಕೃಷಿ ನಿರ್ದೇಶಕ ಪವನ್ ಮಾತನಾಡಿ, ಕೃಷಿ ಯಾಂತ್ರೀಕರಣ ಯೋಜನೆಯಡಿ ಸಾಮಾನ್ಯ ವರ್ಗದ ರೈತರಿಗೆ ಶೇ 50 ಹಾಗೂ ಪರಿಶಿಷ್ಟ ಜಾತಿ, ವರ್ಗದ ರೈತರಿಗೆ ಶೇ 90ರಷ್ಟು ಸಹಾಯಧನದಲ್ಲಿ ವಿವಿಧ ಕೃಷಿ ಯಾಂತ್ರೋಪಕರಣಗಳನ್ನು ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಮಾಗಡಿಗೆ ಮುಖ್ಯಮಂತ್ರಿ: ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ

• ಉದಯವಾಹಿನಿ ಮಾಗಡಿ

ಬೆಳಗ್ಗೆ 11.30ಕ್ಕೆ ಹೊಸಪೇಟೆ ಸರ್ಕಲ್‌ನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಸಮಾರಂಭಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಗಮಿಸಲಿದ್ದಾರೆ. ಮಾಗಡಿ ಶಾಸಕ ಎಚ್.ಸಿ ಬಾಲಕೃಷ್ಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ರಾಮನಗರ ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾರೆಡ್ಡಿ ಮಾರುಕಟ್ಟೆ (ಅಂಗಡಿ ಮಳಿಗೆಗಳ) ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಪಟ್ಟಣದ ವ್ಯಾಪ್ತಿ ಯಲ್ಲಿ 20 ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ಮತ್ತು ಮಾಗಡಿ ಜೂನಿಯರ್ ಕಾಲೇಜು ಆವರಣ ದಲ್ಲಿ 7 ಕೋಟಿ ವೆಚ್ಚದಲ್ಲಿ ಆಡಿಟೋರಿಯಂ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೇರ ವಿಸಲಿದ್ದಾರೆ.


ಉದಯವಾಹಿನಿ ಚಿತ್ರ

ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆ

ಸಹಕಾರ ಸಚಿವ ಕೆ.ಎನ್. ರಾಜಣ್ಣ ಬೆಂಗಳೂರು ಹಾಲು ಒಕ್ಕೂಟದ ಮಾಗಡಿ ನೂತನ ಶಿಬಿರ ಕಚೇರಿಯನ್ನು ಉದ್ಘಾಟಿಸುವರು. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಅವರು ಐ.ಟಿ.ಐ ಕಾಲೇಜು ಉದ್ಘಾಟನೆ ಮಾಡಲಿದ್ದಾರೆ.

ಉನ್ನತ ಶಿಕ್ಷಣ ಇಲಾಖೆ ಸಚಿವರಾದ ಎಂ.ಸಿ. ಸುಧಾಕರ್ ಮಾಗಡಿ ತಾಲ್ಲೂಕಿನ ಹಾರೋಹಳ್ಳಿ ಗ್ರಾಮದಲ್ಲಿ ಪಾಲಿಟೆಕ್ನಿಕ್ ಕಾಲೇಜಿನ ಶಂಕುಸ್ಥಾಪನೆ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಆತ್ಮಾಧುನಿಕ ಗ್ರಂಥಾಲಯ ಕಟ್ಟಡದ ಶಂಕುಸ್ಥಾಪನೆ, ವಸತಿ, ವಕ್ಫ್ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹ್ಮದ್ ಖಾನ್ ಜೂನಿಯರ್ ಕಾಲೇಜಿನ ಕ್ರೀಡಾಂಗಣ ಅಭಿವೃದ್ಧಿ ಕಾಮಗಾರಿಯ ಭೂಮಿ ಪೂಜೆ ಮತ್ತು ಶಾದಿ ಮಹಲ್ ಉದ್ಘಾಟನೆ ಮಾಡಲಿದ್ದಾರೆ.

ಕಾರ್ಯಕ್ರಮದಲ್ಲಿ ಸಂಸದರಾದ ಡಾ. ಸಿ.ಎನ್. ಮಂಜುನಾಥ್, ಎಸ್.ಟಿ. ಸೋಮಶೇಖರ್, ಇಕ್ಬಾಲ್ ಹುಸೇನ್, ಶ್ರೀನಿವಾಸ್, ವಿಧಾನ ಪರಿಷತ್ ಸದಸ್ಯ ರಾದ ಸಿ.ಪಿ. ಯೋಗೇಶ್ವರ್, ಎಸ್. ರವಿ, ಪುಟ್ಟಣ್ಣ, ಸುಧಾಮ್‌ದಾಸ್, ರಾಮೋಜಿ ಗೌಡ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು ಹಾಗೂ ಎಚ್.ಎಂ. ರೇವಣ್ಣ, ಭೀಮಾನಾಯ್ಕ, ಎಚ್. ಪಿ. ರಾಜಕುಮಾರ್, ಎಂ. ಮಂಜುನಾಥ್ , ನರಸಿಂಹಮೂರ್ತಿ, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಎಚ್.ಎನ್. ಅಶೋಕ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ರಾಜು, ಬೆಂಗಳೂರು ಹಾಲು ಒಕ್ಕೂಟದ ನಿರ್ದೇಶಕರಾದ ಪಿ. ನಾಗರಾಜ್, ಕೆ. ರಾಜಣ್ಣ (ಕೆ.ಇ.ಬಿ), ರಾಮನಗರ ಜಿಲ್ಲಾ ಸಹಕಾರ ಒಕ್ಕೂಟ ನಿಗಮದ ಅಧ್ಯಕ್ಷರಾದ ಎಂ.ಕೆ. ಧನಂಜಯ ಭಾಗವಹಿಸಲಿದ್ದಾರೆ.

ವಿಜಯೇಂದ್ರ, ಅಶೋಕ ವಿರುದ್ಧ ಗೂಂಡಾ ಪ್ರಕರಣ: ಲಕ್ಷ್ಮಣ ಒತ್ತಾಯ

• ಉದಯವಾಹಿನಿ ಮೈಸೂರು

ರಾಜ್ಯದಲ್ಲಿ ಕೋಮು ಗಲಭೆಗಳಿಗೆ ಕುಮ್ಮಕ್ಕು ನೀಡುತ್ತಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಹಾಗೂ ಶಾಸಕ ಡಾ.ಸಿ.ಎನ್.

ಅಂತರಾಳದಿಂದ... EDITORIAL

ಕುರಿ ಕಡಿಯುವ ಮೊದಲೇ ಊಟಕ್ಕೆ ಕೂತ ನಾಯಕರು!

ಪಾತಣಕ್ಕೆ ಕುರಿ ಕಡಿಯುವ ಮೊದಲೇ ಊಟದ ಪಂಕ್ತಿಯಲ್ಲಿ ಬಾಲೆ ಎಲೆ ಹಾಕಿ ಕೂತಿದ್ದಾರೆ ಕೆಲವು ಕಾಂಗ್ರೇಸ್ ನಾಯಕರು. 'ಮುಖ್ಯಮಂತ್ರಿ ಹುದ್ದೆ'ಗೆ ನಾ ಮುಂದೆ ತಾಮುಂದೆ ಎಂದಾಡುತ್ತಿರುವ ಕಾಂಗ್ರೇಸ್ ನಾಯಕರನ್ನು ಗಮನಿಸುವಾಗ ನಿಜಕ್ಕೂ ಮುಖ್ಯಮಂತ್ರಿ ಸಿದ್ದರಾಮಯ್ಯರ ರಾಜೀನಾಮೆ ಬೇಕಾಗಿರುವುದು ಬಿಜೆಪಿಗೋ ಅಥವಾ ಈ ಕಾಂಗ್ರೇಸ್‌ನೊಳಗಿರುವ ನಾಯಕರಿಗೋ ಎಂದು ಅನುಮಾನಿಸುವಂತಾಗಿದೆ.

ಮುಡಾ ಹಗರಣಕ್ಕೆ ಸಂಬಂಧಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಗಾಗಿ ಬಿಜೆಪಿ ಪಾದಯಾತ್ರೆ ಸೇರಿದಂತೆ ಸಾಕಷ್ಟು ಪ್ರಯತ್ನಗಳನ್ನು ನಡೆಸಿತಾದರೂ, ಅದರಲ್ಲಿ ವಿಶೇಷ ಯಶಸ್ಸನ್ನೇನೂ ತನ್ನದಾಗಿಸಿಕೊಂಡಿಲ್ಲ. ಆ ಕಾರಣದಿಂದಲೇ, ರಾಜ್ಯಪಾಲರ ಮೂಲಕ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನದಿಂದ ಇಳಿಯಲೇ ಬೇಕಾಗುವ ಅನಿವಾರ್ಯ ಸ್ಥಿತಿಯನ್ನು ನಿರ್ಮಾಣ ಮಾಡಲು ಪ್ರಯತ್ನಿಸುತ್ತಿದೆ. ಮುಡಾ ಪ್ರಕರಣದಲ್ಲಿ ರಾಜ್ಯಪಾಲರು ಕಾನೂನು ಕ್ರಮಕ್ಕೆ ಅನುಮತಿ ನೀಡಿದ ಬಳಿಕ ಅದರ ವಿರುದ್ಧ ಸರಕಾರ ನ್ಯಾಯಾಲಯದ ಮೆಟ್ಟಿಲೇರಿದೆ. ಈ ಬಗ್ಗೆ ವಿಚಾರಣೆಯನ್ನು ಪೂರ್ಣಗೊಳಿಸಿರುವ ಹೈಕೋರ್ಟ್ ತೀರ್ಪನ್ನು ಕಾದಿರಿಸಿದೆ. ಕನಿಷ್ಠ ಹೈಕೋರ್ಟ್ ತೀರ್ಪು ಹೊರಬೀಳುವವರೆಗೂ ಕಾಯುವುದಕ್ಕೆ ಕಾಂಗ್ರೇಸ್‌ನೊಳಗಿರುವ ನಾಯಕರು ಸಿದ್ಧರಿಲ್ಲ ಎನ್ನುವ ಪರಿಸ್ಥಿತಿ ನಿರ್ಮಾಣವಾಗಿದೆ. ಅನಿವಾರ್ಯವಾಗಿ, ಇದೀಗ ಕೆಲವು ಕಾಂಗ್ರೇಸ್ ನಾಯಕರ ವರ್ತನೆಯ ವಿರುದ್ಧ ರಾಜ್ಯದ ವರಿಷ್ಠರು ಕೇಂದ್ರದ ವರಿಷ್ಠರಿಗೆ ದೂರು ಸಲ್ಲಿಸಿದ್ದಾರೆ. 'ರಾಜ್ಯದಲ್ಲಿ ಮುಖ್ಯಮಂತ್ರಿ ಹುದ್ದೆ ಬದಲಾವಣೆ ವಿಚಾರದಲ್ಲಿ ಹಲವು ಕಾಂಗ್ರೇಸ್ ನಾಯಕರು ಬಹಿರಂಗ ಹೇಳಿಕೆ ನೀಡಿ ಪಕ್ಷದ ಶಿಸ್ತನ್ನು ಉಲ್ಲಂಘಿಸುತ್ತಿದ್ದಾರೆ. ಇದನ್ನು ತಡೆಯಬೇಕು' ಎಂದು ಒತ್ತಾಯಿಸಿ ಕಾಂಗ್ರೇಸ್‌ನೊಳಗಿರುವ ಒಂದು ಗುಂಪು ಮಲ್ಲಿಕಾರ್ಜುನ ಖರ್ಗೆಯವರಿಗೆ ಪತ್ರವನ್ನು ಬರೆದಿದೆ.

> 'ಸಿದ್ದರಾಮಯ್ಯ ಒಳ್ಳೆಯ ಆಡಳಿತ ನೀಡುತ್ತಿದ್ದಾರೆ. ಕುರ್ಚಿ ಖಾಲಿ ಬಿದ್ದರೆ ನಾವು ಸ್ಪರ್ಧಿಸಲು ಹಿಂದೇಟು ಹಾಕುವುದಿಲ್ಲ' ಎಂದು ಅಡ್ಡಗೋಡೆಯ ಮೇಲೆ ದೀಪವಿಡುವ ಈ ನಾಯಕರು, ಬಿಜೆಪಿ ನಡೆಯ ವಿರುದ್ಧ ಅಷ್ಟೇ ತೀವ್ರವಾಗಿ ಹೇಳಿಕೆ ನೀಡಿದ್ದು ಕಡಿಮೆ. ಸಿದ್ದರಾಮಯ್ಯ ವಿರುದ್ಧ ಕೇಳಿ ಬರುತ್ತಿರುವ ಆರೋಪಗಳಿಗೆ ಕಾಂಗ್ರೇಸ್‌ನೊಳಗಿರುವ ಕೆಲವು ನಾಯಕರ ಮೌನ, ಪರೋಕ್ಷವಾಗಿ ಬಿಜೆಪಿಗೆ ಸಹಾಯವಾಗುತ್ತಿದೆ. ತಾನೊಬ್ಬ ಹಿಂದುಳಿದ ವರ್ಗದ ನಾಯಕ ಎನ್ನುವುದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಲವು ಬಾರಿ ಹೇಳಿಕೊಂಡಿದ್ದಾರೆ.

ಜನತೆ ಬಹುಮತದಿಂದ ಕಾಂಗ್ರೇಸ್ ಪಕ್ಷವನ್ನು ಗೆಲ್ಲಿಸಿದ್ದಾರೆ. ಎಲ್ಲಾ ಐದು ಗ್ಯಾರಂಟಿಗಳನ್ನು ನೂತನ ಸರಕಾರ ಯಶಸ್ವಿಯಾಗಿ ನೆರವೇರಿಸಿದೆ. ಇಂತಹ ಸಂದರ್ಭದಲ್ಲಿ ಸರಕಾರವನ್ನು ಉರುಳಿಸಲು ಬಿಜೆಪಿ ಪ್ರಯತ್ನಿಸುವಾಗ ಅದಕ್ಕೆ ಕೆಲವು ಕಾಂಗ್ರೇಸ್ ನಾಯಕರು ಪೂರಕವಾದ ಹೇಳಿಕೆಗಳನ್ನು ನೀಡುತ್ತಿದ್ದಾರೆ' ಎಂಬ ಪರೋಕ್ಷ ಕಳವಳವನ್ನು ಈ ಪತ್ರ ವ್ಯಕ್ತಪಡಿಸುತ್ತಿದೆ. ಸಚಿವರ ಲಂಗುಲಗಾಮಿಲ್ಲದ ಹೇಳಿಕೆಗಳಿಂದ ಮಾಧ್ಯಮಗಳಲ್ಲಿ ಈಗ ಮುಖ್ಯಮಂತ್ರಿ ಬದಲಾವಣೆಯ ಚರ್ಚೆಯಾಗುತ್ತಿದೆ. ಇದು ಪಕ್ಷದ ವರ್ಚಸ್ಸಿಗೆ ಧಕ್ಕೆ ಮಾತ್ರವಲ್ಲ ಸರಕಾರವನ್ನು ಪರೋಕ್ಷವಾಗಿ ಅಭದ್ರಗೊಳಿಸಬಹುದು ಎಂಬ ಆತಂಕವನ್ನು ಅವರು ವ್ಯಕ್ತಪಡಿಸಿದ್ದಾರೆ. ಪಕ್ಷದೊಳಗಿನ ನಾಯಕರು ಬೇಜವಾಬ್ದಾರಿಯ ಹೇಳಿಕೆಯನ್ನು ನೀಡಿ ಬಿಜೆಪಿಗೆ ಸಹಕಾರ ನೀಡುತ್ತಿರುವುದನ್ನು ಈ ಮೂಲಕ ಕಾಂಗ್ರೇಸ್ ಪಕ್ಷವೇ ಒಪ್ಪಿಕೊಂಡಿದೆ.

ಸಿದ್ದರಾಮಯ್ಯ ಅವರ ಮೇಲೆ ಮುಡಾ ಹಗರಣದ ಆರೋಪ ಬಂದ ದಿನಗಳಿಂದ ಸಿದ್ದರಾಮಯ್ಯ ಪರವಾಗಿ ಒಂದೆರಡು ನಾಯಕರು ಹೇಳಿಕೆಗಳನ್ನು ಸ್ಪಷ್ಟಿಕರಣನ್ನು ನೀಡುತ್ತಾ ಬಂದಿದ್ದಾರೆ. ಅದನ್ನು ಬಿಟ್ಟರೆ, ಸ್ವತಃ ಸಿದ್ದರಾಮಯ್ಯ ಅವರೇ ಪದೇ ಪದೇ ಪತ್ರಿಕಾಗೋಷ್ಠಿಗಳನ್ನು ನಡೆಸಿ ವಿವರಗಳನ್ನು ನೀಡಬೇಕಾಯಿತು. ಸಿದ್ದರಾಮಯ್ಯ ಅವರ ಬೆನ್ನ ಹಿಂದೆ ಬಲವಾಗಿ ನಿಂತು ಅವರ ಮೇಲೆ ಬಂದಿರುವ ಆರೋಪಗಳನ್ನು ನಿರಾಕರಿಸಿದ ನಾಯಕರ ಸಂಖ್ಯೆ ಬೆರಳೆಣಿಕೆಯಷ್ಟೇ ಇದೆ. ಅತ್ತ ಬಿಜೆಪಿ ಸಿದ್ದರಾಮಯ್ಯ ಅಧಿಕಾರದಿಂದ ಕೆಳಗಿಳಿಯಬೇಕು ಎಂದು ಪ್ರತಿಭಟನೆ ಮಾಡುತ್ತಿರುವ ಹೊತ್ತಿಗೆ ಇತ್ತ ಪರಮೇಶ್ವರ್, ದೇಶಪಾಂಡೆ, ಬಸವರಾಜ ರಾಯರೆಡ್ಡಿ, ಶಾಮನೂರು ಸೇರಿದಂತೆ ಹಲವು ನಾಯಕರು 'ಮುಖ್ಯಮಂತ್ರಿ ಸ್ಥಾನಕ್ಕೆ ನಾವು ಸ್ಪರ್ಧಿಗಳು' ಎನ್ನುವುದನ್ನು ಬಹಿರಂಗ ಹೇಳಿಕೆಯ ಮೂಲಕ ಸ್ಪಷ್ಟಪಡಿಸಿದ್ದರು. ಇತ್ತೀಚೆಗೆ ಸಭೆಯೊಂದರಲ್ಲಿ ಪರಮೇಶ್ವರ್ ಬೆಂಬಲಿಗರು 'ಪರಮೇಶ್ವರ್‌ಗೆ ಸಿಎಂ ಸ್ಥಾನ ನೀಡಬೇಕು' ಎಂದು ಘೋಷಣೆ ಕೂಗಿರುವುದು ಮಾಧ್ಯಮಗಳಲ್ಲಿ ಸುದ್ದಿಯಾಯಿತು. ಕಾಂಗ್ರೇಸ್ ನೊಳಗಿರುವ ಒಂದು ಗುಂಪು ಖರ್ಗೆ ಅವರಿಗೆ ಪತ್ರ ಬರೆದ ಬಳಿಕವೂ ಮುಖ್ಯಮಂತ್ರಿ ಬದಲಾವಣೆ ಮಾಡಿದರೆ ನಾನೂ ಸಿಎಂ ಸ್ಥಾನಕ್ಕೆ ಸ್ಪರ್ಧೆ ಮಾಡುತ್ತೇನೆ ಎಂದು ಶಾಮನೂರು ಸ್ಪಷ್ಟಪಡಿಸಿದ್ದಾರೆ. ಆದರೆ ಅವರನ್ನು ಮುಖ್ಯಮಂತ್ರಿಯಂತಹ ಉನ್ನತ ಸ್ಥಾನಕ್ಕೆ ತಂದು ಕೂರಿಸಿದ್ದು ಖಂಡಿತವಾಗಿಯೂ ಅವರ ಜಾತಿ ಮಾತ್ರ ಅಲ್ಲ. ಈ ರಾಜ್ಯದಲ್ಲಿ ತನ್ನ ಸಮುದಾಯದ ನಾಯಕನೊಬ್ಬನನ್ನು ಮುಖ್ಯಮಂತ್ರಿ ಮಾಡುವ ರಾಜಕೀಯ ಶಕ್ತಿಯನ್ನು ಕುರುಬ ಸಮುದಾಯ ಇನ್ನೂ ತನ್ನದಾಗಿಸಿಕೊಂಡಿಲ್ಲ. ಲಿಂಗಾಯತ, ಒಕ್ಕಲಿಗ ಸಮುದಾಯಕ್ಕೆ ಇರುವ ಸಂಘಟಿತ ಶಕ್ತಿ, ಆರ್ಥಿಕ, ರಾಜಕೀಯ ಬಲ ಈ ಸಮುದಾಯಕ್ಕಿಲ್ಲ. ಇವೆಲ್ಲದರ ನಡುವೆಯೂ ತನ್ನ ಪ್ರತಿಭೆ, ಮುತ್ಸದ್ದಿತನ, ಜನಪರ ಚಿಂತನೆಗಳನ್ನು ಬಳಸಿಕೊಂಡು ಸಿದ್ದರಾಮಯ್ಯ ರಾಜಕೀಯದಲ್ಲಿ ಮುನ್ನೆಲೆಗೆ ಬಂದಿದ್ದಾರೆ. ಅಲ್ಪಸಂಖ್ಯಾತರು, ದಲಿತರು, ಹಿಂದುಳಿದವರ್ಗ, ಎಲ್ಲ ಶೋಷಿತ ಸಮುದಾಯಗಳು ಅವರು ಮುಖ್ಯಮಂತ್ರಿಯಾಗುವುದಕ್ಕೆ ಕೈ ಜೋಡಿಸಿವೆ. ಮುಖ್ಯಮಂತ್ರಿಯಾದ ಬಳಿಕ ತನ್ನ ಜಾತಿಯ ಬಗ್ಗೆ ಅವರು ಒಲೈಕೆಯನ್ನು ತೋರಿಸಿದ ಆರೋಪಗಳು ಹಲವು ಬಾರಿ ಕೇಳಿ ಬಂದಿವೆ. ಮುಖ್ಯಮಂತ್ರಿಯಾಗಿ ದುರ್ಬಲ ಸಮುದಾಯವಾಗಿರುವ ಕುರುಬರ ಪರವಾಗಿ ಒಲೈಕೆ ಮಾಡುವುದು ತಪ್ಪೇನು ಅಲ್ಲ. ಆದರೆ ಅವರೆಂದೂ ತನ್ನ ಜಾತಿಯನ್ನಷ್ಟೇ ಅರ್ಹತೆಯನ್ನಾಗಿಸಿ ಮುಖ್ಯಮಂತ್ರಿಯಾದವರಲ್ಲ ಎನ್ನುವುದು ಇಲ್ಲಿ ಮುಖ್ಯವಾಗುತ್ತದೆ.

• ಹಿಂದಿನ ಸಂಚಿಕೆಯಿಂದ

1ನೆಯ ಅಧ್ಯಾಯ

ತಿವಾದ ಮುಖವುಳ್ಳವನೂ ಆಗಿದ್ದಾನೆ. ಮತ್ತು ವಿಶಾಲವಾದ ವಕ್ಷಃಸ್ಥಳವುಳ್ಳವನೂ ಲಕ್ಷಣಯುಕ್ತ ಹಜಜ ಹಪಗಲುಳ್ಳವನೂ ಶತ್ರುಗಳನ್ನು ನಿಗ್ರಹಿಸುವಂಥವನೂ ಆಗಿದ್ದಾನೆ. ಆತನು ಮೊಳಕಾಲು ಪರ್ಯಂತ ಲಂಬಾಯಮಾನವಾದ ಹಸ್ತಗಳುಳ್ಳವನಾಗಿ, ಶೋಭನವಾದ ಲಕ್ಷಣಗಳುಳ್ಳ ಶಿರಸ್ಸೂ ಲಲಾಟಪ್ರದೇಶವೂ ಉಳ್ಳವನಾಗಿ ಮಹಾಪರಾಕ್ರಮವುಳ್ಳವನಾಗಿ, ಸರ್ವಸಮನಾಗಿ, ಅತ್ಯುನ್ನತವಲ್ಲದೆ ಅತಿಹ್ರಸ್ವವಲ್ಲದೆ ಇರುವ ಹಸ್ತಪಾದಗಳುಳ್ಳವನಾಗಿ ಮನೋಹರವಾದ ಶರೀರಕಾಂತಿಯುಳ್ಳವನಾಗಿ, ಪ್ರತಾಪಶಾಲಿಯಾಗಿ ಇದ್ದಾನೆ. ಆ ರಘುನಾಥನು ಹೊಂಬಣ್ಣವಾದ ವಕ್ಷಃಸ್ಥಳವುಳ್ಳವನು, ವಿಶಾಲವಾದ ಕಣ್ಣುಗಳನ್ನುಳ್ಳವನು. ಸಾಮುದ್ರಿಕ ಶಾಸ್ತ್ರೋಕ್ತವಾದ ಮೂವತ್ತೆರಡು ಲಕ್ಷಣಗಳುಳ್ಳವನು.

ಧರ್ಮರಹಸ್ಕವನ್ನು ಬಲ್ಲವನು. ಸತ್ಯಪ್ರತಿಜ್ಞನು. ಪ್ರಜಾಪರಿಪಾಲನಾಸಕ್ತನು. ಆತನು ಕೀರ್ತಿ ವಂತನೂ ಸುಜ್ಞಾನಿಯೂ ಶುಚಿಯಾದವನೂ ಸಮಸ್ತಪ್ರಾಣಿಗಳಿಗೂ ಸುಲಭನೂ ಚಿತ್ತೈಕಾಗ್ರತೆ ಯುಳ್ಳವನೂ ಬ್ರಹ್ಮದೇವನಿಗೆ ಸಮಾನವಾದ ಸಂಪತ್ತುಳ್ಳವನೂ ಆಗಿದ್ದಾನೆ.

ಆ ರಘುನಾಥನು ಸಮಸ್ತ ಪ್ರಾಣಿಗಳಿಗೂ ರಕ್ಷಕನಾಗಿ, ಧರ್ಮವಿರೋಧಿಗಳನ್ನು ಸಂಹರಿ ಸುವವನಾಗಿ, ಕ್ಷತ್ರಿಯಧರ್ಮ ವನ್ನು ಪರಿಪಾಲಿಸುವವನಾಗಿದ್ದಾನೆ.. ಅವನು ಸಕಲ ವರ್ಣಧರ್ಮಸಂರಕ್ಷಕನೂ ಸ್ವಜನರನ್ನು ಅನುಗ್ರಹಿಸಿ ರಕ್ಷಿಸುವವನೂ ಸಮಸ್ತ ವೇದಗಳು ಮತ್ತು ಶಿಕ್ಷಾ ಕಲ್ಪ ವ್ಯಾಕರಣ ಜ್ಯೋತಿಷ ಛಂದಸ್ಸು ನಿರುಕ್ತಗಳೆಂಬ ಷಡಂಗಗಳ ತತ್ತ್ವವನ್ನು ಬಲ್ಲವನೂ ಧನುರ್ವೇದದಲ್ಲಿ ಅತಿಕುಶಲನೂ ಶಬ್ದ ತರ್ಕ ಮೊದಲಾದ ಸಮಸ್ತ ಶಾಸ್ತ್ರಗಳ ತತ್ತ್ವರಹಸ್ಕ್ಯವನ್ನು ಬಲ್ಲವನೂ ಉತ್ತಮವಾದ ಸ್ಮರಣಶಕ್ತಿಯುಳ್ಳ ವನೂ ಉತ್ತರೋತ್ತರ ಪಲ್ಲವಿಸುವ ಬುದ್ಧಿಯುಳ್ಳವನೂ ಸರ್ವಜನಪ್ರಿಯನೂ ಆಗಿದ್ದಾನೆ. ಅವನು ಸಮಸ್ತ ಪುಣ್ಯನ ದಿಗಳಿಂದ ಮೆರೆಯುವ ಸಮುದ್ರರಾಜನಂತೆ ಯಾವಾಗಲೂ ಸಮಸ್ತ ಸತ್ಪುರುಷರಿಂದ

ಸೇವಿಸಲ್ಪಡುತ್ತಿರುವನೆ. ಆ ರಘುನಾಥನು ಮಹಾಪೂಜ್ಯನಾದವನು ; ಸಮಸ್ತ ಪ್ರಾಣಿಗಳಲ್ಲಿಯೂ ಸಮದೃಷ್ಟಿಯುಳ್ಳವನು; ಯಾಗಾಗಲೂ ನೋಡುವುದಕ್ಕೆ ಆನಂದವನ್ನು ಕೊಡತಕ್ಕವನು. ಈ ಪ್ರಕಾರವಾಗಿ ಸಮಸ್ತ ಸದ್ಗುಣಶಾಲಿಯಾದ ಶ್ರೀರಾಮನಂ ಮಾತೆಯಾದ ಕೌಸಲ್ಯಾದೇಷ್ಟಿಗೆ. ,ಅತಿ

ಶ್ರೀಚಾನುರಾಜೋಕ್ತಿ ವಿಲಾಸವೆಂಬ ಕನ್ನಡ ರಾಮಾಯಣ 3

ಹರ್ಷದನ್ನುಂಟುಮಾಡುವನು, ಗಾಂಭೀರ್ಯಗುಣದಲ್ಲಿ ಸಮುದ್ರಕ್ಕೆ ಸರಿಯಾದವನು ಧೈರ್ಯದಲ್ಲಿ ಹಿಮವತ್ಪರ್ವತಕ್ಕೆ ಸಮಾನನು ; ಪರಾಕ್ರಮದಲ್ಲಿ ವಿಷ್ಣುವಿಗೆ ಸರಿಯಾದವನು, ದರ್ಶನದಲ್ಲಿ ಚಂದ್ರನ ಹಾಗೆ ಮನೋಹರನಾಗಿರುವನು, ಕೋಪದಲ್ಲಿ ಕಾಲಾಗ್ನಿಗೆ ಸದೃಶನಾದವನು ; ಕ್ಷಮೆಯಲ್ಲಿ ಭೂಮಿಗೆ ಸಮಾನನಾದವನು , ತ್ಯಾಗದಲ್ಲಿ ಕುಬೇರನಿಗೆ ಸಮಾನನು ಸತ್ವದಲ್ಲಿ ಸಾಕ್ಷಾತ್ ಧರ್ಮದೇವತೆಯ

ಮುಂದುವರಿಯುವುದು...

ಭೂಮಿ ಖರೀದಿಗೂ ಮುನ್ನ ದಾಖಲೆಗಳನ್ನು ಚೆಕ್ ಮಾಡಿಕೊಳ್ಳಿ

■ ಆಸ್ತಿಯನ್ನು ಖರೀದಿಸುವ ಮೊದಲು ಸಂಬಂಧಿಸಿದ ಕೆಲವು ದಾಖಲೆಗಳನ್ನು ನೋಡುವುದು ಬಹಳ ಮುಖ್ಯ

• ಉದಯವಾಹಿನಿ ಬೆಂಗಳೂರು

ಇಂದಿನ ಬದುಕಿನಲ್ಲಿ ಮಧ್ಯಮ ವರ್ಗದವರು ಹೇಗೋ ತಮ್ಮ ಖರ್ಚುಗಳನ್ನು ಭರಿಸುತ್ತಿದ್ದಾರೆ. ಅಲ್ಪ ಸ್ವಲ್ಪ ಹಣ ಉಳಿಸಿ ಭವಿಷ್ಯಕ್ಕಾಗಿ ಆಸ್ತಿ ಖರೀದಿಸುವ ಯೋಜನೆ ಹಾಕಿಕೊಂಡರೂ ಹಲವು ಬಾರಿ ವಂಚನೆಗೆ ಬಲಿಯಾಗುತ್ತಾರೆ. ಈ ಕಾರಣದಿಂದಾಗಿ, ಒಬ್ಬ ವ್ಯಕ್ತಿಯು ತನ್ನ ಜೀವನದ ಉಳಿತಾಯವನ್ನು ಒಂದೇ ಕ್ಷಣದಲ್ಲಿ ಕಳೆದುಕೊಳ್ಳುತ್ತಾನೆ. ಅಂತಹ ಯಾವುದೇ ನಷ್ಟವನ್ನು ತಪ್ಪಿಸಲು, ಯಾವುದೇ ಆಸ್ತಿಯನ್ನು ಖರೀದಿಸುವ ಮೊದಲು ಅದಕ್ಕೆ ಸಂಬಂಧಿಸಿದ ಕೆಲವು ದಾಖಲೆಗಳನ್ನು ನೋಡುವುದು ಬಹಳ ಮುಖ್ಯ.

ಭೂಮಿಯ ಮಾಲೀಕತ್ವ ಮದರ್ ಡೀಡ್ ಎನ್ನುವುದು ಭೂಮಿಯನ್ನು ಖರೀದಿಸುವ ಮೊದಲು ನೋಡಬೇಕಾದ ದಾಖಲೆಯಾಗಿದೆ. ಈ ದಾಖಲೆಯಿಂದ ನೀವು ಭೂಮಿಯ ಮಾಲೀಕತ್ವವು ನಿಜವಾಗಿ ಅವನಿಗೆ ಸೇರಿದೆಯೇ ಅಥವಾ ಬೇರೆಯವರಿಗೆ ಸೇರಿದೆಯೇ ಎಂಬುದನ್ನು ನೀವು ಸ್ಪಷ್ಟವಾಗಿ ತಿಳಿದುಕೊಳ್ಳಬಹುದು.

ಉದಯವಾಹಿನಿ ಚಿತ್ರ

ಅನೇಕ ಬಾರಿ ಬೇರೆಯವರ ನೋಂದಣಿ

ಇದಲ್ಲದೆ, ಮಾರಾಟಗಾರರಿಂದ ಖರೀದಿದಾರರಿಗೆ ಭೂಮಿಯ ಮಾಲೀಕತ್ವವನ್ನು ವರ್ಗಾಯಿಸುವ ಮಾರಾಟದ ದಾಖಲೆಯ ದಾಖಲೆಯೂ ಇದೆ. ಹಳೆಯ ನೋಂದಾವಣೆ ಭೂಮಿಯನ್ನು ಖರೀದಿಸುವ ಮೊದಲು, ಈ ಸಮಯದಲ್ಲಿ ಹಳೆಯ ನೋಂದಾವಣೆ ನಿಮಗೆ ತೋರಿಸಲಾಗುತ್ತದೆ ಎಂದು ವಿಶೇಷ ಕಾಳಜಿ ವಹಿಸಿ. ಇದರಿಂದ ನೀವು ಖರೀದಿಸುತ್ತಿರುವ ಜಮೀನು ಯಾರ ಹೆಸರಿಗೆ ನೋಂದಣಿಯಾಗಿದೆ ಎಂಬುದು ಸ್ಪಷ್ಟವಾಗುತ್ತದೆ. ಅನೇಕ ಬಾರಿ ಬೇರೆಯವರ ಹೆಸರಿನಲ್ಲಿ ನೋಂದಣಿಯಾಗಿರುವ ಜಮೀನುಗಳನ್ನು ಜನರು ನಿಮಗೆ ಮಾರಾಟ ಮಾಡಬಹುದು. ಗುರುತಿನ ಪ್ರಮಾಣಪತ್ರ ಗುರುತಿನ ಚೀಟಿ ಇಂದು ಪ್ರಮುಖ ದಾಖಲೆಯಾಗಿದೆ. ನೀವು ಭೂಮಿಯ ಮಾಲೀಕರನ್ನು ತಿಳಿದಿಲ್ಲದಿದ್ದರೆ, ಮೊದಲು ಗುರುತಿನ ಪ್ರಮಾಣಪತ್ರವನ್ನು ಪರಿಶೀಲಿಸಿ. ಇದಲ್ಲದೆ, ಭೂಮಿಯನ್ನು ಖರೀದಿಸುವ ಮೊದಲು, ನೀವು ಮಾಲೀಕರ ಸಂಪೂರ್ಣ ವಿಳಾಸವನ್ನು ಹೊಂದಿರಬೇಕು. ಇದಕ್ಕಾಗಿ ನೀವು ಅವರ ವಿಳಾಸ ಪುರಾವೆ, ಬಿಲ್ ಅಥವಾ ಡ್ರೈವಿಂಗ್ ಲೈಸೆನ್ಸ್ ಅನ್ನು ನೋಡಬಹುದು.

ಇದರಲ್ಲಿ ಮಾಲೀಕನಿಗೆ ಸ್ವಾಧೀನ ಪತ್ರ ಇರುವುದು ಕೂಡ ಬಹಳ ಮುಖ್ಯವಾಗಿದ್ದು, ಅದರಲ್ಲಿ ಜಮೀನಿನ ಸ್ವಾಧೀನದ ದಿನಾಂಕವನ್ನು ನಮೂದಿ ಸಲಾಗಿದೆ. ಕೊನೆಯದಾಗಿ, ಆ ಆಸ್ತಿಯ ಮೇಲಿನ ತೆರಿಗೆಯನ್ನು ಪಾವತಿಸಲಾಗಿದೆಯೇ ಅಥವಾ ಇಲ್ಲವೇ ಎಂಬುದನ್ನು ಸಹ ನೀವು ಪರಿಶೀಲಿಸಬೇಕು. ಯಾವುದೇ ಆಸ್ತಿಯನ್ನು ಖರೀದಿಸುವ ಮೊದಲು ನೀವು ಈ ಪ್ರಮುಖ ದಾಖಲೆಗಳನ್ನು ಪರಿಶೀಲಿಸಿದರೆ, ನಂತರ ವಂಚನೆಯ ಅಪಾಯ ವಿಲ್ಲ. ಆದ್ದರಿಂದ, ಅವಸರದ ಬದಲು, ಸ್ವಲ್ಪ ಸಮಯ ಕಾಯುವುದು ಮತ್ತು ಎಲ್ಲಾ ದಾಖಲೆಗಳನ್ನು ಎಚ್ಚರಿಕೆಯಿಂದ ಪರಿಶೀಲಿಸುವುದು ಉತ್ತಮ.

> ವಕೀಲರ ಅಧಿಕಾರ ಅನೇಕ ಸಂದರ್ಭಗಳಲ್ಲಿ ಭೂಮಿಯನ್ನು ಮಾರಾಟ ಮಾಡುವ ವ್ಯಕ್ತಿಯ ಹೆಸರಿನಲ್ಲಿ ಜಮೀನು ಇಲ್ಲದಿರುವುದು ಸಂಭವಿಸುತ್ತದೆ. ಇದಕ್ಕಾಗಿ ವ್ಯಕ್ತಿಗೆ ವಕೀಲರ ಅಧಿಕಾರವಿದೆಯೇ ಅಥವಾ ಇಲ್ಲವೇ ಎಂಬುದನ್ನು ನೀವು ನೋಡಬೇಕು. ಇದಲ್ಲದೆ, ಎನ್ಕಂಬರೆನ್ಸ್ ಪ್ರಮಾಣಪತ್ರವನ್ನು ನೋಡುವುದು ಸಹ ಮುಖ್ಯವಾಗಿದೆ. ಈ ಪ್ರಮಾಣಪತ್ರವು ಭೂಮಿಗೆ ಸಂಬಂಧಿಸಿದ ಎಲ್ಲಾ ವ್ಯವಹಾರಗಳ ದಾಖಲೆಯನ್ನು ಒಳಗೊಂಡಿದೆ. ಇದಲ್ಲದೆ, ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಸಹ ನೋಡಿ, ಅದನ್ನು ಮಾರಾಟ ಮಾಡಲು ಅಥವಾ ಖರೀದಿಸಲು ಯಾರಿಗೂ ಯಾವುದೇ ಆಕ್ಷೇಪಣೆ ಇಲ್ಲ ಎಂದು ತೋರಿಸುತ್ತದೆ.

ಸಿಎಂ ಕೊರಳಿಗೆ ಬಿಡಿಎ ಹಗರಣ ಸುತ್ತಿಕೊಳ್ಳಲಿದೆ

• ಉದಯವಾಹಿನಿ ಬೆಂಗಳೂರು

ಬಿಡಿಎ ಕಾಂಪ್ಲೆಕ್ಸ್‌ಗಳನ್ನು ಖಾಸಗೀಕರಣ ಮಾಡಲು ಸಚಿವರು, ಶಾಸಕರು ಮುಂದಾಗಿದ್ದು, ಇದನ್ನು ತಡೆಯದಿದ್ದಲ್ಲಿ ಮುಡಾ ಹಗರಣದಂತೆ ಬಿಡಿಎ ಕಾಂಪ್ಲೆಕ್ಸ್ ಹಗರಣ ರೂಪದಲ್ಲಿ ಸಿಎಂ ಸಿದ್ದರಾಮಯ್ಯ ಕೊರಳಿಗೆ ಸುತ್ತಿಕೊಳ್ಳಲಿದೆ ಎಂದು ಆಮ್ ಆದ್ಮಿ ಪಾರ್ಟಿಯ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಭವಿಷ್ಯ ನುಡಿದರು. ನಗರದ ಫ್ರೀಡಂ ಪಾರ್ಕ್‌ನಲ್ಲಿ ನಡೆದ ಬಿಡಿಎ ಕಾಂಪ್ಲೆಕ್ಸ್ ಉಳಿಸಿ ನಾಗರಿಕ ಪ್ರತಿರೋಧ ಸಮಾವೇಶ'ದಲ್ಲಿ ಭಾಗವಹಿಸಿ ಮಾತನಾಡಿದರು. 2008ರಿಂದ ಈ ಗುತ್ತಿಗೆ ವ್ಯವಹಾರ ಆರಂಭವಾಗಿದೆ. ಇಂದಿರಾನಗರದಲ್ಲಿ ಮೊದಲು ಬಿಡಿಎ ಆಸ್ತಿಯನ್ನು ಗುತ್ತಿಗೆ ನೀಡಲಾಯಿತು. ಕಿಕ್‌ಬ್ಯಾಕ್ ಪಡೆಯುವುದರಲ್ಲಿ ಹೆಚ್ಚು ಕಡಿಮೆಯಾಗಿ, ಟೆಂಡರ್ ಕರೆಯುವುದನ್ನು ರದ್ದು ಮಾಡಲಾಗಿದೆ. ಈಗ ಗುತ್ತಿಗೆ ಹೆಸರಿನಲ್ಲಿ 7 ಕಾಂಪ್ಲೆಕ್ಸ್‌ಗಳನ್ನು ಖಾಸಗಿಯವರಿಗೆ ನೀಡಲು ಹೊರಟಿದೆ ಎಂದು ದೂರಿದರು. 2020ರಲ್ಲಿ ಯಡಿಯೂರಪ್ಪ ಸಿಎಂ ಆಗಿದ್ದಾಗ ಗುತ್ತಿಗೆ ಕೊಡುವುದನ್ನು ತಡೆ ಹಿಡಿಯಲಾಯಿತು. ಶಾಸಕರಾದ ಹ್ಯಾರಿಸ್‌ಗೆ ಸಂಬಂಧಪಟ್ಟ ಒಂದು ಕಂಪನಿ, ಗರುಡಾಚಾರ್‌ಗೆ ಸಂಬಂಧಪಟ್ಟ ಕಂಪನಿಗೆ ಗುತ್ತಿಗೆ ಕೊಡಲು ಹೊರಟಿದೆ. ಶೇ.65 ಖಾಸಗಿಯವರಿಗೆ ಉಳಿದ ಶೇ.35 ಬಿಡಿಎಗೆ ಎಂದು ಹೇಳಲಾಗಿದೆ. ಮೊದಲ 30

ವಾಲ್ಮೀಕಿ ನಿಗಮದ ಹಣ ದುರ್ಬಳಕೆ ತುಕಾರಾಂ ರಾಜೀನಾಮೆ ನೀಡಲಿ

ಪರಿಶಿಷ್ಟ ಪಂಗಡದ ಸುಮಾರು 92 ಕೋಟಿ ರೂಪಾಯಿಗಳ ಅಭಿವೃದ್ಧಿ ಹಣವನ್ನು ದುರುಪಯೋಗ, ಪರಿಶಿಷ್ಟರ ಶೋಷಣೆ ಎಷ್ಟು ಸರಿ

• ಉದಯವಾಹಿನಿ, ಬಳ್ಳಾರಿ

ಪರಿಶಿಷ್ಟ ಪಂಗಡ ಸಮುದಾಯದ ಜನರ ಅಭಿವೃದ್ಧಿಗೆ ನಿಗದಿಪಡಿಸಿದ್ದ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದ ಅಕ್ರಮ ನಡೆಸಿದ ಹಣದಲ್ಲಿ ಸುಮಾರು 21 ಕೋಟಿ 19 ಲಕ್ಷ ರೂಪಾಯಿಗಳನ್ನು ತನ್ನ ಲೋಕಸಭಾ ಚುನಾವಣೆಗೆ ಬಳಸಿಕೊಂಡು ಚುನಾವಣೆಯಲ್ಲಿ ಭ್ರಷ್ಟಾಚಾರ ಮತ್ತು ಅಕ್ರಮ ನಡೆಸಿ ಜಯಗಳಿಸಿದ್ದಾರೆ ಅವರು ಹಣದ ಬಲದಿಂದಲೇ ಗೆದ್ದಿದ್ದಾರೆ ಹೊರತು ಜನ ಬಲದಿಂದ ಅಲ್ಲ.

ಕಾರಣ ಇ ತುಕಾರಾಮರವರು ಚುನಾವಣಾ ಅಕ್ರಮದ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ಜಾತ್ಯತೀತ ಜನತಾದಳ ಯುವ ಘಟಕದ ರಾಜ್ಯ ಕಾರ್ಯಧ್ಯಕ್ಷರಾದ ರಾಜು ನಾಯಕ ಆಗ್ರಹಿಸಿದರು. ಅವರು ಶುಕ್ರವಾರ ನಗರದ ಕೆಸಿ ರಸ್ತೆಯಲ್ಲಿರುವ ಜಿಲ್ಲಾ ಜನತಾದಳ ಜಾತ್ಯತೀತ ಕಚೇರಿಯಲ್ಲಿ ವಿಧಾನಸಭಾ ಚುನಾವಣಾ ಪರಾಜಿತ ಅಭ್ಯರ್ಥಿ ಅನಿಲ್ ಲಾಡ್ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿಯ ನ್ನು ನಡೆಸಿ ಮಾತನಾಡಿ, ಕಾಂಗ್ರೇಸ್ ಸರ್ಕಾರ ಸಂವಿಧಾನದ ಹೆಸರಿನಲ್ಲಿ ಮತ್ತು ಪರಿಶಿಷ್ಟ ಜಾತಿ ಮತ್ತು ಪಂಗಡ, ಹಿಂದುಳಿದ ವರ್ಗಗಳ ಕಲ್ಯಾಣ ಮಾಡುತ್ತೇವೆ ಎಂದು ಹೇಳುತ್ತಾ ಅಧಿಕಾರಕ್ಕೆ ಬಂದು ಈಗ ಅದೇ ಪರಿಶಿಷ್ಟ ಪಂ ಗಡದ ಸುಮಾರು 92 ಕೋಟಿ ರೂಪಾಯಿಗಳ ಅಭಿವೃದ್ಧಿ ಹಣವನ್ನು ದುರುಪಯೋಗ ಪಡಿಸಿಕೊಂಡಿದ್ದಾರೆ, ಪರಿಶಿ ಷ್ಟ ಪಂಗಡದ ಹಣವನ್ನು ಪರಿಶಿಷ್ಟರಿಗೆ ಮೀಸಲಿದ್ದ ಕ್ಷೇತ್ರದಲ್ಲಿ ಈ ಹಣವನ್ನು ದುರುಪಯೋಗವಾಗಿದೆ ಪರಿಶಿಷ್ಟ ಪಂಗಡದವರಿಂದಲೇ ಪರಿಶಿಷ್ಟರ ಶೋಷಣೆ ಎಷ್ಟು ಸರಿ ಎಂದು ಅವರು ಪ್ರಶ್ನಿಸಿದರು. ಈ ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ, ಪಕ್ಷದ ಹಿರಿಯ ಮುಖಂಡರಾದ ಕುರೆಕೊಪ್ಪ ಸೋಮಪ್ಪ, ನಗರಾಧ್ಯಕ್ಷ ಮೀನಳ್ಳಿ ಹೊನ್ನೂರ ಸ್ವಾಮಿ, ರೈತ ಘಟಕದ ಅಧ್ಯಕ್ಷ ಬೈಲೂರು ಲಕ್ಷ್ಮಿಕಾಂತ್ ರೆಡ್ಡಿ, ಕಿರಣ್ ಕುಮಾರ್, ಚರಕುಂಟೆ ಈರಣ್ಣ, ಮಹಿಳಾ ಘಟಕದ ಅಧ್ಯಕ್ಷರಾದ ಭವಾನಿ, ಮೈನಾರಿಟಿ ಘಟಕದ ಅಧ್ಯಕ್ಷರಾದ ರುಮಾನ, ಹೊನ್ನೂರ್ ವಲಿ, ಭವಾನಿ ನಾಗವೇಣಿ ಯಶೋಧ ಶ ಬಾನ ನೀಲ ರೇಣುಕಾ ಸಮೀಲ್ ಬಾನು ಇತರರಿದ್ದರು.

ಉದಯವಾಹಿನಿ ಚಿತ್ರ

ರಾಜು ನಾಯಕ ಆಗ್ರಹ

ಸಂಡೂರಿನ ವಿಧಾನಸಭಾ ಉಪಚುನಾವಣೆಯಲ್ಲಿ ಜೆಡಿಎಸ್ ಪಕ್ಷದಿಂದ ಅಭ್ಯರ್ಥಿಯನ್ನು ಕಣಕ್ಕಿಳಿಸಲಾಗುವುದು ಆದರೂ ಸಹ ಪಕ್ಷದ ಮುಖಂಡರು ತೀರ್ಮಾನವೇ ಅಂತಿಮವಾಗಿರುತ್ತದೆ
–ಅನಿಲ್ ಲಾಡ್, ಮಾಜಿ ಶಾಸಕ

ಹಣ ಬೆಂಗಳೂರಿನ ಚಿನ್ನದ ಅಂಗಡಿ ಮಾಲೀಕರಿಗೆ ವರ್ಗಾವಣೆ

ಈ ಮೊದಲು ಇದೇ ನಿಗಮದ ಅಕ್ರಮ ಹಣವನ್ನು ತೆಲಂಗಾಣ, ಆಂಧ್ರಪ್ರದೇಶದ ವಿಧಾನಸಭಾ ಚುನಾವಣೆಗೆ ಬಳಸಿಕೊಳ್ಳಲಾಗಿತ್ತು. ಈ ರೀತಿ ಅಕ್ರಮವಾಗಿ ನಿಗಮದ ಹಣ ಹೈದರಾಬಾದ್‌ನ ಬೇರೆ ಬೇರೆ ವಿವಿಧ ಬ್ಯಾಂಕ್ ಖಾತೆಗಳಿಗೆ ಜಮೆಯಾಗಿ ಮತ್ತೆ ಅದೇ ಹಣ ಬೆಂಗಳೂರಿನ ಚಿನ್ನದ ಅಂಗಡಿ ಮಾಲೀಕರಿಗೆ ವರ್ಗಾವಣೆಗೊಂಡಿತ್ತು. ಇದೇ ಹಣವನ್ನು ಮಾಜಿ ಶಾಸಕ ಬಿ ನಾಗೇಂದ್ರ ಅವರು ಬಳ್ಳಾರಿ ಲೋಕಸಭಾ ಚುನಾವಣೆಯಲ್ಲಿ ಅಕ್ರಮಕ್ಕೆ ಬಳಸಿಕೊಂಡಿದ್ದಾರೆ ಇದು ಇ ಡಿ ತನಿಖೆಯಲ್ಲಿ ಸಾಬೀತಾಗಿದೆ, ಕಾರಣ ಕೂಡಲೇ ಸಂಸದ ತುಕಾರಾಂ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದರು.

ಮಕ್ಕಳಲ್ಲಿ ಅಪೌಷ್ಠಿಕತೆ, ರಕ್ತಹೀನತೆ ಗುರುತಿಸಿ, ಸುಧಾರಿತ ಪೌಷ್ಠಿಕತೆಯಲ್ಲಿ ತೊಡಗಿಸಿ

• ಉದಯವಾಹಿನಿ, ಚಿತ್ರದುರ್ಗ

ಮಕ್ಕಳಲ್ಲಿ ಅಪೌಷ್ಠಿಕತೆ ಮತ್ತು ರಕ್ತಹೀನತೆ ಗುರುತಿಸಿ ಮಕ್ಕಳನ್ನು ಸುಧಾರಿತ ಪೌಷ್ಟಿಕತೆಯಲ್ಲಿ ತೊಡಗಿಸಬೇಕು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್ ಸಲಹೆ ನೀಡಿದರು.

ನಗರದ ಜಿಲ್ಲಾ ಆರೋಗ್ಯಾಧಿಕಾರಿಗಳ ಸಭಾಂಗಣದಲ್ಲಿ ಶುಕ್ರವಾರ ಹಿರಿಯೂರು, ಹೊಸದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಿಗೆ ಮಕ್ಕಳ ಸುಧಾರಿತ ಪೌಷ್ಟಿಕತೆಗಾಗಿ ಆರೋಗ್ಯ ಪ್ರಕ್ರಿಯೆ ಸಾಮಾರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಅಪೌಷ್ಠಿಕತೆಯ ಮಕ್ಕಳ ಪ್ರಮಾಣ ತಗ್ಗಿಸಲು ಈ ತರಬೇತಿ ಕಾರ್ಯಾಗಾರ ಒಂದು ನೂತನ ವಿಧಾನವಾಗಿದೆ. ಪ್ರತಿ ಗ್ರಾಮಗಳಲ್ಲಿ ಮಕ್ಕಳಲ್ಲಿ ಕಂಡು ಬರುವ ಅಪೌಷ್ಟಿಕತೆಯನ್ನು ಗುರಿತಿಸಿ ಆ ಮಕ್ಕಳಿಗೆ ಸ್ಥಳೀಯವಾಗಿ ದೊರೆಯುವ ಸುಧಾರಿತ ಪೌಷ್ಠಿಕಾಹಾರ ಸೇವನೆಗೆ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ತಾಯಂದಿರಿಗೆ ಸಲಹೆ ಮಾಹಿತಿ ಅರಿವು ಮೂಡಿಸಿ ಸುಧಾರಿತ ಪೌಷ್ಠಿಕ ಪೋಷಣೆಯಲ್ಲಿ ತೊಡುಗುವಂತೆ ಮಾಡುವುದು ತರಬೇತಿಯ ಮುಖ್ಯ ಉದ್ದೇಶ ಎಂದರು. 6 ವರ್ಷದೊಳಗಿನ ಮಕ್ಕಳಿಗೆ ಸಾಂಸ್ಥಿಕ ಹಾಗೂ ಸಮುದಾಯ ಮಟ್ಟದಲ್ಲಿ ಅಪೌಷ್ಠಿಕ ನಿವಾರಣೆಗಾಗಿ ಆರೈಕೆ ಮತ್ತು ಚಿಕಿತ್ಸೆ, ಪೌಷ್ಠಿಕ ಪುನಃಶ್ಚೇತನ ಸಾರ್ವಜನಿಕ ಆರೋಗ್ಯ ಸೇವೆಗಳೊಂದಿಗೆ ಬಲಪಡಿಸಿ ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾಗಿ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ, ಬಿ.ಜಾನಕಿ, ಲಲಿತಮ್ಮ, ಪೋಷಣ್ ಅಭಿಯಾನ ವ್ಯವಸ್ಥಾಪಕ ಕರಕಪ್ಪ ಮೇಟಿ ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು ಇದ್ದರು.

ಉದಯವಾಹಿನಿ ಚಿತ್ರ

ಗ್ರಾಮಮಟ್ಟದಲ್ಲಿ ಅಪೌಷ್ಠಿಕತೆಯ ಮಕ್ಕಳನ್ನು ಗುರುತಿಸಿ ಪಟ್ಟಿ ಮಾಡಿ ಜಿಲ್ಲಾ ಆಸ್ಪತ್ರೆಯಲ್ಲಿರುವ ಪೌಷ್ಠಿಕ ಪುನ:ಶ್ಚೇತನ ಕೇಂದ್ರಕ್ಕೆ ಕಳುಹಿಸಿ ಉಚಿತ ಆರೈಕೆ ಚಿಕಿತ್ಸೆ ಪೋಷಣೆ ಪಡೆದುಕೊಳ್ಳಲು ಅರಿವು ಮೂಡಿಸಿ – ಡಾ.ಬಿ.ವಿ.ಗಿರೀಶ್
ತಾಲ್ಲೂಕು ಆರೋಗ್ಯಾಧಿಕಾರಿ

ಆರ್‌ಟಿಪಿಎಸ್, ವೈಟಿಪಿಎಸ್, ಘಟಕಗಳು ತಾತ್ಕಾಲಿಕ ಬಂದ್

• ಉದಯವಾಹಿನಿ, ರಾಯಚೂರು

ರಾಜ್ಯದಲ್ಲಿ ಉತ್ತಮವಾಗಿ ಮಳೆಯಾಗಿದ್ದರಿಂದ ಜಲವಿದ್ಯುತ್ ಉತ್ಪಾದನೆ ಪ್ರಮಾಣ ಹೆಚ್ಚಿಸಿದ ಪರಿಣಾಮ ರಾಯಚೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರದ ಆರು ಘಟಕಗಳಲ್ಲಿ ಹಾಗೂ ಯರಮರಸ್ ಶಾಖೋತ್ಪನ್ನ ವಿದ್ಯುತ್ ಸ್ಥಾವರದ ಎರಡು ಘಟಕಗಳಲ್ಲಿ ತಾತ್ಕಲಿಕವಾಗಿ ವಿದ್ಯುತ್ ಉತ್ಪಾದನೆ ನಿಲ್ಲಿಸಲಾಗಿದೆ.ಬಹುತೇಕ ಜಲಾಶಯಗಳು ಭರ್ತಿ ಹಂತಕ್ಕೆ ತಲುಪಿದ್ದರಿಂದ ಜಲವಿದ್ಯುತ್ ಕೇಂದ್ರಗಳು ಕಾರ್ಯಾರಂಭಿಸಿವೆ. ಶಾಖೋತ್ಪನ್ನ ಘಟಕಗಳ ಉತ್ಪಾದನೆ ತಾತ್ಕಲಿಕವಾಗಿ ಬಂದ್ ಮಾಡಲು ಕರ್ನಾಟಕ ವಿದ್ಯುತ್ ನಿಗಮ (ಕೆಪಿಸಿ) ಮುಂದಾಗಿದೆ. ಮತ್ತೊಂದೆಡೆ ಪವನ ಮತ್ತು ಸೌರ ವಿದ್ಯುತ್ ಲಭ್ಯತೆಯೂ ಹೆಚ್ಚಾಗಿದ್ದರಿಂದ ಶಾಖೋತ್ಪನ್ನ ಘಟಕಗಳು ನಿರಾಳವಾಗಿವೆ. ಸದ್ಯ ಆರ್‌ಟಿಪಿಎಸ್‌ನ ಎರಡು ಘಟಕಗಳಲ್ಲಿ ಮಾತ್ರ ವಿದ್ಯುತ್ ಉತ್ಪಾದಿಸಲಾಗುತ್ತಿದೆ.

ವಾರ್ಷಿಕ ನಿರ್ವಹಣೆ ನಿಮಿತ್ತ 210 ಮೆಗಾವಾಟ್ ಸಾಮರ್ಥ್ಯದ 6ನೇ ಘಟಕದಲ್ಲಿ ಉತ್ಪಾದನೆ ಬಂದ್ ಮಾಡಲಾಗಿತ್ತು. ಇದೀಗ 1, 2, 3, 4 ಮತ್ತು 7ನೇ ಘಟಕಗಳಲ್ಲಿ ತಾತ್ಕಾಲಿಕವಾಗಿ ಉತ್ಪಾದನೆ ಬಂದ್ ಮಾಡಿದ್ದೇವೆ' ಎಂದು ಆರ್‌ಟಿಪಿಎಸ್ ಮುಖ್ಯ ಕಾರ್ಯನಿರ್ವಾಹಕ ನಿರ್ದೇಶಕ ಪಿ.ನಾರಾಯಣ ಗಜಕೋಶ ತಿಳಿಸಿದರು.7.55 ಲಕ್ಷ ಮೆಟ್ರಿಕ್ ಟನ್ ಕಲ್ಲಿದ್ದಲು ಸಂಗ್ರಹ ಇದೆ. ಸಿಂಗರೇಣಿ, ಮಹಾನದಿ ಕಲ್ಲಿದ್ದಲು ಸೇರಿ ವಿವಿಧ ಗಣಿಗಳಿಂದ ನಿತ್ಯ 8 ಕಲ್ಲಿದ್ದಲು ರೇಕ್‌ಗಳು ಬರುತ್ತಿದ್ದವು. ಉತ್ಪಾದನೆ ತಗ್ಗಿದ ಪರಿಣಾಮ ರೇಕ್‌ಗಳನ್ನೂ ತಗ್ಗಿಸಲಾಗಿದೆ. ಈಗ ದಿನಕ್ಕೆ 3ರಿಂದ 4 ರೇಕ್‌ಗಳು ಮಾತ್ರ ಬರುತ್ತಿವೆ' ಎಂದು ಮಾಹಿತಿ ನೀಡಿದರು. ವಿದ್ಯುತ್ ಬೇಡಿಕೆ ಇಲ್ಲದ ಪರಿಣಾಮ ವೈಟಿಪಿಎಸ್‌ನ ತಲಾ 800 ಮೆಗಾವಾಟ್ ಸಾಮರ್ಥ್ಯದ ಎರಡು ವಿದ್ಯುತ್ ಘಟಕಗಳ ವಿದ್ಯುತ್ ಉತ್ಪಾದನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ' ಎಂದು ವೈಟಿಪಿಎಸ್ ಮುಖ್ಯ ಕಾರ್ಯನಿರ್ವಾಹಕ ನಿರ್ದೇಶಕ ಗಂಗಾಧರ ಹೇಳಿದರು.

ಕಲ್ಲಿದ್ದಲು ವಿಭಾಗದಲ್ಲಿ 2.55 ಲಕ್ಷ ಮೆಟ್ರಿಕ್ ಟನ್ ಕಲ್ಲಿದ್ದಲು ಸಂಗ್ರಹ ಇದೆ. ವಿದ್ಯುತ್ ಬೇಡಿಕೆ ಇಲ್ಲದ ಪರಿಣಾಮ ವಿವಿಧ ಕಲ್ಲಿದ್ದಲು ಗಣಿಗಳಿಂದ 3 ದಿನಕ್ಕೊಮ್ಮೆ ಮಾತ್ರ ಒಂದು ಕಲ್ಲಿದ್ದಲು ರೇಕ್ ಬರುತ್ತಿದೆ. ವಿದ್ಯುತ್ ಘಟಕಗಳ ಉತ್ಪಾದನೆ ಆರಂಭವಿದ್ದಾಗ ದಿನಕ್ಕೆ 4 ಕಲ್ಲಿದ್ದಲು ರೇಕ್‌ಗಳು ಬರುತ್ತಿದ್ದವ್ವು' ಎಂದು ಅವರು ತಿಳಿಸಿದರು.

ಕಲಬುರ್ಗಿ ಜಿಲ್ಲೆಗೆ 25ಕೋಟಿ ರೂಪಾಯಿ ವಿಶೇಷ ಪ್ಯಾಕೇಜ್ ಘೋಷಿಸಲು: ರೈತ ಸಂಘ ಆಗ್ರಹ

ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಕಲಬುರ್ಗಿ ಜಿಲ್ಲೆಯಲ್ಲಿಯೇ ಒಟ್ಟಾರೆ ಅತಿವೃಷ್ಟಿ ಮಳೆಯಿಂದ ರೈತರು ಬೆಳೆದ ತೊಗರಿ,ಉದ್ದು,ಹೆಸರು ಹಾನಿಯಾದ ಬೆಳೆ ಸಮೀಕ್ಷೆ ನಡೆಸಿ ಉತ್ಪಾದನೆ ಆಧಾರದಲ್ಲಿ ಪರಿಹಾರ ನೀಡುಲು ರಾಜ್ಯ ಸರ್ಕಾರ ಜಿಲ್ಲೆಗೆ 25ಕೋಟಿ ರೂಪಾಯಿ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಕೆಪಿಆರ್ ಎಸ್ ತಾಲ್ಲೂಕಾಧ್ಯಕ್ಷ ಜಾಫರಖಾನ್ ಮಿರಿಯಾಣ ಆಗ್ರಹಿಸಿದರು.

ಪಟ್ಟಣದ ಬಸ್ ನಿಲ್ದಾಣದ ಎದುರು ಕರ್ನಾಟಕ ಪ್ರಾಂತ ರೈತ ಸಂಘದ ವತಿಯಿಂದ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಮೂಲಕ ಕೃಷಿ ಸಚಿವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಅನೇಕ ರೈತರ ಬೆಳೆ ನಷ್ಟವಾಗಿದ್ದು ವಿಮೆ ಕೂಡ ರೈತರಿಗೆ ಬಿಡುಗಡೆ ಮಾಡಬೇಕು. ಮುಂಗಾರು ಮಳೆ ಸಮಯಕ್ಕೆ ಆಗಮಿಸಿ ರೈತರ ಬೆಳೆಗಳು ಚನ್ನಾಗಿ ಬೆಳೆ ಬೆಳೆಯಿತು ಏಕಾಏಕಿ ಕಳೆದ ವಾರ 3–4 ದಿನಗಳು ಸತತವಾಗಿ ಸುರಿದ ಮಳೆಗೆ ಉದ್ದು ಹೆಸರು ಬೆಳೆಗಳು ಸಂಪೂರ್ಣವಾಗಿ ಮೊಳಕೆ ಒಡೆದು ಬೆಳೆ ನಷ್ಟವಾಗಿದೆ ಇದರಿಂದ ರೈತರು ಕಂಗಾಲಾಗಿದ್ದು ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲಾ ಎಂಬ ಪರಿಸ್ಥಿತಿ ರೈತರ ಆಗಿದೆ ಕಾರಣ ರೈತರ ನೆರವಿಗೆ ಸರ್ಕಾರ ಧಾವಿಸಬೇಕು. ಕಲಬುರ್ಗಿ ಜಿಲ್ಲೆಯಲ್ಲಿಯೇ ತೊಗರಿ 606884 ಹೆಕ್ಟೇರ್ ತೊಗರಿ ರೈತರು ಬಿತ್ತನೆ ಮಾಡಿದ್ದಾರೆ, ಹೆಸರುಬೆಳೆ 28655 ಹೆಕ್ಟೇರ್ ಬಿತ್ತನೆ ಮಾಡಿದ್ದಾರೆ, ಉದ್ದು 55444 ಹೆಕ್ಟೇರ್ ಭೂಮಿ ರೈತರು ಬಿತ್ತನೆ ಮಾಡಿದ್ದಾರೆ ಬೆಳೆ ಮೇಲೆ ನಂಬಿ ಕುಳಿತ ರೈತರು ಅತಿ ಯಾದ ಮಳೆಯಾಗಿರುವುದರಿಂದ ಸಂಪೂರ್ಣ ಬೆಳೆ ನಷ್ಟವಾಗಿ ಗಾಯದ ಮೇಲೆ ಬರೆ ಏಳೆದಂತಾಗಿದೆ,ಜಿಲ್ಲಾಡಳಿತ ಮತ್ತು ಸರ್ಕಾರ ರೈತರ ಸಂಕಷ್ಟಕ್ಕೆ ಸ್ಪಂದಿಸಿ ಸೂಕ್ತ ಪರಿಹಾರ ನೀಡಬೇಕು. ಸತತವಾಗಿ ಸುರಿದ ಮಳೆಯಿಂದ ತಾಲ್ಲೂಕಿನಾದ್ಯಂತ ರಸ್ತೆಗಳು ಹದಗೆಟ್ಟಿದ್ದು ಚುನಾಯಿತ ಜನಪ್ರತಿನಿಧಿಗಳು ಅಧಿಕಾರಿಗಳು ಜಿಲ್ಲಾಡಳಿತ ಗಮನಹರಿಸಿ ಶೀಘ್ರದಲ್ಲೇ ರಸ್ತೆ ದುರಸ್ತಿಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಪರಮೇಶ್ವರ ಕಾಂತಾ, ಶಂಕ್ರಯ್ಯಸ್ವಾಮಿ, ದೀಲೀಪ ನಾಗೂರ, ಶೇಖರ ಗೌಡಸಾಬ, ಕಾಶಪ್ಪ ಬ್ರೂಡೊಡ್ಡಿ, ಬಾಬರ್ ಅಹ್ಮದ್, ಮಹ್ಮದ್ ಮೌಲಾನಾ, ನಾರಾಯಣ ಕೋತ್ಲಾಪುರ, ಸೇರಿದಂತೆ ಅನೇಕರಿದ್ದರು.

ಗಣೇಶ ಉತ್ಸವದಲ್ಲಿ ರಂಗೋಲಿ ಸ್ಪರ್ಧೆ, ವಿಜೇತರಿಗೆ ಬಹುಮಾನ ವಿತರಣೆ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಸುಲೇಪೇಟ ಗ್ರಾಮದ ಅಣವೀರಭದ್ರೇಶ್ವರ ಗಜಾನನ ಮಂಡಳಿ ಸಮಿತಿ ವತಿಯಿಂದ ಅಗಸಲ್ ಓಣಿಯಲ್ಲಿ ಪ್ರತಿಷ್ಠಾಪನೆ ಮಾಡಿದ ಗಣೇಶೋತ್ಸವದಲ್ಲಿ ರಂಗೋಲಿ ಸ್ಪರ್ದೆ ಏರ್ಪಡಿಸಿ ಪ್ರಥಮ ದ್ವಿತೀಯ ತೃತೀಯ ಬಹುಮಾನ ನೀಡಲಾಗಿದೆ ಎಂದು ಮುಖಂಡ ವೀರೇಶ ಹಿರೇನ್ ತಿಳಿಸಿದ್ದಾರೆ.

ಸುಲೇಪೇಟ ಗ್ರಾಮದ ಪ್ರತಿಷ್ಠಾಪನೆ ಮಾಡಿದ ಗಣೇಶೋತ್ಸವದಲ್ಲಿ ಹಮ್ಮಿಕೊಂಡ ರಂಗೋಲಿ ಸ್ಪರ್ಧೆ ಕಾರ್ಯಕ್ರಮಕ್ಕೆ ಬಿಜೆಪಿ ಜಿಲ್ಲಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅತೀಷ ಪವ್ಹಾರ ಚಾಲನೆ ನೀಡಿ ಮಾತನಾಡಿದ ಅವರು,ಹಿಂದೂ ಧರ್ಮದ ಅತ್ಯಂತ ಸಂಭ್ರಮ ಸಡಗರದಿಂದ ಆಚರಣೆ ಮಾಡು ವ ಗಣೇಶ ಚತುರ್ಥಿ ಹಬ್ಬವು ಕೆಲವರು ಐದು ದಿನ ಒಂಬತ್ತು ದಿನ ಹನ್ನೊಂದು ದಿನ ಗಣೇಶ ಪ್ರತಿಷ್ಠಾಪನೆ ಮಾಡಿ ದಿನಾಲು ಭಜನೆ ದೇವರ ಆರಾಧನೆ ಮಾಡುತ್ತಾರೆ ಜೋತೆಗೆ ದಿನಲೂ ಬೇರೆ ಬೇರೆ ತರಹ ಸಾಂಸ್ಕೃತಿಕ ಕಾರ್ಯಕ್ರಮ, ರಂಗೋಲಿ ಸ್ಪರ್ಧೆ, ಗೋ ಪೂಜೆ, ತಾಯಿ ತಂದೆ ಪಾದ ಪೂಜೆ ಹೀಗೆ ಅನೇಕ ಕಾರ್ಯಕ್ರಮಗಳು ಹಮ್ಮಿಕೊಂಡು ಹಿಂದೂ ಸಂಸ್ಕೃತಿ ಪಾರಂಪರೆ ಉಳಿಸುವ ಸಂದೇಶ ಜೋತೆಗೆ ಎಲ್ಲೋರು ಒಗ್ಗಟ್ಟಾಗಿ ಇರಬೇಕು ಎಂಬ ಸಂದೇಶ ರವಾನೆ ಮಾಡಲಾಗುತ್ತದೆ ಎಂದರು.

ಮಹಿಳೆಯರ ರಂಗೋಲಿಸ್ಪರ್ದೆಯಲ್ಲಿ ವಿಜೇತರಾದ ಮೂರು ಜನರಿಗೆ ಪ್ರಥಮ ದ್ವಿತೀಯ ಮತ್ತು ತೃತೀಯ ಬಹುಮಾನ ನೀಡಿ ಉಳಿದ ಎಲ್ಲಾ ಸ್ಪರ್ಧಿಗಳಿಗೆ ಸಮಾಧಾನಕರ ಬಹುಮಾನ ನೀಡಲಾಯಿತು, ಸ್ಪರ್ಧೆಯಲ್ಲಿ 11ಜನಕ್ಕಿಂತ ಹೆಚ್ಚು ಮಹಿಳೆಯರು ಪಾಲ್ಗೊಂಡಿದ್ದು, ರಂಗೋಲಿ ಸ್ಪರ್ದೆಗೆ ಆಯ್ಕೆ ಮಾಡಲು ಶಿಕ್ಷಕರಾದ ಪ್ರಭುಜಾಣ, ಪ್ರಭುಲಿಂಗಯ್ಯ ಸ್ವಾಮಿ, ಪ್ರಭು ಹೊನ್ನಡಿ, ಶಿಲವಂತರವರು ಮಹಿಳೆಯರು ಹಾಕಿದ ಆಕಾರ ಬಣ್ಣ ಕೌಶಲ್ಯ ಆಧಾರ ಮೇಲೆ ಆಯ್ಕೆ ಮಾಡಿದರು ಎಂದರು.

ಗಣೇಶ ಪ್ರತಿಷ್ಠಾಪನೆ ಮಾಡಿದ ಮೊದಲನೇ ಮಕ್ಕಳಿದ ಸಂಸ್ಕೃತಿಕ ಮನೊರಂಜನೆ ಕಾರ್ಯಕ್ರಮಗಳು, ವಿವಿಧ ಧಾರ್ಮಿಕ ಕಾರ್ಯಕ್ರಮ, ಭಜನೆ ಕಾರ್ಯಕ್ರಮ ಜೋತೆಗೆ ಪ್ರತಿನಿತ್ಯ ಎಲ್ಲಾ ಜನರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಈ ಸಂದರ್ಭದಲ್ಲಿ ಮುರ ಗೆಪ್ಪ ಕುಕಡಿ, ಗ್ರಾಪಂ ಸದಸ್ಯ ಶರಣಬಸಪ್ಪಾ ಸೊಂತ, ರುದ್ರಮುನಿರಾಮತೀರ್ಥಕರ, ನಾಗರಾಜ ಮುತ್ತಟ್ಟಿ, ಮಹೇಶ ಹಿರೇನ್, ರಾಹುಲ್,ಶಿವುಕುಮಾರ ಚಟ್ಟನಳ್ಳಿ,ರಾಕೇಶ,ಗಗನ ಪಾಟೀಲ, ವೀರೇಶ ಮನ್ನಳ್ಳಿ, ಸಂಗಮೇಶ ಕುಕಡಿ, ಶರಣುಭಾಲ್ಕಿ, ಶರಣು ಅವರಾದಿ, ಆಕಾಶ ಗರಗಪಳ್ಳಿ, ಸಿದ್ದು ಅವರಾದಿ ಶರತಕುಮಾರ, ಶಿವುಕುಮಾರಮನ್ನಳ್ಳಿ, ವೀರೇಶ ಯಾಕಾಪೂರ, ಚೇತನಕುಮಾರ ಇದ್ದರು.

ಉದಯವಾಹಿನಿ ಚಿತ್ರ

ಸುದೀಪ್ ಹಾಡಿಗಾಗಿ ವಾಗ್ವಾದ, ಗಣೇಶ ಮೂರ್ತಿ ವಿಸರ್ಜನೆ ಮೊಟಕು

• ಉದಯವಾಹಿನಿ, ಕುಷ್ಟಗಿ

ಗಣೇಶ ಮೂರ್ತಿ ವಿಸರ್ಜನೆ ವೇಳೆ ನಟರಾದ ದರ್ಶನ್, ಸುದೀಪ್ ಹಾಡು ಹಾಕುವ ವಿಚಾರಕ್ಕೆ ಉಂಟಾದ ಅಭಿಮಾನಿಗಳ ವಾಗ್ವಾದದಿಂದ ವಿಸರ್ಜನ ಮೆರವಣಿಗೆ ಮೊಟಕುಗೊಂ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	09:00 ರಿಂದ 10:30
ಗುಳಿಕ ಕಾಲ	ಬೆಳಿಗ್ಗೆ	06:00 ರಿಂದ 07:30
ಯಮಗಂಡ ಕಾಲ	ಮಧ್ಯಾಹ್ನ	01:30 ರಿಂದ 03:00

ಮೇಷ ನಿಮ್ಮ ಅಚ್ಚುಮೆಚ್ಚಿನವರಿಂದ / ಪತಿ / ಪತ್ನಿಯಿಂದ ಪಡೆಯುವ ದೂರವಾಣಿ ಕರೆ ನಿಮ್ಮ ದಿನವನ್ನು ಬೆಳಗಲಿದೆ. ಈ ರಾಶಿಚಕ್ರದ ಜನರು ಇಂದು ನಿಮ್ಮ ಬಿಡುವಿನ ವೇಳೆಯಲ್ಲಿ ಆಧ್ಯಾತ್ಮಿಕ ಪುಸ್ತಕಗಳ ಅಧ್ಯಯನ ಮಾಡಬೇಕು.

ವೃಷಭ . ದಿನ ಉತ್ತಮವಾಗಿದೆ, ಇಂದು ನಿಮಗಾಗಿ ಸಮಯವನ್ನು ತೆಗೆದುಕೊಳ್ಳಿ ಮತ್ತು ನಿಮ್ಮನ್ನೂ ನತೆಗಳು ಮತ್ತು ಸಾಮರ್ಥ್ಯಗಳ ಬಗ್ಗೆ ಗಮನ ಹರಿಸಿ. ಇದರಿಂದ ನಿಮ್ಮ ವ್ಯಕ್ತಿತ್ವದಲ್ಲಿ ಸಕಾರಾತ್ಮಕ ಬದಲಾವಣೆಗಳು ಬರುತ್ತವೆ.

ಮಿಥುನ ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ಪ್ರಣಯಕ್ಕೆ ಒಳ್ಳೆಯ ದಿನ.

ಕರ್ಕಾಟಕ ನೀವು ಸ್ನೇಹಿತರೊಂದಿಗೆ ಒಳ್ಳೆಯ ಸಮಯ ಹೊಂದಿದ್ದರೂ ವಾಹನ ಚಾಲನೆ ಮಾಡುವಾಗ ಹೆಚ್ಚುವರಿ ಆರೈಕೆಯನ್ನು ಹೊಂದಿಕೊಳ್ಳಿ. ಹಠಾತ್ ಪ್ರಣಯ ಪ್ರಸಂಗಗಳು ನಿಮ್ಮನ್ನು ಗೊಂದಲಕ್ಕೀಡು ಮಾಡಬಹುದು.

ಸಿಂಹ ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಇಂದು ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು.

ಕನ್ಯಾ ಮುಂದೆ ಒಳ್ಳೆಯ ಸಮಯವಿರುವುದರಿಂದ ಸಂತೋಷದಿಂದಿರಿ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು.

ತುಲಾ ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ.

ವೃಶ್ಚಿಕ ಧಾರ್ಮಿಕ ಆಸಕ್ತಿಗಳನ್ನು ಅನುಸರಿಸಲೂ ಒಂದು ಒಳ್ಳೆಯ ದಿನ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು.

ಧನಸ್ಸು ನಿಮ್ಮ ಕೆಟ್ಟ ಚಟಗಳು ನಿಮ್ಮನ್ನು ನಾಶಗೊಳಿಸುತ್ತವೆ. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ. ನೀವು ಹೆಚ್ಚೇನೂ ಮಾಡದೇ ಇತರರ ಗಮನ ಸೆಳೆಯಲು ಇದೊಂದು ಪರಿಪೂರ್ಣ ದಿನ.

ಮಕರ ತಾತ್ಕಾಲಿಕವಾದ ಉದ್ವೇಗದಲ್ಲಿ ನಿರ್ಧಾರ ಕೈಗೊಳ್ಳಬೇಡಿ ಇದು ನಿಮ್ಮ ಮಕ್ಕಳ ಹಿತಾಸಕ್ತಿಗೆ ಹಾನಿ ಮಾಡಬಹುದು. ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ.

ಕುಂಭ ಇಂದು ಮನೆಯಲ್ಲಿ ನೀವು ಇತರರನ್ನು ಮುಜುಗರಪಡಿಸದೇ ನಿಮ್ಮ ಕುಟುಂಬದ ಅವಶ್ಯಕತೆಗಳಿಗೆ ಹೊಂದಿಕೊಳ್ಳಲು ಯತ್ನಿಸಬೇಕು. ಸ್ನೇಹ ಆಳವಾದ ಹಾಗೆ ಪ್ರಣಯ ನಿಮ್ಮೆಡೆ ಬರುತ್ತದೆ.

ಮೀನ ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸುತರುವುದರಿಂದ ತಾಳ್ಮೆಯಿಂದಿರಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು.

ಗ್ರಾಮಸ್ಥರಿಗಿಲ್ಲ ಶುದ್ಧ ನೀರಿನ ಭಾಗ್ಯ : ಸರ್ಕಾರದ ಹಣ ಪೋಲು

● ಜನರಿಗೆ ಶುದ್ಧ ನೀರು ಇಲ್ಲದಿರುವುದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಹಿಡಿದ ಕೈಗನ್ನಡಿ

• ಉದಯವಾಹಿನಿ ಸೈದಾಪುರ

ಗ್ರಾಮೀಣ ಜನರ ಆರೋಗ್ಯದ ಹಿತದೃಷ್ಟಿಯಿಂದ ಪ್ರತಿಯೊಬ್ಬರಿಗೂ ಶುದ್ಧ ಕುಡಿಯುವ ನೀರು ಪೂರೈಸುವ ಉದ್ದೇಶದಿಂದ ವಿವಿಧ ಯೋಜನೆಗಳಡಿ ಸರ್ಕಾರ ನಿರ್ಮಿಸಿದ ಶುದ್ಧ ಕುಡಿಯುವ ನೀರಿನ ಘಟಕಗಳು ಸಾರ್ವಜನಿಕ ಬಳಕೆಗೆ ಬಾರದೆ ನಿರುಪಯುಕ್ತವಾಗಿದ್ದು, ಸರ್ಕಾರದ ಲಕ್ಷ ಲಕ್ಷ ಹಣ ಪೋಲಾಗಿದೆ ಎಂಬುದು ಸಾರ್ವಜನಿಕರ ಆರೋಪವಾಗಿದೆ.

ಪ್ಲೋರೈಡ್ ಯುಕ್ತ ನೀರೇ ಗತಿ

ಸಮೀಪದ ಕಾಳೆಬೆಳಗುಂದಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಕಣೇಕಲ್ ಗ್ರಾಮದಲ್ಲಿ 2 ಶುದ್ಧ ಕುಡಿಯುವ ನೀರಿನ ಘಟಕಗಳಿದ್ದರೂ ಜನರಿಗೆ ಶುದ್ಧ ನೀರು ಇಲ್ಲದಿರುವುದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ಸ್ಥಳೀಯ ನಿವಾಸಿ ಸುಭಾಸ ವಿಶ್ವಕರ್ಮ ಕಣೇಕಲ್ ಆಕ್ರೋಶ ವ್ಯಕ್ತಪಡಿಸಿದರು.

ದುರಸ್ತಿ ಭಾಗ್ಯ ಕಾಣದ ಘಟಕಗಳು: ಗ್ರಾಮದಲ್ಲಿ ಸುಮಾರು 3000 ರಿಂದ 4000 ಜನ ವಾಸಿಸುತ್ತಿದ್ದಾರೆ. ಗ್ರಾಮಸ್ಥರ ಆರೋಗ್ಯದ ಅನೂಕೂಲಕ್ಕಾಗಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಇಲಾಖೆ ಯೋಜನೆಯಡಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಿಂಭಾಗದಲ್ಲಿ ಹಾಗೂ ಪರಿಶಿಷ್ಟ ಜಾತಿ ಓಣಿಯಲ್ಲಿ ಬರುವ ಅಂಗನವಾಡಿ ಕೇಂದ್ರದ ಹತ್ತಿರದಲ್ಲಿ ನಿರ್ಮಿಸಲಾಗಿದೆ.

2 ಘಟಕಗಳು ಕೆಟ್ಟು ಸುಮಾರು ನಾಲ್ಕೈದು ವರ್ಷಗಳು ಕಳೆದರೂ ದುರಸ್ತಿ ಮಾಡಲು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮಾತ್ರ ಕ್ರಮ ಕೈಗೊಳ್ಳುತ್ತಿಲ್ಲ, ಸುತ್ತಮುತ್ತ ಮುಳ್ಳು ಗಿಡ ಗಂಟಿಗಳು ಬೆಳೆದು ನಿಂತಿವೆ. ಬಿಸಿಲು, ಮಳೆ ಗಾಳಿಯಿಂದ ಸರಿಯಾದ ನಿರ್ವಹಣೆ ಇಲ್ಲದೆ

ಉದಯವಾಹಿನಿ ಚಿತ್ರ

ಯಂತ್ರೋಪಕರಣಗಳು ತುಕ್ಕು ಹಿಡಿದು ಕರಗುತ್ತಿವೆ ಎಂದು ಗ್ರಾಮಸ್ಥ ಮಲ್ಲಿಕಾರ್ಜುನ ಹುಲಿಬೆಟ್ಟ ತಿಳಿಸಿದರು.

ನಿತ್ಯ 8 ಕಿ.ಮೀ ದೂರದಿಂದ ನೀರು ತರಬೇಕು: ದಿನ ನಿತ್ಯ ಕುಡಿಯಲು ಹಾಗೂ ಸಭೆ ಸಮಾರಂಭಗಳಿಗೆ ಶುದ್ಧ ಕುಡಿಯುವ ನೀರು ತರಲು ದ್ವಿಚಕ್ರ ಹಾಗೂ ಇತರೆ ವಾಹನ ಇರುವ ವರು ಸುಮಾರು 8 ಕಿ.ಮೀ ದೂರದ ಸೈದಾಪುರದ ಖಾಸಗಿ ವ್ಯಕ್ತಿಗಳ ಹತ್ತಿರ ಒಂದು ಕ್ಯಾನ್‌ಗೆ 10 ರೂಪಾಯಿ ದುಡ್ಡು ನೀಡಿ ತೆಗೆದುಕೊಂಡು ಬರುತ್ತಾರೆ. ಬಡವರು ಹಾಗೂ ವಾಹನ ಸೌಲಭ್ಯ ಇಲ್ಲದವರಿಗೆ ಕೈಪಂಪಿನ ಪ್ಲೋರೈಡ್‌ಯುಕ್ತ ನೀರೇ ಗತಿ ಎನ್ನುವಂತಾಗಿದೆ ಎಂದು ಗ್ರಾಮದ ನಿವಾಸಿ ಶರಣಯ್ಯ ಸ್ವಾಮಿ ಪ್ರಚಂಡಿ ತಮ್ಮ ಅಳಲು ತೋಡಿಕೊಂಡರು.

> ● ಅಶುದ್ಧ ಮತ್ತು ಫ್ಲೋರೈಡ್ ಮಿಶ್ರಿತ ನೀರು ಸೇವನೆಯಿಂದ ಸಾರ್ವಜನಿಕರಲ್ಲಿ ಕೈಕಾಲು, ಮೂಳೆ ಸವೆತ, ಬೆನ್ನು, ಮಂಡಿ ನೋವು, ಹಲ್ಲು ನೋವು, ಮಾಸಖಂಡಗಳಲ್ಲಿ ನೋವು, ಹೃದಯ ಸಂಬಂಧಿ ಕಾಯಿಲೆ, ಚರ್ಮವ್ಯಾಧಿ, ಮೂತ್ರಪಿಂಡ ವೈಫಲ್ಯ, ಹಾರ್ಮೋನ್‌ಗಳ ಏರುಪೇರು, ಮಧುಮೇಹ, ಕಣ್ಣಿನ ಸಮಸ್ಯೆ, ಜೀರ್ಣಾಂಗ ಸಮಸ್ಯೆ, ಫೈರಾಯ್ಡ್ ಸೇರಿದಂತೆ ಇತರೆ ರೋಗಗಳಿಗೆ ತುತ್ತಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ಆದ್ದರಿಂದ ಸಾಧ್ಯವಾದಷ್ಟು ಶುದ್ಧಿಕರಿಸಿದ ಹಾಗೂ ಕಾಯಿಸಿ ಆರಿಸಿದ ನೀರು ಕುಡಿಯಬೇಕು –ಡಾ. ಮುದಸಿರ್ ಅಹ್ಮದ್, ವೈದ್ಯಾಧಿಕಾರಿ

ಘಟಕಗಳ ನಿರ್ವಹಣೆಗೆ ಸಂಪನ್ಮೂಲದ ಕೊರತೆ

ಸುರೇಶ ವಿಶ್ವಕರ್ಮ ಶ್ರೀನಿವಾಸ ಶೆಟ್ಟಿ–ಸುರೇಶ ವಿಶ್ವಕರ್ಮ ಕಣೇಕಲ್ಸಂಬಂಧಿಸಿದ ಅಧಿಕಾರಿಗಳು ಸಾರ್ವಜನಿಕರ ಉತ್ತಮ ಆರೋಗ್ಯಕ್ಕೆ ಶುದ್ಧ ನೀರು ಪೂರೈಸಿ ಅನುಕೂಲ ಮಾಡಿಕೊಡಬೇಕು. ಶ್ರೀನಿವಾಸ ಶೆಟ್ಟಿ ಕಣೇಕಲ್ ಜನಸಾಮಾನ್ಯರು ವಿವಿಧ ರೋಗಗಳಿಗೆ ತುತ್ತಾಗದಂತೆ ತಡೆಯಲು ಶೀಘ್ರದಲ್ಲಿ ಸಂಬಂಧಿಸಿದವರು ನೀರಿನ ಘಟಕಗಳನ್ನು ದುರಸ್ತಿಗೊಳಿಸಿ ಶುದ್ಧ ನೀರು ನೀಡಬೇಕು. ಶಿವಶರಣಪ್ಪ ಪಿಡಿಒ ಕಾಳೆಬೆಳಗುಂದಿ. ಘಟಕಗಳ ನಿರ್ವಹಣೆಗೆ ಸಂಪನ್ಮೂಲದ ಕೊರತೆಯಿದೆ. 15ನೇ ಹಣಕಾಸು ಯೋಜನೆಯಡಿ ಶೀಘ್ರ ಕ್ರಿಯಾ ಯೋಜನೆ ರೂಪಿಸಿ ದುರಸ್ತಿಗೊಳಿಸುತ್ತೇವೆ.

ಹಿರಿಯ ನಾಗರಿಕರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ

• ಉದಯವಾಹಿನಿ ಚಿತ್ರದುರ್ಗ

ಹಿರಿಯ ನಾಗರಿಕರ ಬಗ್ಗೆ ಅಸಡ್ಡೆ, ಅಸಹ್ಯ ಮನೋಭಾವ ಸಲ್ಲದು ಎಂದು ಎಂದು ಹಿರಿಯ ನಾಗರಿಕರ ಸಂಘದ ಜಿಲ್ಲಾಘಟಕದ ಅಧ್ಯಕ್ಷ ರಂಗಪ್ಪ ರೆಡ್ಡಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ, ರೋಟರಿ ಕ್ಲಬ್ ಹಾಗೂ ಹಿರಿಯ ನಾಗರಿಕರ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ಶುಕ್ರವಾರ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಆಯೋಜಿಸಲಾದ ಹಿರಿಯ ನಾಗರಿಕರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಮಾತನಾಡಿ, ಪ್ರಸ್ತುತ ದಿನಗಳಲ್ಲಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಕ್ರೀಡೆ ಹಾಗೂ ಸಾಂಕೃತಿಕ ಕ್ಷೇತ್ರದಲ್ಲಿ ಅವಕಾಶಗಳು ಸಿಗುವುದು ಕಡಿಮೆ. ಆದ್ದರಿಂದ ಪ್ರತಿ ವರ್ಷದಂತೆ ಈ ಬಾರಿಯೂ ವಿಶ್ವ ನಾಗರೀಕರ

ಉದಯವಾಹಿನಿ ಚಿತ್ರ

ದಿನಾಚರಣೆಯ ಅಂಗವಾಗಿ ಹಿರಿಯ ನಾಗರೀಕರಿಗೆ ಕ್ರೀಡಾಕೂಟ ಹಾಗೂ ಸಾಂಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರಿಂದ ಮನಸ್ಸಿಗೆ ಉಲ್ಲಾಸ, ಉತ್ಸಾಹ ನೆಮ್ಮದಿಯನ್ನು ನೀಡುವುದರ ಜೊತೆಗೆ, ಹಿರಿಯ ನಾಗರಿಕರ ಸಾಮರ್ಥ್ಯಕ್ಕೆ ಈ ವೇದಿಕೆ ಸಾಕ್ಷಿಯಾಗಲಿದೆ ಎಂದರು.

ಹಿರಿಯ ನಾಗರಿಕರಿಗೆ ಮ್ಯೂಜಿಕಲ್ ಚೇರ್, ಬಿರುಸಿನ ನಡಿಗೆ, ಬಕೆಟ್‌ನಲ್ಲಿ ರಿಂಗ್ ಎಸೆಯುವ ಸ್ಪರ್ಧೆ, ಗಾಯನ ಮತ್ತು ಏಕ ಪಾತ್ರಾಭಿನಯ ಸ್ಪರ್ಧೆಗಳನ್ನು ನಡೆಸಲಾಯಿತು. ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಡಿ.ಸಿ.ಸೋಮಶೇಖರಯ್ಯ ಸ್ವಾಗತಿಸಿದರು. ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ನೋಡಲ್ ಅಧಿಕಾರಿ ಜಿ.ಹರಿಪ್ರಸಾದ್ ವಂದಿಸಿದರು. ಬಾಲಭವನ ನಿರ್ವಾಹಕ ಕುಮಾರ್ ಕಾರ್ಯಕ್ರಮ

> ● ಅಕ್ಟೋಬರ್ 1 ರಂದು ಇಡೀ ವಿಶ್ವದಾದ್ಯಂತ ವಿಶ್ವ ನಾಗರಿಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಇದರ ಅಂಗವಾಗಿ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಹಿರಿಯ ನಾಗರಿಕರೆಲ್ಲರೂ ಕ್ರೀಡಾಕೂಟದಲ್ಲಿ ಭಾಗವಹಿಸಿ ಪ್ರಶಸ್ತಿಗಳನ್ನು ಪಡೆಯಬೇಕೆಂದೇನು ಇಲ್ಲ. ದೈಹಿಕವಾಗಿ ಚಟುವಟಿಕೆಯಿಂದರಲು ಸಹಕಾರಿಯಾಗಿದೆ. ಸಮಾಜದಲ್ಲಿ ಹಿರಿಯ ನಾಗರಿಕರನ್ನು ಗೌರವದಿಂದ ಕಾಣಬೇಕು –ರಂಗಪ್ಪ ರೆಡ್ಡಿ ಜಿಲ್ಲಾ ಘಟಕದ ಅಧ್ಯಕ್ಷ

ನಿರೂಪಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಎಸ್. ವಿಜಯ್ ಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಪವಿತ್ರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎಂ.ವಿ.ವೀಣಾ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಪರಿವೀಕ್ಷಣಾಧಿಕಾರಿ ಸುರೇಶ್ ಸೇರುದಂತೆ ಸಿಬ್ಬಂದಿ ಉಪಸ್ಥಿತರಿದ್ದರು.

ಪೋಕ್ಸೊ, ಬಾಲ್ಯ ವಿವಾಹ ತಡೆಗೆ ಕ್ರಮವಹಿಸಿ

• ಉದಯವಾಹಿನಿ ಧಾರವಾಡ

ಪೋಕ್ಸೊ (ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ), ಬಾಲ್ಯ ವಿವಾಹ, ಭ್ರೂಣ ಹತ್ಯೆ ಪ್ರಕರಣಗಳನ್ನು ತೆಡೆಗಟ್ಟಲು ಎಲ್ಲಾ ಅಧಿಕಾರಿಗಳು ಕ್ರಮವಹಿಸಬೇಕು' ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ದೊಡ್ಡಮನಿ ಹೇಳಿದರು.

ರಾಜ್ಯ ಮಕ್ಕಳ ರಕ್ಷಣಾ ನಿರ್ದೇಶನಾಲಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ನಗರದ ಆಲೂರು ವೆಂಕಟರಾವ್ ಭವನದಲ್ಲಿ ಪ್ರೌಢಶಾಲೆ ಮುಖ್ಯಶಿಕ್ಷಕರಿಗೆ ಹಾಗೂ ವಸತಿ ನಿಲಯದ ಪಾಲಕರಿಗೆ ವಿವಿಧ ಕಾನೂನುಗಳ ಕುರಿತು ಆಯೋಜಿಸಿದ್ದ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, 'ಜನರಿಗೆ ನೈತಿಕ ಮೌಲ್ಯಗಳನ್ನು ತಿಳಿಸಬೇಕು. ಕಾನೂನುಗಳ ಅರಿವು ಮತ್ತು ಜಾಗೃತಿ ಮೂಡಿಸಬೇಕು' ಎಂದರು.

ಉದಯವಾಹಿನಿ ಚಿತ್ರ

> ● ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಎಚ್.ಎಚ್. ಕುಕನೂರ, ಬಾಲ್ಯ ವಿವಾಹ ನಿಷೇಧ ಕುರಿತು ಶಾಲೆಗಳು, ವಸತಿ ನಿಲಯಗಳಲ್ಲಿ ಜಾಗೃತಿ ಮೂಡಿಸಬೇಕು –ಎಚ್.ಎಚ್. ಕುಕನೂರ

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆ ರಾಜೇಶ್ವರಿ ಸಾಲಗಟ್ಟಿ, ಕೊಪ್ಪಳ ಯುನಿಸೆಫ್ ಮಕ್ಕಳ ಸಂರಕ್ಷಣಾ ಯೋಜನೆಯ ಪ್ರಾದೇಶಿಕ ಸಂಯೋಜಕ ರಾಘವೇಂದ್ರ ಭಟ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನೀತಾ ವಾಡಕರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ (ಪ್ರಭಾರ) ಜಿಲ್ಲಾ ಅಧಿಕಾರಿ ಗೋಪಾಲ. ಎಚ್.ಲಮಾಣಿ ಇದ್ದರು.

ಸರ್ಕಾರಿ ವಿಮಾ ಕಂಪನಿ ವ್ಯಾಪ್ತಿಗೆ ಬೆಳೆ ವಿಮೆಗೆ ಚರ್ಚೆ

• ಉದಯವಾಹಿನಿ ಧಾರವಾಡ

ಬೆಳೆ ಹಾನಿಯಾದಲ್ಲಿ ಸರ್ಕಾರಿ ವಿಮಾ ಕಂಪನಿಗಳಿಂದಲೇ ಪರಿಹಾರ ನೀಡಲು ಸಚಿವರ ನೇತೃತ್ವದಲ್ಲಿ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಲಾಗುವುದು' ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬೆಳೆ ವಿಮೆ ಕುರಿತು ರೈತ ಮುಖಂಡರೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.'ಬೆಳೆ ಕಟಾವು ಮಾದರಿಗಳನ್ನು ಎರಡು ಮೂರು ಪಟ್ಟು ಹೆಚ್ಚಿಸುವಲ್ಲಿ ಕ್ರಮಕೈಗೊಳ್ಳಲು ಸರ್ಕಾರಮಟ್ಟದಲ್ಲಿ ಚರ್ಚಿಸಲಾಗುವುದು. ಲಾಭದ ದೃಷ್ಟಿಯಿಂದ ಅಸ್ತಿತ್ವದಲ್ಲಿರುವ ವಿಮಾ ಕಂಪನಿಗಳು ರೈತರ ಹಿತಕಾಯುತ್ತಿಲ್ಲ' ಎಂದರು. ವಿಮಾ ಕಂಪನಿ ಬದಲಾವಣೆ ಮಾಡಬೇಕು. ರೈತರು ಸಹ ಇದಕ್ಕೆ ಪೂರಕವಾಗಿ ಒತ್ತಾಯ ಹಾಕಬೇಕು. ರಾಜ್ಯ ಹಾಗೂ

ಉದಯವಾಹಿನಿ ಚಿತ್ರ

ಕೇಂದ್ರ ಸರ್ಕಾರಗಳೇ ವಿಮಾ ಕಂಪನಿಯನ್ನು ಆರಂಭಿಸಿ ಪಾರದರ್ಶಕ ಸಹಕಾರಿ ಸೊಸೈಟಿ ಮಾದರಿಯಲ್ಲಿ ವಿಮಾ ಸೊಸೈಟಿ ಆರಂಭಿಸಿ ಪರಿಹಾರ ನೀಡುವ ಕುರಿತು ಚರ್ಚೆ ನಡೆಯಬೇಕು' ಎಂದರು.ಕೆಲ ಪ್ರದೇಶಗಳಲ್ಲಿ ಒಂದೇ ತೆರನಾದ ಬೆಳೆ ಬೆಳೆಯುವಂತೆ ಹಾಗೂ ವಿಮೆ ಮಾಡಿಸುವಂತೆ ಕೆಲ ವ್ಯಕ್ತಿಗಳು ವಿಮಾ ಕಂಪನಿಗಳ ಜೊತೆಗೂಡಿ ಏಜೆಂಟರಂತೆ ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ ರೈತರು ಸಭೆಯ ಗಮನಕ್ಕೆ ತಂದರು.

ಇಂಥವರ ಬಗ್ಗೆ ನಿಗಾ ವಹಿಸಿ ಕ್ರಮ ಕೈಗೊಳ್ಳುವುದಾಗಿ ಸಚಿವ ಲಾಡ್ ತಿಳಿಸಿದರು.

ವಕ್ಫ್ ತಿದ್ದುಪಡಿ ಮಸೂದೆ ಹಿಂಪಡೆಯುವಂತೆ ಆಗ್ರಹ

• ಉದಯವಾಹಿನಿ ಕೆಂಭಾವಿ

ಸರಕಾರ ವಕ್ಫ್ ತಿದ್ದುಪಡಿ ಮಸೂದೆ –2024ರ ಮೂಲಕ ಅಲ್ಪಸಂಖ್ಯಾತ ಸಮುದಾಯದ ಆರ್ಥಿಕ ಮೂಲಕ್ಕೆ ಕೊಡಲಿ ಪೆಟ್ಟು ಕೊಡಲು ಹೊರಟಿದ್ದು, ಕೂಡಲೇ ಕೇಂದ್ರ ಸರಕಾರ ತಿದ್ದುಪಡಿಯನ್ನು ಹಿಂದಕ್ಕೆ ಪಡೆಯಬೇಕೆಂದು ಆಗ್ರಹಿಸಿ ಅಂಜುಮನ್ ಬೈತುಲ್ ಮಾ

ಚೀನಾ ನಿರ್ಮಿತ ಸಿಸಿಟಿವಿ ಕ್ಯಾಮರಾಗಳಿಂದ ಬೇಹುಗಾರಿಕೆ

ಅಮೆರಿಕ ತನ್ನ ಬಂದರುಗಳಲ್ಲಿ ಬಳಸುತ್ತಿದ್ದ ಕ್ರೇನ್‌ಗಳಲ್ಲೂ ಬೇಹುಗಾರಿಕೆ ಉಪಕರಣ ಪತ್ತೆ

ದಕ್ಷಿಣ ಕೊರಿಯಾ: ಸಿಸಿಟಿವಿಗಳು ಇಂದಿನ ದಿನ ಗಳಲ್ಲಿ ಅತ್ಯಂತ ಅಗತ್ಯ. ರಕ್ಷಣೆ, ಪರಿವೀಕ್ಷಣೆ ಸೇರಿದಂತೆ ಹಲವು ಕಾರಣಗಳಿಂದಾಗಿ ಸಿಸಿಟಿವಿ ಬಳಕೆಯಲ್ಲಿದೆ. ಮನೆ, ಅಂಗಡಿ, ಕಚೇರಿ, ರಸ್ತೆಗಳು ಮಾತ್ರವಲ್ಲ, ಸರ್ಕಾರದ ಆಯಕಟ್ಟಿನ ಸ್ಥಳ ಗಳು, ಸೇನಾ ನೆಲೆಗಳು ಸೇರಿದಂತೆ ಎಲ್ಲೆಡೆ ಸಿಸಿಟಿವಿ ಬೇಕೇ ಬೇಕು ಎನ್ನುವಂತಾಗಿದೆ. ಸಿಸಿಟಿವಿ ಕ್ಯಾಮರಾಗಳ ತಯಾರಿಕೆ ಹಾಗೂ ವಿಶ್ವಾದ್ಯಂತ ರಫ್ತು ಮಾಡಿ ಮಾರಾಟ ಮಾಡುವ ವಿಚಾರದಲ್ಲಿ ಚೀನಾ ದೇಶ ಅಗ್ರಗಣ್ಯ. ಇಡೀ ವಿಶ್ವದಲ್ಲೇ ಬಳಕೆಯಲ್ಲಿರುವ ಅತಿ ಹೆಚ್ಚು ಸಿಸಿಟಿವಿಗಳು ತಯಾರಾಗೋದು ಚೀನಾದಲ್ಲಿ. ಆದರೆ ಚೀನಾದ ಸಿಸಿಟಿವಿಗಳು ಕೇವಲ ನಮ್ಮ ರಕ್ಷಣೆಯ ದೃಷ್ಟಿಯಿಂದ ಮಾತ್ರ ಕೆಲಸ ಮಾಡೋದಿಲ್ಲ, ಚೀನಾ ದೇಶದ ಪರ ಬೇಹುಗಾರಿಕೆ ಕೆಲಸವನ್ನೂ ಮಾಡುತ್ತವೆ.

ಚೀನಾ ಮೇಡ್ ಹೆಸರೇ ಗೊತ್ತಾಗದಂತೆ ದಕ್ಷಿಣ ಕೊರಿಯಾಗೆ ಮಾರಾಟ: ದಕ್ಷಿಣ ಕೊರಿಯಾ ದೇಶದ ಸೇನೆ ಸಿಸಿಟಿವಿ ಕ್ಯಾ ಮರಾಗಳ ಖರೀದಿ ವಿಚಾರದಲ್ಲಿ ಮೊದ ಲಿನಿಂದಲೂ ಎಚ್ಚರಿಕೆ ವಹಿಸುತ್ತದೆ. ಯಾವುದೇ ಕಾರಣಕ್ಕೂ ಚೀನಾ ದೇಶದ ಸಿಸಿಟಿವಿ ಕ್ಯಾಮರಾ ಖರೀದಿ ಮಾಡೋದಿಲ್ಲ. ದಕ್ಷಿಣ ಕೊರಿಯಾ ದೇಶದ ಕಂಪನಿಯೊಂದು ಸರಬರಾಜು ಮಾಡಿದ ಸಿಸಿಟಿವಿ ಕ್ಯಾಮರಾಗಳನ್ನೇ ಆ ದೇಶದ ಸೇನೆ ಬಳಸಿತ್ತು. ಆದ ರೆ, ಈ ಕ್ಯಾಮರಾಗಳು ಚೀನಾ ನಿರ್ಮಿತ ಅನ್ನೋದು ತನಿಖೆ ವೇಳೆ ಬಯಲಾಯ್ತು.

ಚೀನಾ ನಿರ್ಮಿತ ಎಂದು ಯಾರಿಗೂ ಗೊತ್ತಾಗದ ರೀತಿಯಲ್ಲಿ ಚೀನಾ ದೇಶವು ತಾನು ಉತ್ಪಾದಿಸಿದ ಸಿಸಿಟಿವಿ ಕ್ಯಾಮರಾಗಳನ್ನು ದಕ್ಷಿಣ ಕೊರಿಯಾಗೆ ರವಾನಿಸಿ ಮಾರಾಟ ಮಾಡಿತ್ತು. ಈ ಕ್ಯಾಮರಾಗಳನ್ನು ದಕ್ಷಿಣ ಕೊರಿಯಾ ಸೇನೆ ಅದೃಷ್ಟವಶಾತ್ ಸೂಕ್ಷ್ಮ ಪ್ರದೇಶಗಳಲ್ಲಿ ಅಳವಡಿಕೆ ಮಾಡಿರಲಿಲ್ಲ, ಆದರಲ್ಲೂ ಉತ್ತರ ಕೊರಿಯಾ ಗಡಿ ಭಾಗದಲ್ಲಿ ಹಾಕಿರಲಿಲ್ಲ. ಕೇವಲ ತನ್ನ ಸೇನೆಯ ತರಬೇತಿ ಘಟಕಗಳ ಬಳಿ ಅಳವಡಿಕೆ ಮಾಡಿತ್ತು.

ಚೀನಾ ವಿರುದ್ಧ ಅಮೆರಿಕ ಕೂಡಾ ಆರೋಪ ಮಾಡಿತ್ತು: ಚೀನಾ ನಿರ್ಮಿತ ಕ್ರೇನ್‌ಗಳನ್ನು ಅಮೆರಿಕ ದೇಶವು ತನ್ನ ಬಂದರುಗಳಲ್ಲಿ ಬಳಕೆ ಮಾಡುತ್ತಿತ್ತು. ಈ ಕ್ರೇನ್‌ಗಳ ಒಳಗೆ ಚೀನಾ ದೇಶವು ಸಂವಹನ ಉಪಕರಣಗಳನ್ನ ಅತ್ಯಂತ ರಹಸ್ಯವಾಗಿ ಅಳವಡಿಕೆ ಮಾಡಿತ್ತು. ಈ ವಿಚಾರವನ್ನ ಪತ್ತೆ ಮಾಡಿದ್ದ ಅಮೆರಿಕ ಈ ಕುರಿತು ಸಮಗ್ರ ತನಿಖೆ ಮಾಡಿ ಚೀನಾ ದೇಶಕ್ಕೆ ಛೀಮಾರಿ ಹಾಕಿತ್ತು. ಕ್ರೇನ್‌ಗಳ ಒಳಗೆ ಸೆಲ್ಯುಲಾರ್ ಮೋಡಮ್‌ಗಳನ್ನು ಅಳವಡಿಸಿದ್ದ ಚೀನಾ, ದೂರದಿಂದಲೇ ಈ ಕುರಿತು ಮಾಹಿತಿ ಸಂಗ್ರಹ ಮಾಡುತ್ತಿತ್ತು.

ಬ್ರಿಟನ್, ಆಸ್ಟ್ರೇಲಿಯಾದಲ್ಲೂ ಚೀನಾ ಸಿಸಿಟಿವಿ ಹಾವಳಿ: ಆಸ್ಟ್ರೇಲಿಯಾ ದೇಶವು 2023ರಲ್ಲೇ ಚೀನಾ ನಿರ್ಮಿತ ಸಿಸಿಟಿವಿ ಕ್ಯಾಮರಾಗಳನ್ನು ತನ್ನ ಸೇನಾ ವಲಯ ಹಾಗೂ ವಿದೇಶಾಂಗ ಸಚಿವಾಲಯಗಳ ಬಳಿಯಿಂದ ತೆರವು ಮಾಡಿತ್ತು. ಬ್ರಿಟನ್ ಕೂಡಾ ತನ್ನ ಸೂಕ್ಷ್ಮ ಕಟ್ಟಡಗಳಲ್ಲಿ ಚೀನಾ ನಿರ್ಮಿತ ಸಿಸಿಟಿವಿ ಕ್ಯಾಮರಾಗಳನ್ನು ತೆರವು ಮಾಡಿತ್ತು.

ದಕ್ಷಿಣ ಕೊರಿಯಾ ಸೇನೆ ನೀಡಿದ ಎಚ್ಚರಿಕೆ ಏನು?

ಇತ್ತೀಚೆಗೆ ದಕ್ಷಿಣ ಕೊರಿಯಾ ಸೇನೆ ತನ್ನಲ್ಲಿ ಬಳಕೆಯಲ್ಲಿದ್ದ 1,300 ಸಿಸಿಟಿವಿ ಕ್ಯಾಮರಾಗಳನ್ನು ತೆಗೆದು ಹಾಕಿತು. ಇದಕ್ಕೆ ಕಾರಣ ಭದ್ರತಾ ಲೋಪ ಎಂದು ಹೇಳಿತ್ತು. ಈ ಸಂಬಂಧ ದಕ್ಷಿಣ ಕೊರಿಯಾದ ಮಾಧ್ಯಮಗಳು ನಡೆಸಿದ ತನಿಖಾ ವರದಿಯಲ್ಲಿ ಆಘಾತಕಾರಿ ವರದಿಗಳು ಲಭ್ಯವಾಗಿವೆ. ಚೀನಾ ದೇಶ ಮಾರಾಟ ಮಾಡಿದ್ದ ಸಿಸಿಟಿವಿ ಕ್ಯಾಮರಾಗಳ ಬಳಕೆ ಆರಂಭ ಆದ ಕೂಡಲೇ ಈ ದೃಶ್ಯಾವಳಿಗಳು ಚೀನಾ ದೇಶವನ್ನೂ ತಲುಪುತ್ತದೆ ಅನ್ನೋ ಅನ್ನೋ ಶಾಕಿಂಗ್ ಸಂಗತಿ ಬಯಲಾಗಿದೆ.

ಕದ್ದು ನೋಡುವ ಕಣ್ಣಿನ ಬಗ್ಗೆ ವಾರ್ನಿಂಗ್

ಸಿಸಿಟಿವಿ ಕ್ಯಾಮರಾ ಎಂದಾಕ್ಷಣ ಚೀನಾ ದೇಶವೇ ನೆನಪಾಗುತ್ತೆ. ಯಾಕಂದ್ರೆ ಕಡಿಮೆ ಬೆಲೆ, ಅತ್ಯುನ್ನತ ತಂತ್ರಜ್ಞಾನ ಹಾಗೂ ಸುಲಭವಾಗಿ ಸಿಗುವ ಈ ಕ್ಯಾಮರಾಗಳನ್ನ ಬಹುತೇಕ ಎಲ್ಲೆಡೆ ಬಳಸಲಾಗುತ್ತದೆ. ಆದರೆ ಈ ಕ್ಯಾಮರಾಗಳು ಚೀನಾ ದೇಶದ ಪರವಾಗಿ ಬೇಹುಗಾರಿಕೆ ಮಾಡಬಲ್ಲವು! ಭಾರತದಲ್ಲಿನ ವಿಡಿಯೋ ಹಾಗೂ ಆಡಿಯೋವನ್ನು ಚೀನಾದಲ್ಲಿ ಕುಳಿತ ಬೇಹುಗಾರರು ಸುಲಭವಾಗಿ ವೀಕ್ಷಿಸಬಹುದು! ಅಂಥಾದ್ದೊಂದು ಸಾಧ್ಯತೆ ಇದೆ ಎಂದು ಗೊತ್ತಾಗಿದ್ದೇ ತಡ ಹಲವು ದೇಶಗಳು ಚೀನಾದ ಸಿಸಿಟಿವಿ ಕ್ಯಾಮರಾ ತೆರವು ಮಾಡುತ್ತಿವೆ.

ಮಗಳ ಸುರಕ್ಷತೆಗಾಗಿ ತಲೆ ಮೇಲೆಯೇ ಸಿಸಿಟಿವಿ ಕ್ಯಾಮೆರಾ ಅಳವಡಿಕೆ

ಇಸ್ಲಾಮಾಬಾದ್: ವೃದ್ಧರು ಮಕ್ಕಳೆನ್ನದೆ ಎಲ್ಲಾ ವಯಸ್ಸಿನ ಮಹಿಳೆಯರ ಮೇಲೆಯೂ ದೌರ್ಜನ್ಯಗಳು ನಡೆಯುತ್ತಿರುವ ಈಗಿನ ಸಂದರ್ಭದಲ್ಲಿ ಹೆಣ್ಣುಮಕ್ಕಳ ಸುರಕ್ಷತೆಯೇ ದೊಡ್ಡ ಸವಾಲಾಗಿದೆ. ಕೆಲವರು ಮಕ್ಕಳ ಚಲನವಲನಗಳ ಮೇಲೆ ಸದಾ ನಿಗಾ ಇರಿಸಲು ಪ್ರಯತ್ನಿಸುತ್ತಿದ್ದಾರೆ. ಆದರೆ ಪಾಕಿಸ್ತಾನದಲ್ಲಿ ತಂದೆಯೊಬ್ಬ ತನ್ನ ಮಗಳ ಭದ್ರತೆಯನ್ನು ನೋಡಿಕೊಳ್ಳಲು ಒಂದು ಹೆಜ್ಜೆ ಮುಂದೆ ಹೋಗಿದ್ದಾನೆ. ಮಗಳ ತಲೆಯ ಮೇಲೆಯೇ ಸಿಸಿಟಿವಿ ಕ್ಯಾಮೆರಾವನ್ನು ಆತ ಅಳವಡಿಸಿದ್ದಾನೆ. ಈ ವಿಚಿತ್ರ 'ಭದ್ರತಾ' ಕ್ರಮದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ತೀವ್ರ ಪರ-ವಿರೋಧದ ಚರ್ಚೆಯನ್ನು ಹುಟ್ಟುಹಾಕಿದೆ.

ತಲೆಯ ಮೇಲೆ ದೊಡ್ಡ ಕ್ಯಾಮೆರಾ ಅಳವಡಿಸಿಕೊಂಡಿರುವ ಮಹಿಳೆಯನ್ನು ಸಂದರ್ಶಿಸುವ ವಿಡಿಯೋ 'ಎಕ್ಸ್' ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಕ್ಯಾಮೆರಾ ಕುರಿತು ಪ್ರಶ್ನಿಸಿದಾಗ, ತನ್ನ ಓಡಾಟದ ಬಗ್ಗೆ ನಿಗಾ ವಹಿಸಲು ಹಾಗೂ ತನ್ನ ಸುರಕ್ಷತೆಯನ್ನು ಖಾತರಿಪಡಿಸಲು ತಂದೆ ಇದನ್ನು ಅಳವಡಿಸಿದ್ದಾಗಿ ಆಕೆ ವಿವರಿಸಿದ್ದಾಳೆ. ಕೆಲ ವರಿಗೆ ಇದು ಹುಚ್ಚಾಟದಂತೆ ಕಾಣಿಸಬಹುದು, ಆದರೆ ಅಪ್ಪ ತೆಗೆದುಕೊಂಡ ನಿರ್ಧಾರದ ಬಗ್ಗೆ ತನಗೆ ಯಾವುದೇ ಆಕ್ಷೇಪಣೆ ಇಲ್ಲ ಎಂದು ಆಕೆ ತಿಳಿಸಿದ್ದಾಳೆ. ಇದು ಮಹಿಳೆಯರ ರಕ್ಷಣೆ ವಿಚಾರದಲ್ಲಿ ಬಹಳ ಪ್ರಶಂಸಾರ್ಹ ಕಾರ್ಯ ಎಂದು ಆಕೆ ಹೇಳಿದ್ದಾಳೆ. ಕರಾಚಿಯಲ್ಲಿ ಇತ್ತೀಚೆಗೆ ನಡೆದ ಮತ್ತೊಂದು ಹಿಂಸಾತ್ಮಕ ಕೃತ್ಯದಲ್ಲಿ ಮಹಿಳೆಯೊಬ್ಬರು ಜೀವ ಕಳೆದುಕೊಂಡ ಘಟನೆಯನ್ನು ಆಕೆ ಉದಾಹರಣೆಯಾಗಿ ನೀಡಿದ್ದಾಳೆ. ತನ್ನ ಸುರಕ್ಷತೆ ಪೋಷಕರಿಗೆ ದೊಡ್ಡ ಕಳವಳವಾಗಿದೆ. ಹೀಗಾಗಿ ಮುಂಜಾಗ್ರತಾ ಕ್ರಮವಾಗಿ ಸಿಸಿಟಿವಿ ಸಾಧನ ಅಳವಡಿಸುವುದು ವಿನೂತನ ಪ್ರಯತ್ನವಾಗಿದೆ ಎಂದು ಹೇಳಿದ್ದಾಳೆ.

ಅಪ್ಪನನ್ನು ತನ್ನ ಖಾಸಗಿ ಭದ್ರತಾ ಕಾವಲುಗಾರ ಎಂದು ಹೇಳಿಕೊಂಡಿರುವ ಯುವತಿ, ಕ್ಯಾಮೆರಾ ಬಳಸಿಕೊಂಡು ತನ್ನ ಎಲ್ಲಾ ಚಟುವಟಿಕೆಗಳನ್ನು ತಂದೆ ಸೂಕ್ಷ್ಮವಾಗಿ ಗಮನಿಸುತ್ತಿರುತ್ತಾರೆ. ಹಿಂಸಾಚಾರದ ಅಪಾಯ ಬಹಳ ವಾಸ್ತವಿಕ. ಅದರಲ್ಲಿಯೂ ಕರಾಚಿಯ ಘಟನೆಯ ಬಳಿಕ ಆತಂಕ ಹೆಚ್ಚಿದೆ. ತನ್ನನ್ನು ಕಾಪಾಡಲು ಕುಟುಂಬವು ಸಾಧ್ಯವಾದ ಎಲ್ಲವನ್ನೂ ಮಾಡಲು ಸಿದ್ಧವಿದೆ ಎಂದು ತಿಳಿಸಿದ್ದಾಳೆ.

ಇದು ಅತಿಯಾಯಿತು ಎಂದು ಕೆಲವರು ಕುಹಕವಾಡಿದ್ದಾರೆ. ಇನ್ನು ಅನೇಕರು, ಆಕೆಗೆ ಖಾಸಗಿತನವೇ ಇಲ್ಲದಂತಾಗಿದೆ ಎಂದು ಟೀಕಿಸಿದ್ದಾರೆ.

ಈ ಮಟ್ಟಕ್ಕೆ ಡಿಜಿಟಲ್ ಆಗುವುದು ಬೇಡವಾಗಿತ್ತು ಎಂದು ಒಬ್ಬರು ತಮಾಷೆ ಮಾಡಿದ್ದಾರೆ. ಯಾರದರೂ ಹಿಂದಿನಿಂದ ಬಂದು ದಾಳಿ ಮಾಡಿದರೆ ಇದು ಉಪಯೋಗವಾಗದು ಎಂದು ಇನ್ನೊಬ್ಬರು ಅದರ ತಾಂತ್ರಿಕ ಸಮಸ್ಯೆಯನ್ನು ತಿಳಿಸಿದ್ದಾರೆ. ಇದು 'ಸಿಸಿಟಿವಿ' ಅಲ್ಲ, SheCTV ಕ್ಯಾಮೆರಾ ಎಂದು ಕೆಲವರು ಚಟಾಕಿ ಹಾರಿಸಿದ್ದಾರೆ. ಕ್ಯಾಮೆರಾ ಸ್ವಲ್ಪ ಸಣ್ಣದಾಯಿತು, ಇನ್ನೂ ದೊಡ್ಡದು ಬೇಕಿತ್ತು ಎಂದು ಒಬ್ಬರು ಲೇವಡಿ ಮಾಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ತರಹೇವಾರಿ ಚರ್ಚೆ

ಇನ್ನೊಂದು ಮಜಲಿನ ಭದ್ರತೆ ಎಂಬ ಶೀರ್ಷಿಕೆಯಲ್ಲಿ ಟ್ವಿಟ್ಟರ್ ಬಳಕೆದಾರರೊಬ್ಬರು ವಿಡಿಯೋವನ್ನು ಹಂಚಿಕೊಂಡಿದ್ದು, ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ಸದ್ದು ಮಾಡಿದೆ. ಕೆಲವರು ಅಪ್ಪನ ಕಾಳಜಿ ಹಾಗೂ ಬದ್ಧತೆಯನ್ನು ಶ್ಲಾಘಿಸಿದ್ದಾರೆ.

ಖರ್ಗೆ, ರಾಹುಲ್, ಸೋನಿಯಾ ಸೇರಿ 40 ತಾರಾ ಪ್ರಚಾರಕರ ಪಟ್ಟಿ ಬಿಡುಗಡೆ

ಚಂಡೀಗಢ: ಅಕ್ಟೋಬರ್ 5ರಂದು ನಡೆಯಲಿರುವ ಹರಿಯಾಣ ವಿಧಾನಸಭಾ ಚುನಾವಣೆಗೆ ಕಾಂಗ್ರೇಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ, ಭೂಪಿಂದರ್ ಹೂಡಾ, ಕುಮಾರಿ ಸೆಲ್ಜಾ ಮತ್ತು ರಣದೀಪ್ ಸಿಂಗ್ ಸುರ್ಜೇವಾಲ ಸೇರಿದಂತೆ 40 ತಾರಾ ಪ್ರಚಾರಕರ ಪಟ್ಟಿಯನ್ನು ಕಾಂಗ್ರೇಸ್ ಬಿಡುಗಡೆ ಮಾಡಿದೆ. ಇತ್ತೀಚೆಗೆ ಪಕ್ಷಕ್ಕೆ (ಕಾಂಗ್ರೇಸ್) ಸೇರ್ಪಡೆಗೊಂಡ ಕುಸ್ತಿಪಟುಗಳಾದ ವಿನೇಶ್ ಪೋಗಾಟ್, ಬಜರಂಗ್ ಪೂನಿಯಾ ಕೂಡ ತಾರಾ ಪ್ರಚಾರಕರ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.

ಇತರ ಪ್ರಮುಖ ಪ್ರಚಾರಕರಲ್ಲಿ ಹಿಮಾಚಲ ಪ್ರದೇಶ ಮುಖ್ಯಮಂತ್ರಿ ಸುಖೀಂದರ್ ಸಿಂಗ್ ಸುಖು, ಪಕ್ಷದ ಹರಿಯಾಣ ರಾಜ್ಯ ಉಸ್ತುವಾರಿ ದೀಪಕ್ ಬಬಾರಿಯಾ, ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಉದಯ್ ಭಾನ್, ಅಜಯ್ ಮಕಾನ್, ಬಿರೇಂದರ್ ಸಿಂಗ್, ಆನಂದ್ ಶರ್ಮಾ ಹಾಗೂ ಸಚಿನ್ ಪೈಲಟ್ ಸೇರಿದ್ದಾರೆ. ಮಾಜಿ ಮುಖ್ಯಮಂತ್ರಿಗಳಾದ ಅಶೋಕ್ ಗೆಹಲೋತ್, ಭೂಪೇಶ್ ಬಾಘೇಲ್, ಚರಂಜಿತ್ ಸಿಂಗ್ ಚನ್ನಿ ಕೂಡ ತಾರಾ ಪ್ರಚಾರಕರ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ. ಪಂಜಾಬ್ ಕಾಂಗ್ರೇಸ್ ಅಧ್ಯಕ್ಷ ಅಮರಿಂದರ್ ಸಿಂಗ್ ರಾಜಾ ವಾರಿಂಗ್, ಪ್ರತಾಪ್ ಸಿಂಗ್ ಬಾಜ್ವಾ, ಪವನ್ ಖೇರಾ, ದೀಪೇಂದರ್ ಸಿಂಗ್ ಹೂಡಾ, ರಾಜೀವ್ ಶುಕ್ಲಾ, ಸುಪ್ರಿಯಾ ಶ್ರೀನೇತ್, ಶ್ರೀನಿವಾಸ್. ಬಿ.ವಿ ಹಾಗೂ ಸುಭಾಷ್ ಬಾತ್ರಿ ಈ ಪಟ್ಟಿಯಲ್ಲಿರುವ ಇತರ ಹಿರಿಯ ನಾಯಕರು. ಹಿಸಾರ್ ಮತ್ತು ಸೋನಿಪತ್ ಸಂಸದರಾದ ಜೈ ಪ್ರಕಾಶ್ ಮತ್ತು ಸತ್ಪಾಲ್ ಬ್ರಹ್ಮಚಾರಿ, ಇಮ್ರಾನ್ ಪ್ರತಾಪ್‌ಗಡಿ, ರಾಜ್ ಬಬ್ಬರ್, ಕನ್ನಯ್ಯಾ ಕುಮಾರ್ ಮತ್ತು ಅಜಯ್ ಸಿಂಗ್ ಯಾದವ್ ಸೇರಿದಂತೆ ಇತರ ನಾಯಕರೂ ಪಕ್ಷದ ತಾರಾ ಪ್ರಚಾರಕರ ಪಟ್ಟಿಯಲ್ಲಿದ್ದಾರೆ. 90 ಸದಸ್ಯ ಬಲದ ಹರಿಯಾಣದ ವಿಧಾನಸಭೆಗೆ ಅಕ್ಟೋಬರ್ 5 ರಂದು ಮತದಾನ ನಡೆಯಲಿದೆ. ಅಕ್ಟೋಬರ್ 8 ರಂದು ಮತ ಎಣಿಕೆ ನಡೆಯಲಿದೆ.

ಕೇಜ್ರಿವಾಲ್‌ಗೆ ಜಾಮೀನು, ಯಾವುದೇ ಕ್ಷಣದಲ್ಲಿ ತಿಹಾರ್ ಜೈಲಿನಿಂದ ಬಿಡುಗಡೆ

ನವದೆಹಲಿ: ದೆಹಲಿ ಅಬಕಾರಿ ಪರಿಷ್ಕರಣ ನೀತಿ ಪ್ರಕರಣದಲ್ಲಿ ಸಿಬಿಐನಿಂದ ಬಂಧನಕ್ಕೊಳಪಟ್ಟಿದ್ದ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್‌ಗೆ ಆರು ತಿಂಗಳ ನಂತರ ಬಿಡುಗಡೆಯ ಭಾಗ್ಯ ಲಭಿಸಿದೆ. ಸುಪ್ರೀಂಕೋರ್ಟ್ ಶುಕ್ರವಾರ ಕೇಜ್ರಿವಾಲ್‌ಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದ್ದು, ಯಾವುದೇ ಕ್ಷಣದಲ್ಲಿ ಅವರು ತಿಹಾರ್ ಜೈಲಿನಿಂದ ಬಿಡುಗಡೆಯಾಗಲಿದ್ದಾರೆ. ಕೇಜ್ರಿವಾಲ್ ಅವರು ಪ್ರಕರಣದ ಬಗ್ಗೆ ಸಾರ್ವಜನಿಕವಾಗಿ ಇಲ್ಲವೇ ಮಾಧ್ಯಮಗಳಿಗೆ ಹೇಳಿಕೆ ನೀಡದಿರುವುದು ಸರ್ಕಾರಿ ಕಡತಗಳಿಗೆ ಸಹಿ ಹಾಕದಿರುವುದು, ಕಚೇರಿಗಳಿಗೆ ತೆರಳದಿರುವುದು, 10 ಲಕ್ಷದ ಎರಡು ಬಾಂಡ್‌ಗಳು, ವಿಚಾರಣಾಧೀನ ನ್ಯಾಯಾಲಯಕ್ಕೆ ಸಹಕಾರ ಕೊಡುವುದು ಸೇರಿದಂತೆ ಹಲವು ಷರತ್ತುಗಳನ್ನು ವಿಧಿಸಿದೆ.

ಅಬಕಾರಿ ಪರಿಷ್ಕರಣ ನೀತಿ ಪ್ರಕರಣದಲ್ಲಿ ಬಂಧನಕ್ಕೆ ಒಳಪಟ್ಟಿದ್ದ ದೆಹಲಿ ಮಾಜಿ ಡಿಸಿಎಂ ಮನೀಷ್ ಸಿಸೋಡಿಯಾ, ರಾಜ್ಯಸಭಾ ಸದಸ್ಯ ಸಂ ಜಯ್ಸಿಂಗ್, ತೆಲಂಗಾಣ ಮಾಜಿ ಮುಖ್ಯಮಂತ್ರಿ ಚಂದ್ರಶೇಖರ್ ರಾವ್ ಪುತ್ರಿ ಕೆ. ಕವಿತ ಹಾಗೂ ವಿನಯ್ ನಾಯರ್ ಅವರುಗಳಿಗೆ ಈಗಾಗಲೇ ಸುಪ್ರೀಂಕೋರ್ಟ್ ಜಾಮೀನು ಮಂಜೂರು ಮಾಡಿದೆ. ಕಾಯ್ದಿರಿಸಿದ್ದ ತೀರ್ಪನ್ನು ಪ್ರಕಟಿಸಿದ ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ಸೂರ್ಯಕಾಂತ, ಉಜ್ಜಲ್ ಬುಯಾನ್ ಅವರನ್ನೊಳಗೊಂಡ ದ್ವಿಸದಸ್ಯ ಪೀಠ ಕೇಜ್ರಿವಾಲ್‌ಗೆ ಜಾಮೀನು ಮಂಜೂರು ಮಾಡಿ ಅಗತ್ಯವಿದ್ದಲ್ಲಿ ತನಿಖಾ ಸಂಸ್ಥೆಗಳಿಗೆ, ತನಿಖೆಗೆ ಸಹಕಾರ ನೀಡಬೇಕು ಎಂದು ಸೂಚನೆ ನೀಡಿತು. ಆಪ್ ರಾಷ್ಟ್ರೀಯ ಸಂಚಾಲಕರಾಗಿರುವ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಈ ಮೊದಲು ಮಾ. 21 ರಂದು ಬೇನಾಮಿ ಹಣ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ಬಂಧಿಸಿತ್ತು. ಅವರಿಗೆ ಜಾಮೀನು ಸಿಕ್ಕಿತ್ತಾದರೂ ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಜೂ.26 ರಂದು ತಿಹಾರ್ ಜೈಲಿನಲ್ಲಿದ್ದ ಕೇಜ್ರಿವಾಲ್ ಅವರನ್ನು ಸಿಬಿಐ ಬಂಧಿಸಿತ್ತು. ತಮ ಬಂಧನವನ್ನು ಪ್ರಶ್ನಿಸಿ ಕೇಜ್ರಿವಾಲ್ರವರು ತಮ ಪರವಾಗಿ ವಾದಿಸಲು ಸುಪ್ರೀಂಕೋರ್ಟ್‌ನಲ್ಲಿ ಹಿರಿಯ ವಕೀಲ ಅಭಿಷೇಕ್ ಮನುಸಿಂಘ್ವಿ ಅವರನ್ನು ನೇಮಿಸಿಕೊಂಡಿದ್ದರು. ಕೇಜ್ರಿವಾಲ್ ಬಂಧಿಸುವ ವೇಳೆ ಯಾವುದೇ ರೀತಿಯ ಕಾನೂನು ಉಲ್ಲಂಘನೆಯಾಗಿಲ್ಲ ಎಂದು ಹೇಳಿರುವ ಸುಪ್ರೀಂಕೋರ್ಟ್ ಸಿಬಿಐ ಅನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದೆ. ಸಿಬಿಐ ಪಂಜರದ ಗಿಳಿಯಲ್ಲ ಎಂಬುದನ್ನು ಜನತೆಯ ಮುಂದೆ ಸಾಬೀತುಪಡಿಸಬೇಕು. ಆರೋಪಿಯೊಬ್ಬನ ಮೇಲೆ ಆರೋಪವಿದ್ದ ತಕ್ಷಣ ಜಾಮೀನು ನೀಡಬಾರದು ಎಂದು ತಕರಾರು ತೆಗೆಯುವುದು ಸರಿಯಲ್ಲ, ಸಿಬಿಐ ಅರವಿಂದ್ ಕೇಜ್ರಿವಾಲ್ ಅವರನ್ನು ಆತುರವಾಗಿ ಬಂಧಿಸಿದೆ ಎಂದು ವಕೀಲರು ಆಕ್ಷೇಪ ವ್ಯಕ್ತಪಡಿಸಿದೆ. ಕೇಜ್ರಿವಾಲ್ ಅವರನ್ನು ಯಾವ ಕಾರಣಕ್ಕಾಗಿ ಅಷ್ಟೊಂದು ಆತುರದಲ್ಲಿ ಬಂಧಿಸಲಾಯಿತು.

ಸಿಬಿಐನ ಉದ್ದೇಶವಾದರೂ ಏನು?, ನೀವು ನಿಷ್ಪಕ್ಷ ಪಾತವಾಗಿ ತನಿಖೆ ಮಾಡುತ್ತಿದ್ದೀರೋ, ಇಲ್ಲವೇ ಬೆದರಿಸುವ ಕೆಲಸ ಮಾಡುತ್ತಿದ್ದೀರೋ ಎಂದು ಸಿಬಿಐ ಪರ ವಕೀಲರನ್ನು ಕಠಿಣ ಪದಗಳಲ್ಲಿ ಪ್ರಶ್ನೆ ಮಾಡಿದರು. ಜಾಮೀನು ನಿರಾಕರಿಸಿದ್ದನ್ನು ಹಾಗೂ ಸಿಬಿಐ ಬಂಧಿಸಿರುವುದನ್ನು ಪ್ರಶ್ನಿಸಿ ಕೇಜ್ರಿವಾಲ್, ಎರಡು ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸಿದ್ದರು. ಕೇಜ್ರಿವಾಲ್ ಅವರನ್ನು ಸಿಬಿಐ ಜೂ. 26ರಂದು ಬಂಧಿಸಿತ್ತು. ಅವರ ಬಂಧನವನ್ನು ದೆಹಲಿ ಹೈಕೋರ್ಟ್ ಆ. 5ರಂದು ಎತ್ತಿಹಿಡಿದಿತ್ತು. ಇದಕ್ಕೂ ಮುನ್ನ ದೆಹಲಿ ಹೈಕೋರ್ಟ್ ಆಗಸ್ಟ್ 14ರಂದು ಕೇಜ್ರಿವಾಲ್ ಅವರ ಮನವಿಯನ್ನು ತಿರಸ್ಕರಿಸಿತ್ತು. ಜಾಮೀನಿಗಾಗಿ ವಿಚಾರಣಾ ನ್ಯಾಯಾಲಯವನ್ನು ಸಂಪರ್ಕಿಸುವಂತೆ ಕೇಳಿತ್ತು. ಹೈಕೋರ್ಟ್ ಜಾಮೀನು ನಿರಾಕರಿಸಿದ್ದರಿಂದ ಅರವಿಂದ್ ಕೇಜ್ರಿವಾಲ್ ಅವರು ಸುಪ್ರೀಂ ಕೋರ್ಟ್ ನಲ್ಲಿ ಮೇಲನವಿ ಸಲ್ಲಿಸಲು ಕಾರಣವಾಯಿತ

ಫಸ್ಟ್ ನೈಟ್ ಸಿಡಿ ಕಳೆದುಕೊಂಡ ದಿಮ್ರಿ

ಸಖತ್ ಆಗಿದೆ ಹೊಸ ಚಿತ್ರದ ಟ್ರೈಲರ್

'ಅನಿಮಲ್' ಚಿತ್ರದ ನಟಿ ತೃಪ್ತಿ ದಿಮ್ರಿ ಮತ್ತೊಮ್ಮೆ ಬೋಲ್ಡ್ ಪಾತ್ರದಲ್ಲಿ ನಟಿಸಿದ್ದಾರೆ. 'ವಿಕ್ಕಿ ವಿದ್ಯಾ ಕಾ ವೋ ವಾಲಾ ವಿಡಿಯೋ' ಚಿತ್ರದಲ್ಲಿ ಫಸ್ಟ್ ನೈಟ್ ಸಿಡಿ ಕಳೆದುಕೊಂಡ ಗೃಹಿಣಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಈ ಸಿನಿಮಾದ ಟ್ರೈಲರ್ ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ಮೊದಲ ರಾತ್ರಿಯಲ್ಲಿ ತಮ್ಮ ಖಾಸಗಿ ವಿಡಿಯೋ ಮಾಡಿಕೊಂಡು ಪೇಚಿಗೆ ಸಿಲುಕಿದ ಗಂಡ-ಹೆಂಡತಿಯ ಕಥೆ ಈ ಸಿನಿಮಾದಲ್ಲಿದೆ. ಮನೆಗೆ ಬಂದ ಕಳ್ಳರು ಸಿಡಿ ಪ್ಲೇಯರ್ ಕದಿಯುತ್ತಾರೆ. ಅದರ ಜೊತೆ ಸಿಡಿ ಕೂಡ ಕಳ್ಳತನ ಆಗುತ್ತದೆ. ಆದರೆ ಯಾರೋ ಒಬ್ಬರು ಅವರ ಫಸ್ಟ್ ನೈಟ್ ಸಿಡಿ ಕದ್ದು 2 ಲಕ್ಷ ಕೊಡಬೇಕೆಂದು ಬ್ಲಾಕ್ ಮೇಲ್ ಮಾಡುತ್ತಾರೆ. ಏನೋ ಮಾಡಲು ಹೋಗಿ ಇನ್ನೇನೋ ಎಡವಟ್ಟಾಗುತ್ತದೆ. ಆ ಸಿಡಿ ಹುಡುಕಲು ಗಂಡ-ಹೆಂಡತಿ ಏನೆಲ್ಲ ಸರ್ಕಸ್ ಮಾಡುತ್ತಾರೆ ಎಂಬ ಕಥೆಯನ್ನು 'ವಿಕ್ಕಿ ವಿದ್ಯಾ ಕಾ ವೋ ವಾಲಾ ವಿಡಿಯೋ' ಸಿನಿಮಾದಲ್ಲಿ ತೋರಿಸಲಾಗುತ್ತಿದೆ. ಮೊದಲ ಬಾರಿಗೆ ರಾಜ್‌ಕುಮಾರ್ ರಾವ್‌ಗೆ ಜೋಡಿಯಾಗಿ ತೃಪ್ತಿ ನಟಿಸಿದ್ದಾರೆ. ಇಬ್ಬರ ಕಾಂಬಿನೇಷನ್ ಟ್ರೈಲರ್‌ನಲ್ಲಿ ಮೋಡಿ ಮಾಡಿದೆ. ಹಾಗಾಗಿ ಬಗೆಗಿನ ಕ್ಯೂರಿಯಾಸಿಟಿ ಫ್ಯಾನ್ಸ್‌ಗೆ ಹೆಚ್ಚಾಗಿದೆ. ಚಿತ್ರದ ಇನ್ನೊಂದು ವಿಶೇಷ ಅಂದ್ರೆ ಮಲ್ಲಿಕಾ ಶೆರಾವತ್ ಸ್ಪೆಷಲ್ ರೋಲ್‌ನಲ್ಲಿ ನಟಿಸಿದ್ದಾರೆ.

ಕಳೆದುಕೊಂಡ ಸಿಡಿಗಾಗಿ ಪರದಾಡುವ ಈ ಜೋಡಿಗೆ ಮಲ್ಲಿಕಾ ಪಾತ್ರ ಸಹಾಯ ಮಾಡುತ್ತಾರೆ ಇನ್ನೊಂದು ಇಂಟರೆಸ್ಟಿಂಗ್. ತೃಪ್ತಿ ಜೋಡಿ ವೈವಾಹಿಕ ಬದುಕನ್ನು ಮರಳಿ ಟ್ರ್ಯಾಕ್‌ಗೆ ತರಲು ಮಲ್ಲಿಕಾ ಪಾತ್ರ ಯಾವ ರೀತಿ ಸಹಾಯ ಮಾಡುತ್ತೆ ಎಂಬುದನ್ನು ಟ್ರೈಲರ್‌ನಲ್ಲಿ ಸಣ್ಣ ಝಲಕ್ ತೋರಿಸಿದ್ದಾರೆ. ಒಟ್ಟಲ್ಲಿ ಕಾಮಿಡಿ ಕಮ್ ರೊಮ್ಯಾಂಟಿಕ್ ನೋಡಲು ಫ್ಯಾನ್ಸ್ ಕಾಯುತ್ತಿದ್ದಾರೆ.

ಮಕ್ಕಳನ್ನು ಮಾಡಿಕೊಳ್ಳೋಕೆ ಭಯ

ಮಿಲ್ಕಿ ಬ್ಯೂಟಿ ತಮನ್ನಾ ಭಾಟಿಯಾ ಸೌತ್ ಮತ್ತು ಬಾಲಿವುಡ್‌ನಲ್ಲಿ ಬೇಡಿಕೆಯ ನಟಿಯರಲ್ಲಿ ಒಬ್ಬರಾಗಿದ್ದಾರೆ. ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಬ್ಯುಸಿಯಿರುವ ನಟಿ ಇದೀಗ ನನಗೆ ಮಕ್ಕಳನ್ನು ಮಾಡಿಕೊಳ್ಳೋಕೆ ಭಯ ಎಂದು ಸಂದರ್ಶನವೊಂದರಲ್ಲಿ ಮಾತನಾಡಿದ್ದಾರೆ. ಇತ್ತೀಚೆಗೆ ತಮನ್ನಾ ನೀಡಿದ ಸಂದರ್ಶನವೊಂದರಲ್ಲಿ, ಮದುವೆ ಮತ್ತು ಮಕ್ಕಳು ಮಾಡಿಕೊಳ್ಳುವ ಬಗ್ಗೆ ಓಪನ್ ಆಗಿ ನಟಿ ಮಾತನಾಡಿದ್ದಾರೆ. ತಾಯಂದಿರು, ತಮ್ಮ ಮಕ್ಕಳಿಗೆ ತಮ್ಮ ಸರ್ವಸ್ವವನ್ನೇ ನೀಡ್ತಾರೆ. ಮಕ್ಕಳಿಗೆ ಅಷ್ಟೊಂದು ಪ್ರೀತಿ, ಕಾಳಜಿ, ಆರೈಕೆ ಮಾಡಲು ನನ್ನಿಂದ ಸಾಧ್ಯವಿಲ್ಲ. ನನ್ನ ಪಾಲಕರು ನನಗೆ ಸಿಕ್ಕಾಪಟ್ಟೆ ಪ್ರೀತಿ ನೀಡಿದ್ದಾರೆ. ಅವರು ಕೇರ್ ಮಾಡೋದನ್ನು ನೋಡಿದ್ದರೆ, ಪೇರೆಂಟಿಂಗ್ ಡಿಗ್ರಿ ಪಡೆದಿದ್ದಾರೆ ಅನ್ನಿಸುತ್ತದೆ. ಆದರೆ ಇದೆಲ್ಲಾ ನನ್ನಿಂದ ಇದೆಲ್ಲ ಸಾಧ್ಯವಿಲ್ಲ ಅನ್ನಿಸುತ್ತದೆ ಎಂದಿದ್ದಾರೆ.

ಮಕ್ಕಳಿಗೆ ಜನ್ಮ ನೀಡಿದ ನಂತರ ಏನಾಗಬಹುದು ಎಂಬುದನ್ನು ಊಹಿಸಿಕೊಂಡರೆ ನನಗೆ ಭಯವಾಗುತ್ತದೆ ಎಂದು ತಮನ್ನಾ ಭಾಟಿಯಾ ಹೇಳಿದ್ದಾರೆ. ಮಿಲ್ಕಿ ಬ್ಯೂಟಿ ಮುಂದೆ ಮದುವೆ ಆದ್ರೂ ಮಕ್ಕಳನ್ನು ಮಾಡ್ಕೊಳ್ಳೋದಿಲ್ವಾ ಎನ್ನುವ ಪ್ರಶ್ನೆ ಇದೀಗ ಫ್ಯಾನ್ಸ್ ತಲೆಯಲ್ಲಿ ಕೊರೆಯೋಕೆ ಶುರುವಾಗಿದೆ. ಅಂದಹಾಗೆ, ತಮನ್ನಾ ಸದ್ಯ ವಿಜಯ್ ವರ್ಮಾ ಡೇಟಿಂಗ್ ಮಾಡುತ್ತಿದ್ದಾರೆ. ಮದುವೆ ಅದ್ಯಾವಾಗ ಗುಡ್ ನ್ಯೂಸ್ ಕೊಡುತ್ತಾರೆ ಎಂದು ಅಭಿಮಾನಿಗಳು ಎದುರು ನೋಡ್ತಿದ್ದಾರೆ.

ಬಾಲಿ ಬ್ಯೂಟಿಗೆ ಬೆರಗಾದ ಪಾರು

ಕನ್ನಡ ಕಿರುತೆರೆ ಜನಪ್ರಿಯ ಸೀರಿಯಲ್ 'ಪಾರು' ನಟಿ ಮೋಕ್ಷಿತಾ ಪೈ ಬಾಲಿಗೆ ಹಾರಿದ್ದಾರೆ. ಬಾಲಿ ಪ್ರಕೃತಿ ನೋಡಿ ಮೈಮರೆತಿದ್ದಾರೆ. ವೆಕೇಷನ್‌ನ ಸುಂದರ ಫೋಟೋಗಳನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಮೋಕ್ಷಿತಾಗೆ ಟ್ರಾವೆಲಿಂಗ್ ಎಂದರೆ ತುಂಬಾ ಇಷ್ಟ. ಸದಾ ಹೊಸ ಜಾಗಗಳಿಗೆ ನಟಿ ಭೇಟಿ ಕೊಡುತ್ತಲೇ ಇರುತ್ತಾರೆ. ಇದೀಗ ಬಾಲಿ ಪ್ರಕೃತಿ ಸೌಂದರ್ಯಕ್ಕೆ ನಟಿ ಫಿದಾ ಆಗಿದ್ದಾರೆ. ಸಹೋದರಿ ಜೊತೆ ಇಂಡೋನೇಷ್ಯಾ ಬಾಲಿಗೆ ನಟಿ ಭೇಟಿ ನೀಡಿದ್ದು, ವಿವಿಧ ಸ್ಥಳಕ್ಕೆ ತೆರಳಿ ಖುಷಿಪಟ್ಟಿದ್ದಾರೆ. ಫೋಟೋ ಕ್ಲಿಕ್ಕಿಸಿಕೊಂಡು ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿ ಸಂಭ್ರಮಿಸಿದ್ದಾರೆ. ಅಂದಹಾಗೆ, ಇತ್ತೀಚೆಗೆ ದುಬೈ, ಮನಾಲಿ, ಊಟಿಗೂ ಭೇಟಿ ನೀಡಿದ್ದರು. ಊಟಿ ಪ್ರವಾಸಿಗರು ನೋಡಲೇಬೇಕಾದ ಪ್ರವಾಸಿಗರ ಸ್ಥಳ. ತಮಿಳುನಾಡಿನ ನೀಲಗಿರಿ ಪರ್ವತದ ತಪ್ಪಲಿನಲ್ಲಿದೆ. ಈ ಮಳೆಗಾಲದ ಸಮಯದಲ್ಲಿ ಕೊರೆವ ಚಳಿಯಲ್ಲಿ ಪಾರು ಫೋಟೋ ಕ್ಲಿಕ್ಕಿಸಿಕೊಂಡಿದ್ದರು. ಕ್ಯೂಟ್ ಆಗಿ ಕ್ಯಾಮೆರಾಗೆ ಪೋಸ್ ನೀಡಿದ್ದರು. ಈ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡಿತ್ತು.

'ಪಾರು' ಸೀರಿಯಲ್ ಬಳಿಕ ಮೋಕ್ಷಿತಾ ಪೈ ಸೋಷಿಯಲ್ ಮೀಡಿಯಾದಲ್ಲಿ ಸಖತ್ ಆಕ್ಟೀವ್ ಆಗಿದ್ದಾರೆ. ತಮ್ಮದೇ ಯೂಟ್ಯೂಬ್ ಚಾನೆಲ್ ಕೂಡ ಶುರು ಮಾಡುವ ಮೂಲಕ ಸದ್ದು ಮಾಡುತ್ತಿದ್ದಾರೆ. ಸದ್ಯ ಹೊಸ ಫೋಟೋಶೂಟ್‌ಗಳ ಮೂಲಕ ಪಡ್ಡೆಹುಡುಗರ ನಿದ್ದೆಕೆಡಿಸಿರುವ ಪಾರು, ಈ ಹೊಸ ಪಾತ್ರಗಳ ಹುಡುಕಾಟದಲ್ಲಿದ್ದಾರೆ. ಅವಕಾಶಗಳಿಗೆ ಕೊರತೆಯಿಲ್ಲ, ಆದರೆ ಚಾಲೆಂಜಿಂಗ್ ಎನಿಸುವಂತಹ ಕಥೆಯಲ್ಲಿ ಕಾಣಿಸಿಕೊಳ್ಳಲು ನಟಿ ಎದುರು ನೋಡ್ತಿದ್ದಾರೆ. ಅದು ಸೀರಿಯಲ್ ಅಥವಾ ಸಿನಿಮಾನಾ ಎಂದು ಕಾದುನೋಡಬೇಕಿದೆ.

ದೆವ್ವದ ಪಾತ್ರ ಮಾಡಲು ಒಪ್ಪಿಕೊಂಡ್ರಾ ಪೂಜಾ ಹೆಗ್ಡೆ

ಕರಾವಳಿ ಬೆಡಗಿ ಪೂಜಾ ಹೆಗ್ಡೆ ಸಾಲು ಸಾಲು ಸಿನಿಮಾಗಳ ಸೋಲನ್ನು ಕಂಡಿರುವ ಹಿನ್ನೆಲೆ ದಿಟ್ಟ ನಿರ್ಧಾರವೊಂದನ್ನು ಕೈಗೊಂಡಿದ್ದಾರೆ. ಹೊಸ ಬಗೆಯ ಪಾತ್ರಗಳನ್ನು ಮಾಡಲು ಮುಂದಾಗಿದ್ದಾರೆ. ತಮಿಳಿನ ಹೊಸ ಸಿನಿಮಾದಲ್ಲಿ ದೆವ್ವದ ಪಾತ್ರದಲ್ಲಿ ನಟಿಸಲು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಷಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಪೂಜಾಗೆ ಕೆರಿಯರ್‌ನಲ್ಲಿ ಹೇಳಿಕೊಳ್ಳುವಂತಹ ಸಕ್ಸಸ್ ಸಿಗುತ್ತಿಲ್ಲ, ಆದರೆ ಅವರಿಗೆ ಬೇಡಿಕೆಯೇನು ಕಮ್ಮಿಯಾಗಿಲ್ಲ. ಬಾಲಿವುಡ್ ಮತ್ತು ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಖ್ಯಾತ ನಟ ರಾಘವ್ ಲಾರೆನ್ಸ್ ನಟನೆಯ 'ಕಾಂಚನಾ ಪಾರ್ಟ್ 4'ನಲ್ಲಿ ದೆವ್ವದ ಪಾತ್ರದಲ್ಲಿ ನಟಿಸಲು ಚಿತ್ರತಂಡ ನಟಿಯನ್ನು ಕೇಳಲಾಗಿದೆಯಂತೆ. ಈಗಾಗಲೇ ಒಂದು ಹಂತದ ಮಾತುಕತೆ ನಡೆದಿದೆ. ಆದರೆ ನಟಿ ಒಪ್ಪಿಕೊಂಡ್ರಾ ಎಂಬುದರ ಬಗ್ಗೆ ಅಧಿಕೃತ ಘೋಷಣೆಯಾಗಬೇಕಿದೆ.

ದೆವ್ವ ಪಾತ್ರವಾಗಿದ್ದರೂ ನಟನೆಗೆ ಸ್ಕೋಪ್ ಇರುವ ಪಾತ್ರ ಇದಾಗಿದೆ. ಒಂದು ವೇಳೆ, ಈ ಪಾತ್ರ ಒಪ್ಪಿದ್ದೇ ಆದರೆ ಹೊಸ ಪಾತ್ರದಲ್ಲಿ ನಟಿ ಕಾಣಿಸಿಕೊಂಡಂತೆ ಆಗುತ್ತದೆ. ಜಸ್ಟ್ ವೈರಲ್ ಆಗುತ್ತಿರುವ ಸುದ್ದಿ ಕೇಳಿಯೇ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. ಪೂಜಾರನ್ನು ದೆವ್ವ ಪಾತ್ರದಲ್ಲಿ ನೋಡಲು ಕಾಯುತ್ತಿದ್ದಾರೆ. ಅಂದಹಾಗೆ, ಶಾಹಿದ್ ಕಪೂರ್ ನಟನೆಯ ದೇವ ಚಿತ್ರದಲ್ಲಿ ಪೂಜಾ ಹೀರೋಯಿನ್ ನಟಿಸಿದ್ದಾರೆ. ತಮಿಳು ನಟ ಸೂರ್ಯ ನಟನೆಯ 44ನೇ ಚಿತ್ರಕ್ಕೂ ಇವರೇ ನಾಯಕಿಯಾಗಿ ಆಯ್ಕೆಯಾಗಿದ್ದಾರೆ. ಇದಕ್ಕೆ, ಕಾರ್ತಿಕ್ ಸುಬ್ಬರಾಜ್ ನಿರ್ದೇಶನ ಮಾಡುತ್ತಿದ್ದಾರೆ.

ನಾಗಶೇಖರ್ ಚಿತ್ರಕ್ಕೆ ಬಾಲಿವುಡ್ ನಟಿ ಆವಂತಿಕಾ ನಾಯಕಿ



ಈಗಾಗಲೇ ನಾಗಶೇಖರ್ ನಿರ್ದೇಶನದ 'ಸಂಜು ವೆಡ್ಸ್ ಗೀತಾ' ಚಿತ್ರದ ಚಿತ್ರೀಕರಣ ಮುಗಿದು ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿದೆ. ಅದರ ಹಿಂದೆಯೇ ನಾಗಶೇಖರ್ ತಮ್ಮ ಮುಂದಿನ ಪ್ರಾಜೆಕ್ಟನ್ನು ಅನೌನ್ಸ್ ಮಾಡಿದ್ದಾರೆ. ಕನ್ನಡ, ತೆಲುಗು, ತಮಿಳು ಸೇರಿದಂತೆ 3 ಭಾಷೆಗಳಲ್ಲಿ, ಬಿಗ್ ಬಜೆಟ್ ನಲ್ಲಿ ನಿರ್ಮಾಣವಾಗುತ್ತಿರುವ ಆ ಚಿತ್ರದ ಹೆಸರು 'ಕ್ಯೂ'. ತಮ್ಮದೇ ಆದ ನಾಗಶೇಖರ್ ಮ್ಯಾಜಿಕ್ಸ್ ಅಡಿಯಲ್ಲಿ ಈ ಚಿತ್ರವನ್ನು ನಿರ್ಮಿಸಿ, ನಿರ್ದೇಶಿಸುತ್ತಿರುವ ನಾಗಶೇಖರ್ ಕಥೆ, ಚಿತ್ರಕಥೆಯ ಜೊತೆಗೆ ಸಂಗೀತದ ಜವಾಬ್ದಾರಿಯನ್ನೂ ಸಹ ತಾವೇ ಹೊತ್ತಿದ್ದಾರೆ. ರಾಮ್ ಚಿರು ಲೈನ್ ಪ್ರೊಡ್ಯೂಸರ್ ಆಗಿರುವ ಈ ಚಿತ್ರವನ್ನು ಭಾವನಾ ರವಿ ಅವರು ಪ್ರೆಸೆಂಟ್ ಮಾಡುತ್ತಿದ್ದಾರೆ. ಈ ಚಿತ್ರದ ಮೂಲಕ ನಾಗಶೇಖರ್ ಅವರು, ಮೈನೆ ಪ್ಯಾರ್ ಕಿಯಾ ಖ್ಯಾತಿಯ ನಟಿ ಭಾಗ್ಯಶ್ರೀ ಅವರ ಪುತ್ರಿ ಅವಂತಿಕಾ ದಸ್ಸಾನಿ ಅವರನ್ನು ನಾಯಕಿಯಾಗಿ ಕನ್ನಡ ಚಿತ್ರರಂಗಕ್ಕೆ ಪರಿಚಯಿಸುತ್ತಿದ್ದಾರೆ. ಉಪೇಂದ್ರ ಅಣ್ಣನ ಪುತ್ರ ನಿರಂಜನ್ ಚಿತ್ರದ ನಾಯಕ. ಮುಂದಿನ ತಿಂಗಳಿಂದ ಈ ಚಿತ್ರದ ಶೂಟಿಂಗ್ ಆರಂಭವಾಗಲಿದ್ದು, ಡಿ.ಜೆ. ಚಕ್ರವರ್ತಿ ಸಂಭಾಷಣೆ ರಚಿಸಿದ್ದಾರೆ.

ಅಯ್ಯ ಯ್ಯೋ ಅಯ್ಯರ್ ಕನ್ನಡಕ ಧರಿಸಿ ಬ್ಯಾಟಿಂಗ್

ಶೂನ್ಯಕ್ಕೆ ಔಟಾದ ಶ್ರೇಯಸ್‌ಗೆ ಟ್ರೋಲಿಗರ ಕಾಟ

ಟೀಂ ಇಂಡಿಯಾದ ಮಧ್ಯಮ ಕ್ರಮಾಂಕದ ಬ್ಯಾಟರ್ ಶ್ರೇಯಸ್ ಅಯ್ಯರ್ ಅವರ ವೃತ್ತಿಜೀವನ ಸದ್ಯಕ್ಕೆ ಹಳಿ ತಪ್ಪಿದ ರೈಲಿನಂತ್ತಾಗಿದೆ. ಸಾಕಷ್ಟು ಅವಕಾಶಗಳು ಸಿಕ್ಕರೂ ಅಯ್ಯರ್‌ಗೆ ಫಾರ್ಮ್ ಕಂಡುಕೊಳ್ಳಲು ಸಾಧ್ಯವಾಗುತ್ತಿಲ್ಲ. ಶ್ರೀಲಂಕಾ ಪ್ರವಾಸದಲ್ಲಿ ಸಿಕ್ಕ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳುವಲ್ಲಿ ವಿಫಲರಾಗಿದ್ದ ಅಯ್ಯರ್, ಆ ಬಳಿಕ ಬಾಂಗ್ಲಾದೇಶ ವಿರುದ್ಧದ ಟೆಸ್ಟ್ ಸರಣಿಯಿಂದ ಹೊರಬಿದ್ದಿದ್ದರು. ಇದೀಗ ದುಲೀಪ್ ಟ್ರೋಫಿಯಲ್ಲೂ ಅಯ್ಯರ್ ಕಳಪೆ ಫಾರ್ಮ್ ಮುಂದುವರೆದಿದೆ. ಮೊದಲ ಪಂದ್ಯದಲ್ಲಿ ಅರ್ಧಶತಕದ ಇನ್ನಿಂಗ್ಸ್ ಆಡಿದರೂ ಅಯ್ಯರ್ ತಂಡಕ್ಕೆ ಗೆಲುವು ಸಿಕ್ಕಿರಲಿಲ್ಲ. ಇದೀಗ ನಡೆಯುತ್ತಿರುವ ಎರಡನೇ ಪಂದ್ಯದಲ್ಲಿ ಅಯ್ಯರ್‌ಗೆ ಖಾತೆ ತೆರೆಯಲು ಸಾಧ್ಯವಾಗಲಿಲ್ಲ. ಕ್ರಿಕೆಟ್‌ನಲ್ಲಿ ಬ್ಯಾಟರೊಬ್ಬ ಶೂನ್ಯಕ್ಕೆ ಔಟಾಗುವುದು ಸರ್ವೆ ಸಾಮಾನ್ಯ. ಆದರೆ ಶ್ರೇಯಸ್ ಅವರನ್ನು ಸೋಶಿಯಲ್ ಮೀಡಿಯಾದಲ್ಲಿ ಸಖತ್ ಟ್ರೋಲ್ ಮಾಡಲಾಗುತ್ತಿದೆ. ಇದಕ್ಕೆ ಕಾರಣ ಅಯ್ಯರ್ ಶೂನ್ಯಕ್ಕೆ ಔಟಾದುದ್ದಲ್ಲ, ಬದಲಿಗೆ ಅವರು ಕಪ್ಪು ಕನ್ನಡಕ ಧರಿಸಿ ಬ್ಯಾಟಿಂಗ್‌ಗೆ ಬಂದಿದ್ದು.

ಕಪ್ಪು ಕನ್ನಡಕ ಧರಿಸಿ ಬ್ಯಾಟಿಂಗ್‌ಗೆ ಇಳಿದ ಅಯ್ಯರ್

ವಾಸ್ತವವಾಗಿ ದುಲೀಪ್ ಟ್ರೋಫಿಯ ಎರಡನೇ ಸುತ್ತಿನ ಪಂದ್ಯದಲ್ಲಿ ಭಾರತ ಎ ಹಾಗೂ ಭಾರತ ಡಿ ತಂಡಗಳು ಮುಖಾಮುಖಿಯಾಗಿವೆ. ಈ ಪಂದ್ಯದಲ್ಲಿ ಭಾರತ ಡಿ ತಂಡದ ನಾಯಕನಾಗಿರುವ ಶ್ರೇಯಸ್ ಅಯ್ಯರ್ ಕನ್ನಡಕ ಹಾಕಿಕೊಂಡು ಬ್ಯಾಟಿಂಗ್ ಮಾಡಲು ಕ್ರೀಸ್‌ಗೆ ಬಂದಿದ್ದರು. ಆದರೆ ಕೇವಲ 7 ಎಸೆತಗಳನ್ನು ಆಡಿದ ಅಯ್ಯರ್ ಖಾತೆ ತೆರೆಯದೆ ಔಟಾದರು. ಖಲೀಲ್ ಅಹ್ಮದ್ ಎಸೆತದಲ್ಲಿ ಔಟಾದ ಅಯ್ಯರ್ ಬಂದಷ್ಟೇ ವೇಗವಾಗಿ ಪೆವಿಲಿಯನ್ ಸೇರಿಕೊಂಡರು. ಇದರ ನಂತರ, ಅಯ್ಯರ್ ಅವರನ್ನು ಟ್ರೋಲ್ ಮಾಡಲು ಶುರು ಮಾಡಿರುವ ನೆಟ್ಟಿಗರು ತರಹೆವಾರಿ ಕಾಮೆಂಟ್‌ಗಳೊಂದಿಗೆ ಅವರ ಕಾಲೆಳೆದಿದ್ದಾರೆ. ಅವುಗಳ ಒಂದಿಷ್ಟು ಝಲಕ್ ಇಲ್ಲಿದೆ.

ಪಂದ್ಯ ಹೀಗಿದೆ: ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿರುವ ಭಾರತ ಎ ತಂಡ ಮೊದಲ ಇನ್ನಿಂಗ್ಸ್ ನಲ್ಲಿ 290 ರನ್ ಗಳಿಸಿತು. ತಂಡದ ಪರ ಶಮ್ಸ್ ಮುಲಾನಿ 89 ರನ್‌ಗಳ ಅತ್ಯಧಿಕ ಇನ್ನಿಂಗ್ಸ್ ಆಡಿದರು. ಅವರ ಇನ್ನಿಂಗ್ಸ್ ನಲ್ಲಿ 8 ಬೌಂಡರಿ ಮತ್ತು 3 ಸಿಕ್ಸರ್‌ಗಳು ಸೇರಿದ್ದವು.

ತನುಷ್ ಕೋಟ್ಯಾನ್ ಕೂಡ ಅರ್ಧ ಶತಕದ ಇನ್ನಿಂಗ್ಸ್ ಆಡಿದರು. ಉಳಿದವರಿಂದ ಹೇಳಿಕೊಳ್ಳುವಂತಹ ಪ್ರದರ್ಶನ ಕಂಡುಬರಲಿಲ್ಲ. ಇನ್ನು ತನ್ನ ಮೊದಲ ಇನ್ನಿಂಗ್ಸ್ ಆರಂಭಿಸಿದ ಭಾರತ ಡಿ ತಂಡ 183 ರನ್‌ಗಳಿಗೆ ಆಲೌಟ್ ಆಗಿದೆ.

ಬಾಂಗ್ಲಾ ಮಣಿಸಲು ಚೆನ್ನೈನಲ್ಲಿ ಸಮರಾಭ್ಯಾಸ ಶುರು ಮಾಡಿದ ಟೀಂ ಇಂಡಿಯಾ

ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್: ಎರಡೂ ತಂಡಗಳಿಗೆ ಈ ಸರಣಿಯು ಅತ್ಯಂತ ಮಹತ್ವ ಎರಡೂ ತಂಡಗಳ ಸಮರಾಭ್ಯಾಸ ಶುರು

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಎರಡು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯ ಇದೇ ಸೆಪ್ಟೆಂಬರ್ 19 ರಂದು ಚೆನ್ನೈನ ಚಿದಂಬರಂ ಕ್ರೀಡಾಂಗಣದಲ್ಲಿ ಪ್ರಾರಂಭವಾಗಲಿದೆ. ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ದೃಷ್ಟಿಯಿಂದ ಎರಡೂ ತಂಡಗಳಿಗೆ ಈ ಸರಣಿಯು ಅತ್ಯಂತ ಮಹತ್ವದ್ದಾಗಿದೆ. ಹೀಗಾಗಿ ಎರಡೂ ತಂಡಗಳು ಗೆಲುವಿನ ಗುರಿಯೊಂದಿಗೆ ಸಮರಾಭ್ಯಾಸ ಶುರು ಮಾಡಿವೆ. ಸರಣಿ ಆರಂಭಕ್ಕೆ ಇನ್ನು ಒಂದು ವಾರ ಇರುವಾಗಲೇ ಟೀಂ ಇಂಡಿಯಾ ಇಂದಿನಿಂದ ಚೆನ್ನೈನಲ್ಲಿ ತನ್ನ ಅಭ್ಯಾಸ ಶಿಬಿರವನ್ನು ಆರಂಭಿಸಿದೆ.

ಗೌತಮ್ ಗಂಭೀರ್ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಮೊದಲ ಟೆಸ್ಟ್ ಸರಣಿಯಾಗಿರುವುದರಿಂದ ಗಂಭೀರ್ ಅವರಿಗೂ ಈ ಸರಣಿ ಅತ್ಯಂತ ಮಹತ್ವದ್ದಾಗಿದೆ. ಹೀಗಾಗಿ ತಂಡದ ಎಲ್ಲಾ ಆಟಗಾರರೊಂದಿಗೆ ಸಮಯ ಕಳೆಯುವ ಮೂಲಕ ಗಂಭೀರ್, ಆಟಗಾರರ ಅಭ್ಯಾಸವನ್ನು ಗಮನಿಸಿದರು. ಇನ್ನು ಈ ಅಭ್ಯಾಸ ಶಿಬಿರಕ್ಕೆ ನಾಯಕ ರೋಹಿತ್ ಶರ್ಮಾ ಮಾತ್ರವಲ್ಲದೆ ವಿರಾಟ್ ಕೊಹ್ಲಿ ಕೂಡ ಲಂಡನ್‌ನಿಂದ ನಿಗದಿತ ಸಮಯಕ್ಕೆ ಚೆನ್ನೈಗೆ ಬಂದಿಳಿದಿದ್ದಾರೆ. ಈ ಅಭ್ಯಾಸದ ಶಿಬಿರದ ಪ್ರಮುಖ ಸುದ್ದಿಯಿಂದರೇ ವಿರಾಟ್ ಕೊಹ್ಲಿ ಮತ್ತು ಬುಮ್ರಾ ನೆಟ್ಸ್‌ನಲ್ಲಿ ಬರೋಬ್ಬರಿ 45 ಕ್ಕೂ ಹೆಚ್ಚು ನಿಮಿಷಗಳ ಕಾಲ ಬೆವರಿಳಿಸಿದ್ದಾರೆ.

45 ನಿಮಿಷಗಳ ಅಭ್ಯಾಸ

ಪಿಟಿಐ ವರದಿ ಪ್ರಕಾರ, ಸುಮಾರು 45 ನಿಮಿಷಗಳ ಕಾಲ ಬ್ಯಾಟಿಂಗ್ ಅಭ್ಯಾಸ ಮಾಡಿದ ವಿರಾಟ್, ಸ್ಪಿನ್ನರ್ ಮತ್ತು ವೇಗದ ಬೌಲರ್‌ಗಳನ್ನು ಚೆನ್ನಾಗಿ ಎದುರಿಸಿದರು. ಶ್ರೀಲಂಕಾ ಸರಣಿಯ ನಂತರ ವಿರಾಟ್ ಕೊಹ್ಲಿ ಲಂಡನ್‌ಗೆ ತೆರಳಿದ್ದರು ಮತ್ತು ಅಂದಿನಿಂದ ಅವರು ಕ್ರಿಕೆಟ್‌ನಿಂದ ದೂರವಿದ್ದರು. ದುಲೀಪ್ ಟ್ರೋಫಿಯಲ್ಲೂ ವಿರಾಟ್ ಭಾಗವಹಿಸಿರಲಿಲ್ಲ. ವಿರಾಟ್ ಮಾತ್ರವಲ್ಲ, ಬುಮ್ರಾ ಕೂಡ ಅಭ್ಯಾಸದಲ್ಲಿ ಭಾಗವಹಿಸಿದ್ದು, ಅವರು ಕೂಡ ದೀರ್ಘಕಾಲ ಬೌಲಿಂಗ್ ಅಭ್ಯಾಸ ಮಾಡಿದರು. ಬುಮ್ರಾ ಕೂಡ ಟಿ20 ವಿಶ್ವಕಪ್ ಬಳಿಕ ಟೀಂ ಇಂಡಿಯಾ